ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೪೦

**ಪಟ್ಟಿ – ೧೦**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತೆಂಟನೇಯ ಮುಂದುವರೆದ ಅಧಿವೇಶನ**

**ಸೋಮವಾರ, ದಿನಾಂಕ : ೧೬ನೇ ಮಾರ್ಚ್ ೨೦೨೬**

---

## ಸಮೂಹ – I

೧. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

೨. ಇಂಧನ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು

೫. ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು

೬. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

೭. ಉನ್ನತ ಶಿಕ್ಷಣ ಸಚಿವರು

---

## ಕಾಡಾನೆ ದಾಳಿ ಕುರಿತು

**ಡಾ॥ ಆರತಿ ಕೃಷ್ಣ (ನಾಮನಿರ್ದೇಶನ ಹೊಂದಿದವರು) :–**

೧೧೫೫ (೧೩೭೮) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ/ಮೂಡಿಗೆರೆ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಮೂರು ಕಾಡಾನೆಗಳು ಹೊಲ–ಗದ್ದೆ, ತೋಟದಲ್ಲಿ ದಾಂಧಲೆ ನಡೆಸುತ್ತಿದ್ದು, ಬೆಳೆಗಳನ್ನು ಉಳಿಸಿಕೊಳ್ಳುವುದೇ ದೊಡ್ಡ ಸವಾಲಾಗಿ ಅಡಿಕೆ, ಕಾಫಿ, ಮೆಣಸು, ಬಾಳೆ ಸಂಪೂರ್ಣ ನೆಲಕಚ್ಚಿರುವ ಕುರಿತು ಗ್ರಾಮದ ಜನ ಸರ್ಕಾರಕ್ಕೆ ಆಗ್ರಹಿಸುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ; ಹಾಗಿದ್ದಲ್ಲಿ, ಗ್ರಾಮಸ್ಥರ ಕೋರಿಕೆಯನ್ನು ಸರ್ಕಾರ ಯಾವ ರೀತಿ ಪರಿಹರಿಸಬಹುದಾಗಿದೆ ;

(ಆ) ಆನೆಗಳನ್ನು ಕಂಡಾಕ್ಷಣ ಅರಣ್ಯ ಅಧಿಕಾರಿಗಳಿಗೆ ವಿಷಯ ಮುಟ್ಟಿಸಿದರೂ ಅಧಿಕಾರಿಗಳು ನಿರ್ಲಕ್ಷ್ಯ ತೋರುತ್ತಿರುವ ಕುರಿತು ಸ್ಥಳೀಯರು ಆರೋಪಿಸಿದ್ದು, ಇದಕ್ಕೆ ಶಾಶ್ವತವಾದ ಪರಿಹಾರವನ್ನು ಕಂಡುಕೊಳ್ಳಲು ಅರಣ್ಯ ಇಲಾಖೆ ಯಾವ ಕ್ರಮಗಳನ್ನು ಕೈಗೊಳ್ಳಲು ಉದ್ದೇಶಿಸಿದೆ ? (ಪೂರ್ಣ ವಿವರ ಒದಗಿಸುವುದು)

## ಮಂಗನ ಖಾಯಿಲೆ ಕುರಿತು

**ಡಾ॥ ಆರತಿ ಕೃಷ್ಣ (ನಾಮನಿರ್ದೇಶನ ಹೊಂದಿದವರು) :–**

೧೧೫೬ (೧೩೭೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಲೆನಾಡಿಗರನ್ನು ಮಂಗನ ಖಾಯಿಲೆ (Monkeypox) ಕ್ಯಾಸನೂರು ಫಾರೆಸ್ಟ್ ಡಿಸೀಸ್ (KFD) ಬಿಟ್ಟು–ಬಿಡದೇ ಕಾಡುತ್ತಿದ್ದು, ಪ್ರಸ್ತುತ ಲಸಿಕೆಯನ್ನು ಕಂಡುಹಿಡಿಯುವ ನಿಟ್ಟಿನಲ್ಲಿ ಸರ್ಕಾರ ಯಾವುದಾದರೂ ಕ್ರಮಗಳನ್ನು ಕೈಗೊಂಡಿದೆಯೇ ; ಹಾಗಿದ್ದಲ್ಲಿ, ತೆಗೆದುಕೊಂಡಿರುವ ಕ್ರಮಗಳ ವಿವರ ಒದಗಿಸುವುದು ;

(ಆ) ಈ ರೋಗ ಸಾಮಾನ್ಯವಾಗಿ ಜನವರಿಯಿಂದ ಜೂನ್‌ರವರೆಗೆ ಮಾತ್ರ ಕಾಣಿಸಿಕೊಳ್ಳುತ್ತಿರುವುದರಿಂದ ಈ ಅವಧಿಯಲ್ಲಿ ಯಾವ ಮುನ್ನೆಚ್ಚರಿಕಾ ಕ್ರಮಗಳನ್ನು ಸರ್ಕಾರ ಕೈಗೊಳ್ಳಲಾರಂಭಿಸಿದೆ ?

## ಸರ್ಕಾರಿ ಶಾಲೆಗಳಿಗೆ ಒದಗಿಸುವ ಮೂಲಸೌಕರ್ಯ ಮತ್ತು ಸೌಲಭ್ಯಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೫೭ (೧೪೦೭) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಸದರಿ ಶಾಲೆಗಳಲ್ಲಿ ಎಷ್ಟು ಶಾಲೆಗಳಲ್ಲಿ ಶೌಚಾಲಯ, ಕುಡಿಯುವ ನೀರು ಮತ್ತು ವಿದ್ಯುತ್ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ ; ಬಂದಿದ್ದಲ್ಲಿ, ಸದರಿ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳು ಯಾವುವು ;

(ಇ) ಸರ್ಕಾರಿ ಶಾಲೆಗಳಲ್ಲಿ ಸ್ಮಾರ್ಟ್ ಕ್ಲಾಸ್‌ರೂಮ್ ವ್ಯವಸ್ಥೆ ಜಾರಿಯಲ್ಲಿದೆಯೇ ; ಇದ್ದಲ್ಲಿ, ಎಷ್ಟು ಶಾಲೆಗಳಲ್ಲಿ ಈ ವ್ಯವಸ್ಥೆ ಕಲ್ಪಿಸಲಾಗಿದೆ ; ಬಾಕಿ ಇರುವ ಶಾಲೆಗಳಿಗೆ ಯಾವ ಕಾಲಮಿತಿಯೊಳಗೆ ಸ್ಮಾರ್ಟ್ ಕ್ಲಾಸ್‌ರೂಮ್ ವ್ಯವಸ್ಥೆ ಕಲ್ಪಿಸಲಾಗುವುದು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಕಟ್ಟಡ ರಹಿತ (Building-less) ಅಥವಾ ಅಪಾಯಕರ ಸ್ಥಿತಿಯಲ್ಲಿರುವ ಶಾಲೆಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ವೈದ್ಯಕೀಯ ಕಾಲೇಜುಗಳು ಮತ್ತು ಆಸ್ಪತ್ರೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೫೮ (೧೪೦೮) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು ; ಸದರಿ ಕಾಲೇಜುಗಳಲ್ಲಿ ಬಹುತೇಕ ಕಾಲೇಜುಗಳಿಗೆ ಮೂಲಸೌಕರ್ಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ. ತೆಗೆದುಕೊಂಡ ಕ್ರಮಗಳು ಯಾವುವು ;

(ಆ) ಸಂಯೋಜಿತ ಆಸ್ಪತ್ರೆಗಳಲ್ಲಿ (Teaching Hopitals) ಹಾಸಿಗೆಗಳ ಮತ್ತು ವೈದ್ಯರ ಹುದ್ದೆಗಳ ಕೊರತೆಗಳ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳಾವುವು ;

(ಇ) ವೈದ್ಯಕೀಯ ಕಾಲೇಜುಗಳಿಗೆ ಸಂಯೋಜಿತ ಆಸ್ಪತ್ರೆಗಳಲ್ಲಿ ಉಪಕರಣಗಳ ಕೊರತೆ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಹೊಸ ವೈದ್ಯಕೀಯ ಕಾಲೇಜುಗಳ ಸ್ಥಾಪನೆಗೆ ಸರ್ಕಾರದ ಯೋಜನೆಗಳು ಯಾವುವು? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ಕೌಶಲ್ಯಾಭಿವೃದ್ಧಿ ಯೋಜನೆಯಡಿ ತರಬೇತಿ ಮತ್ತು ಉದ್ಯೋಗದ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೫೯ (೧೪೦೯) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಜಾರಿಯಲ್ಲಿರುವ ಕೌಶಲ್ಯಾಭಿವೃದ್ಧಿ ಯೋಜನೆಗಳು ಯಾವುವು ; (ಯೋಜನಾವಾರು ಮಾಹಿತಿ ಒದಗಿಸುವುದು)

(ಆ) ಕಳೆದ ೩ ವರ್ಷಗಳಲ್ಲಿ ಇಲಾಖೆಗೆ ಮೀಸಲಿಟ್ಟ ಅನುದಾನವೆಷ್ಟು ; ಖರ್ಚು ಮಾಡಲಾದ ಅನುದಾನವೆಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಕಳೆದ ೩ ವರ್ಷಗಳಲ್ಲಿ ಕೌಶಲ್ಯಾಭಿವೃದ್ಧಿ ಯೋಜನೆಯಡಿ ಎಷ್ಟು ಅಭ್ಯರ್ಥಿಗಳು ತರಬೇತಿ ಪಡೆದಿದ್ದಾರೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಈ) ಸದರಿ ಯೋಜನೆಯಡಿ ತರಬೇತಿ ಪಡೆದವರಲ್ಲಿ ಉದ್ಯೋಗ ಪಡೆದವರ ಪ್ರಮಾಣ ಎಷ್ಟು ?

## ಅನ್ನಭಾಗ್ಯ ಯೋಜನೆ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೬೦ (೧೪೧೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನ್ನಭಾಗ್ಯ ಯೋಜನೆ ಅಡಿಯಲ್ಲಿ ಪ್ರತಿ ತಿಂಗಳು ವಿತರಿಸಲಾಗುವ ಅಕ್ಕಿಯ ಪ್ರಮಾಣ ಎಷ್ಟು ; ಅದಕ್ಕೆ ಖರ್ಚು ಮಾಡಲಾಗುತ್ತಿರುವ ಮೊತ್ತ ಎಷ್ಟು ;

(ಆ) ಕಳೆದ ಆರ್ಥಿಕ ವರ್ಷದಲ್ಲಿ ಸದರಿ ಯೋಜನೆಗಾಗಿ ಸರ್ಕಾರ ಎಷ್ಟು ಅನುದಾನ ಮೀಸಲಿಡಲಾಗಿದೆ ;

(ಇ) ಕೇಂದ್ರ ಸರ್ಕಾರಿಂದ ದೊರೆಯುವ ಧಾನ್ಯ ಮತ್ತು ರಾಜ್ಯ ಸರ್ಕಾರ ಖರೀದಿಸುವ ಧಾನ್ಯಗಳ ಪ್ರಮಾಣವೆಷ್ಟು ;

(ಈ) ಯೋಜನೆ ಜಾರಿಗೆ ಸಂಬಂಧಿಸಿದಂತೆ ಎದುರಾಗಿರುವ ಸವಾಲುಗಳು ಯಾವುವು ?

## ಹೊಸ ವಿದ್ಯುತ್ ಉಪ ವಿಭಾಗವನ್ನು ತೆರೆಯುವ ಬಗ್ಗೆ

**ಶ್ರೀ ಎಂ. ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೬೧ (೧೩೪೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇಂಧನ ಇಲಾಖೆಯಿಂದ ಹೊಸ ವಿದ್ಯುತ್ ಉಪ ವಿಭಾಗವನ್ನು ತೆರೆಯಲು ಇರುವ ಮಾನದಂಡವೇನು ; (ಪೂರ್ಣ ಮಾಹಿತಿ ನೀಡುವುದು)

(ಆ) ಕೋಲಾರ ತಾಲ್ಲೂಕಿನಲ್ಲಿ ಹೊಸದಾಗಿ ವಿದ್ಯುತ್ ಉಪ ವಿಭಾಗವನ್ನು ತೆರೆಯಲು ಪ್ರಸ್ತಾವನೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಪ್ರಸ್ತಾವನೆಯು ಯಾವ ಹಂತದಲ್ಲಿದೆ ; ಯಾವ ಕಾಲಮಿತಿಯೊಳಗೆ ವಿದ್ಯುತ್ ಉಪ ವಿಭಾಗವನ್ನು ತೆರೆಯುಲಾಗುವುದು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಇ) ಕೋಲಾರ ತಾಲ್ಲೂಕಿನಲ್ಲಿ ಈವರೆಗೂ ಇರುವ ವಿದ್ಯುತ್ ಉಪ ವಿಭಾಗಗಳೆಷ್ಟು ; ಸದರಿ ಉಪ ವಿಭಾಗಗಳಲ್ಲಿ ಅಗತ್ಯ ಸಿಬ್ಬಂದಿ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ? (ಸಂಪೂರ್ಣವಾದ ಮಾಹಿತಿ ನೀಡುವುದು)

# ರೈಲ್ವೆ ಬ್ಯಾರಿಕೇಡ್ ಕಾಮಗಾರಿಗಳ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೬೨ (೧೪೩೦) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಅರಣ್ಯ ಅಂಚಿನ ಪ್ರದೇಶಗಳಲ್ಲಿ ಕಾಡುಪ್ರಾಣಿಗಳ ಹಾವಳಿಯಿಂದ ರೈತರ ಜೀವ ಹಾನಿ ಹಾಗೂ ಬೆಳೆ ಹಾನಿ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿರುವುದು ಮತ್ತು ಇವುಗಳನ್ನು ತಡೆಗಟ್ಟಲು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಲ್ಲಿ ಸರ್ಕಾರ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಾಡು ಪ್ರಾಣಿಗಳ ದಾಳಿಯಿಂದ ಮೃತಪಟ್ಟ ರೈತರ ಕುಟುಂಬಗಳಿಗೆ ಹಾಗೂ ಬೆಳೆ ಹಾನಿಗೊಳಗಾದ ರೈತರಿಗೆ ನೀಡಬೇಕಾದ ಪರಿಹಾರ ಧನವನ್ನು ವಿತರಿಸುವಲ್ಲಿ ವಿಪರೀತ ವಿಳಂಬವಾಗುತ್ತಿರುವುದು ನಿಜವೇ ; ಕಳೆದ ಒಂದು ವರ್ಷದಲ್ಲಿ ಎಷ್ಟು ಪ್ರಕರಣಗಳಲ್ಲಿ ಪರಿಹಾರ ಬಾಕಿ ಉಳಿದಿದೆ ಮತ್ತು ಅದಕ್ಕೆ ಕಾರಣಗಳೇನು ; (ಜಿಲ್ಲಾವಾರು ಮತ್ತು ಮೊತ್ತದ ವಿವರ ನೀಡುವುದು)

(ಇ) ಕಾಡಾನೆಗಳ ಹಾವಳಿ ತಡೆಗಟ್ಟಲು ಅತ್ಯಂತ ಪರಿಣಾಮಕಾರಿಯಾಗಿದ್ದ ರೈಲ್ವೆ ಬಾರಿಕೇಡ್ ನಿರ್ಮಾಣ ಕಾಮಗಾರಿಯನ್ನು ರಾಜ್ಯಾದ್ಯಂತ ಅರ್ಧಕ್ಕೆ ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸದರಿ ರೈಲ್ವೆ ಬ್ಯಾರಿಕೇಡ್ ಕಾಮಗಾರಿಯನ್ನು ಸ್ಥಗಿತಗೊಳಿಸಲು ಪ್ರಬಲ ಕಾರಣಗಳೇನು ; ಈ ಯೋಜನೆಗೆ ಅನುದಾನದ ಕೊರತೆ

ಇದೆಯೇ ; ಅಥವಾ ಆಡಳಿತಾತ್ಮಕ ನಿರ್ಲಕ್ಷವೇ ; (ಯೋಜನೆಯ ಒಟ್ಟು ವೆಚ್ಚ ಮತ್ತು ಬಾಕಿ ಇರುವ ಕಾಮಗಾರಿಯ ವಿವರ ನೀಡುವುದು)

(ಉ) ರೈತರ ಹಿತದೃಷ್ಟಿಯಿಂದ ನಿಂತು ಹೋಗಿರುವ ರೈಲ್ವೆ ಬ್ಯಾರಿಕೇಡ್ ನಿರ್ಮಾಣವನ್ನು ಯಾವಾಗ ಪುನಾರಂಭಿಸಲಾಗುವುದು ; ಕಾಡು ಪ್ರಾಣಿಗಳು ನಾಡಿಗೆ ಬರದಂತೆ ತಡೆಯಲು ಸೋಲಾರ್ ಬೇಲಿ ಅಥವಾ ಹ್ಯಾಂಗಿಂಗ್ ಫೆನ್ಸಿಂಗ್ ಅಂತ ಪರ್ಯಾಯ ಯೋಜನೆಗಳನ್ನು ಜಾರಿಗೆ ತರಲು ಸರ್ಕಾರ ರೂಪಿಸಿರುವ ಕಾರ್ಯ ಯೋಜನೆಗಳೇನು ? (ವಿವರ ನೀಡುವುದು)

## ಮರಗಳ ಗಣತಿ ಮಾಡುವ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೬೩ (೧೪೩೧) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿಬಿಎಂಪಿ ವ್ಯಾಪ್ತಿಯಲ್ಲಿರುವ ಮರಗಳನ್ನು ಎಷ್ಟು ವರ್ಷಗಳಿಗೊಮ್ಮೆ ಮರಗಳ ಗಣತಿ ಕಾರ್ಯ ಮಾಡಲಾಗುತ್ತದೆ ;

(ಆ) ಕಳೆದ ಮೂರು ವರ್ಷಗಳಲ್ಲಿ ಬಿಬಿಎಂಪಿ ವ್ಯಾಪ್ತಿಯಲ್ಲಿರುವ ಮರಗಳನ್ನು ಮರಗಣತಿ ಮಾಡಲು ಯಾವ ಯಾವ ಕಂಪನಿಗಳಲ್ಲಿ ಗುತ್ತಿಗೆ ನೀಡಲಾಗಿದೆ ; ಗುತ್ತಿಗೆ ಕಾರ್ಯಾದೇಶದ ಪ್ರತಿ ನೀಡುವುದು ;

(ಇ) ಬಿಬಿಎಂಪಿ ವ್ಯಾಪ್ತಿಯಲ್ಲಿರುವ ಮರಗಳನ್ನು ಮರಗಣತಿ ಮಾಡಲು ಬಿಬಿಎಂಪಿ ಅರಣ್ಯ ವಿಭಾಗವು ಖರ್ಚು ಮಾಡಿದ ಮೊತ್ತ ಎಷ್ಟು ? (ಕಳೆದ ೩ ವರ್ಷದ ಮಾಹಿತಿ ನೀಡುವುದು)

## ೧೦೮ ಆಂಬ್ಯುಲೆನ್ಸ್‌ಗಳ ಕಾರ್ಯನಿರ್ವಹಣೆ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೬೪ (೧೪೩೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ೧೦೮ ಆಂಬ್ಯುಲೆನ್ಸ್‌ಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಈವರೆಗೂ ಎಷ್ಟು ಆಂಬ್ಯುಲೆನ್ಸ್ ಖರೀದಿ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಕೆಲಸ ನಿರ್ವಹಿಸುತ್ತಿರುವ ಆಂಬ್ಯುಲೆನ್ಸ್ ವಾಹನ ಚಾಲಕರಿಗೆ ತಿಂಗಳಿಗೆ ಎಷ್ಟು ಸಂಬಳ ನೀಡಲಾಗುತ್ತಿದೆ ; ಮತ್ತು ಅವರು ಎಷ್ಟು ಗಂಟೆ ಕೆಲಸ ನಿರ್ವಹಿಸಬೇಕು ;

(ಈ) ರಾಜ್ಯದಲ್ಲಿ ಈವರೆಗೂ ಕಾರ್ಯನಿರ್ವಹಿಸದೆ ಇರುವ (ದುರಸ್ತಿಯಾಗಿರುವ) ೧೦೮ ಆಂಬ್ಯುಲೆನ್ಸ್‌ಗಳ ಸಂಖ್ಯೆ ಎಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ಪ್ರೌಢ ಶಾಲೆಯ "ಡಿ" ದರ್ಜೆ ನೌಕರರ ಬಗ್ಗೆ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೬೫ (೧೩೧೪) ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರೌಢ ಶಾಲೆಗಳಲ್ಲಿ ಮಂಜೂರಾದ "ಡಿ" ದರ್ಜೆ ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇದರಲ್ಲಿ, ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ಹಾಗೂ ಖಾಲಿ ಇರುವ ಹುದ್ದೆಗಳು ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; ಇದ್ದಲ್ಲಿ, ಯಾವಾಗ ಭರ್ತಿ ಮಾಡಲಾಗುವುದು ?

## ಉರ್ದು ಭಾಷೆಯ ಬಗ್ಗೆ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೬೬ (೧೩೧೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉರ್ದು ಶಾಸ್ತ್ರೀಯ ಭಾಷೆಯಾಗಿರುವುದರಿಂದ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು ಮತ್ತು ಸರ್ಕಾರಿ ಕಾಲೇಜುಗಳಲ್ಲಿ ಉರ್ದು ವಿಷಯಕ್ಕೆ ಕನಿಷ್ಠ ೫ ವಿದ್ಯಾರ್ಥಿಗಳಿದ್ದರೂ ಸಾಕು ಎಂಬ ನಿಯಮವನ್ನು ಜಾರಿಗೊಳಿಸಲಾಗುವುದೇ ;

(ಆ) ಉರ್ದು ಇಲಾಖೆಯಗಳಲ್ಲಿ ಶಾಶ್ವತ ಉಪನ್ಯಾಸಕರನ್ನು ತಕ್ಷಣ ನೇಮಕ ಮಾಡಿಕೊಳ್ಳಲಾಗುವುದೇ ;

(ಇ) ಸಂಶೋಧನಾ ಮಾರ್ಗದರ್ಶಕರ ಕೊರತೆಯನ್ನು ನೀಗಿಸಿ ಹೆಚ್ಚಿನ ಸಂಖ್ಯೆಯಲ್ಲಿ ಪಿ.ಹೆಚ್.ಡಿ ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಗುವುದೇ ;

(ಈ) "ವರ್ಕ್‌ಲೋಡ್ ಇಲ್ಲ" ಎಂದು ಕಾರಣ ಅತಿಥಿ ಉಪನ್ಯಾಸಕರ ಸಂಖ್ಯೆಯುನ್ನು ಕಡಿಮೆ ಮಾಡುವುದನ್ನು ಸಂಪೂರ್ಣ ನಿಲ್ಲಿಸಲಾಗುವುದೇ ;

(ಉ) ಉರ್ದು ಭಾಷೆ ಬೋಧನೆ ಮತ್ತು ಸಂಶೋಧನೆಯುನ್ನು ಬಲಪಡಿಸಲು ಯಾವೆಲ್ಲ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ?

## ಸರ್ಕಾರಿ ಶಾಲೆಗಳ ಶೌಚಾಲಯಗಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೬೭ (೧೪೮೦) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳು ಎಷ್ಟು; ಇದರಲ್ಲಿ ಎಷ್ಟು ಶಾಲೆಗಳಿಗೆ ಶೌಚಾಲಯಗಳ ವ್ಯವಸ್ಥೆ ಕಲ್ಪಿಸಲಾಗಿದೆ ;

(ಆ) ಶಾಲೆಗಳ ಶೌಚಾಲಯಗಳ ನಿರ್ವಹಣೆಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; ಒಂದು ಶೌಚಾಲಯ ನಿರ್ವಹಣೆಗೆ ಸರ್ಕಾರ ವಾರ್ಷಿಕ ಎಷ್ಟು ಅನುದಾನ ನೀಡುತ್ತಿದೆ ;

(ಇ) ಶಾಲಾ ಮಕ್ಕಳಿಂದ ಕೆಲವು ಶಾಲೆಗಳಲ್ಲಿ ಶೌಚಾಲಯಗಳನ್ನು ಸ್ವಚ್ಛ ಮಾಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರದ ಕ್ರಮವೇನು ;

(ಈ) ಶೌಚಾಲಯಗಳಲ್ಲಿ ಶುಚಿತ್ವ ಕಾಪಾಡದೆ ಮಕ್ಕಳಿಗೆ ಅನಾರೋಗ್ಯ ಹಾಗೂ ಇನ್ನಿತರೆ ತೊಂದರೆಗಳು ಅಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಶೌಚಾಲಯಗಳಲ್ಲಿ ಶುಚಿತ್ವ ಕಾಪಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿಗೆ ಸರ್ಕಾರಿ ಡಿಪ್ಲೋಮಾ ಕಾಲೇಜು ಮಂಜೂರು ಮಾಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೬೮ (೧೩೪೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದಿಂದ ಹೊಸ ಡಿಪ್ಲೋಮಾ ಕಾಲೇಜುಗಳನ್ನು ಮಂಜೂರು ಮಾಡಲು ಇರುವ ಮಾನದಂಡಗಳೇನು ;

(ಆ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಅತಿ ಹೆಚ್ಚು ಶಿಕ್ಷಣ ಸಂಸ್ಥೆಗಳನ್ನು ಹೊಂದಿರುವ ಸಿಂಧನೂರು ತಾಲ್ಲೂಕಿಗೆ ಇವರಿಗೂ ಸರ್ಕಾರದಿಂದ ಡಿಪ್ಲೋಮಾ ಕಾಲೇಜು ಮಂಜೂರಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಶೈಕ್ಷಣಿಕವಾಗಿ ಮುಂದುವರೆಯುತ್ತಿರುವ ಸಿಂಧನೂರು ತಾಲ್ಲೂಕಿಗೆ ಡಿಪ್ಲೋಮಾ ಕಾಲೇಜನ್ನು ಮಂಜೂರು ಮಾಡಲು ಅಗತ್ಯವಿರುವ ಮಾನದಂಡಗಳೇನು ;

(ಈ) ಯಾವ ಕಾಲಮಿತಿಯೊಳಗೆ ಸರ್ಕಾರದಿಂದ ಸಿಂಧನೂರು ತಾಲ್ಲೂಕಿನಲ್ಲಿ ಡಿಪ್ಲೋಮಾ ಕಾಲೇಜನ್ನು ತೆರೆಯಲಾಗುವುದು ?

## ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿಗೆ ಐ.ಟಿ.ಐ ಕಾಲೇಜನ್ನು ಮಂಜೂರು ಮಾಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೬೯ (೧೩೪೮) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಅತಿ ಹೆಚ್ಚು ಶಿಕ್ಷಣ ಸಂಸ್ಥೆಗಳನ್ನು ಹೊಂದಿರುವ ಸಿಂಧನೂರು ತಾಲ್ಲೂಕಿನಲ್ಲಿ ಈವರೆಗೆ ಸರ್ಕಾರಿ ಐ.ಟಿ.ಐ ಕಾಲೇಜು ಮಂಜೂರಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸರ್ಕಾರಿ ಐ.ಟಿ.ಐ ಕಾಲೇಜನ್ನು ಮಂಜೂರು ಮಾಡಲು ಸರ್ಕಾರದಿಂದ ಅನುಸರಿಸಲಾಗುತ್ತಿರುವ ಮಾನದಂಡಗಳೇನು ;

(ಇ) ಶೈಕ್ಷಣಿಕವಾಗಿ ಮುಂದುವರೆಯುತ್ತಿರುವ ಸಿಂಧನೂರು ತಾಲ್ಲೂಕಿಗೆ ಯಾವ ಕಾಲಮಿತಿಯೊಳಗೆ ಸರ್ಕಾರದಿಂದ ಐ.ಟಿ.ಐ ಕಾಲೇಜು ಮಂಜೂರು ಮಾಡಲಾಗುವುದು ?

## ಸಿಂಧನೂರು ನಗರಕ್ಕೆ ೧೧೦/೧೧ ಕೆ.ವಿ. ವಿದ್ಯುತ್ ಉಪ ಸ್ಟೇಷನ್ ಸ್ಥಾಪಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೭೦ (೧೩೪೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ನಗರಕ್ಕೆ ೧೧೦/೧೧ ಕೆ.ವಿ. ವಿದ್ಯುತ್ ಉಪ ಸ್ಟೇಷನ್ ಸ್ಥಾಪಿಸುವ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಹಾಗೂ ಈ ಕುರಿತು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ; ಇದ್ದಲ್ಲಿ, ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ಯಾವ ಕಾಲಮಿತಿಯೊಳಗೆ ಸಿಂಧನೂರು ನಗರದಲ್ಲಿ ಇಂಧನ ಇಲಾಖೆಯಿಂದ ೧೧೦/೧೧ ಕೆ.ವಿ.ವಿದ್ಯುತ್ ಉಪ ಸ್ಟೇಷನ್ ನಿರ್ಮಾಣ ಮಾಡಲಾಗುವುದು ?

## ಸಿಂಧನೂರು ತಾಲ್ಲೂಕಿನಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೭೧ (೧೩೫೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿಗೆ ಮಂಜೂರಾಗಿರುವ ಸರ್ಕಾರಿ ವೈದ್ಯರ ಹುದ್ದೆಗಳು ಎಷ್ಟು ಹಾಗೂ ಅದರಲ್ಲಿ ಖಾಲಿ ಇರುವ ವೈದ್ಯರ ಸಂಖ್ಯೆ ಎಷ್ಟು ;

(ಆ) ತಾಲ್ಲೂಕಿನ ಸರ್ಕಾರಿ ಆಸ್ಪತ್ರೆಯಲ್ಲಿ ೨೪x೭ ತುರ್ತು ಸೇವೆ ಲಭ್ಯವಿದೆಯೇ ;

(ಇ) ಯಾವ ಕಾಲಮಿತಿಯೊಳಗೆ ಸರ್ಕಾರದಿಂದ ಖಾಲಿಯಿರುವ ವೈದ್ಯರ ಹುದ್ದೆಗಳ ನೇಮಕವಾಗುತ್ತದೆ ?

## ಸಿಂಧನೂರು ತಾಲ್ಲೂಕಿನ ನ್ಯಾಯ ಬೆಲೆ ಅಂಗಡಿಗಳ ಕುರಿತು

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೭೨ (೧೩೫೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನಲ್ಲಿ ಒಟ್ಟು ಎಷ್ಟು ನ್ಯಾಯಬೆಲೆ ಅಂಗಡಿಗಳು ಕಾರ್ಯನಿರ್ವಹಿಸುತ್ತಿವೆ ;

(ಆ) ಕಳೆದ ಒಂದು ವರ್ಷದಲ್ಲಿ ಸರ್ಕಾರದಿಂದ ವಿತರಿಸಲಾಗುವ ಆಹಾರ ಧಾನ್ಯಗಳಲ್ಲಿ ಕಡಿಮೆ ತೂಕ/ ಮೋಸ ಕುರಿತು ನೀಡಲಾಗಿರುವ ದೂರುಗಳ ಸಂಖ್ಯೆ ಎಷ್ಟು ;

(ಇ) ಕಳೆದ ಒಂದು ವರ್ಷದಲ್ಲಿ ಎಷ್ಟು ಅಂಗಡಿಗಳ ಮೇಲೆ ಪರಿಶೀಲನೆ/ ಶಿಸ್ತು ಕ್ರಮ ಕೈಗೊಳ್ಳಲಾಗಿದೆ ;

(ಈ) ನ್ಯಾಯಬೆಲೆ ಅಂಗಡಿಗಳ ಡಿಜಿಟಲ್ ಮಾನಿಟರಿಂಗ್ ವ್ಯವಸ್ಥೆ ಪರಿಣಾಮಕಾರಿಯಾಗಿ ಜಾರಿಯಲ್ಲಿದೆಯೇ ? (ವಿವರಗಳನ್ನು ನೀಡುವುದು)

## ನಿವೃತ್ತ ನೌಕರರಿಗೆ ಗಳಿಕೆ ರಜೆ ನಗದೀಕರಣ ನೀಡುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೧೧೭೩ (೧೪೪೮) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಲ್ಲಿ ಕಾರ್ಯನಿರ್ವಹಿಸಿ ೨೦೨೪ ಮತ್ತು ೨೦೨೫ ನೇ ಸಾಲಿನಲ್ಲಿ ನಿವೃತ್ತರಾದ ನೌಕರರ ಸಂಖ್ಯೆ ಎಷ್ಟು ;

(ಆ) ಹಲವು ನೌಕರರು ನಿವೃತ್ತರಾಗಿ ತಿಂಗಳುಗಳೇ ಕಳೆದರೂ, ಅವರ ಹಕ್ಕಿನಲ್ಲಿ ಇರುವ ಗಳಿಕೆ ರಜೆ ಅಭ್ಯರ್ಪಿಸಿ ನಗದೀಕರಣ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ನೌಕರರಿಗೆ ಗಳಿಕೆ ರಜೆ ನಗದೀಕರಣ ಸೌಲಭ್ಯ ನೀಡಿರುವುದಿಲ್ಲ ;

(ಇ) ಹಲವು ಡಯಟ್ ಪ್ರಾಂಶುಪಾಲರು ಅನುದಾನ ಬಿಡುಗಡೆ ಮಾಡುವಂತೆ ಸರ್ಕಾರಕ್ಕೆ ಪತ್ರ ಬರೆದಿದ್ದಾರೆಯೇ ; ಬರೆದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮವೇನು ;

(ಈ) ಯಾವ ಕಾಲಮಿತಿಯಲ್ಲಿ ಅನುದಾನ ಬಿಡುಗಡೆ ಮಾಡಲಾಗುವುದು ?

## ಅರಣ್ಯ ಕೃಷಿಗೆ ನೀಡುತ್ತಿರುವ ಪ್ರೋತ್ಸಾಹದ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೧೧೭೪ (೧೪೪೯) ಮಾನ್ಯ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅರಣ್ಯ ಕೃಷಿ ಪ್ರೋತ್ಸಾಹಿಸಲು ಸರ್ಕಾರ ರೈತರಿಗೆ ನೀಡುವ ಸಹಾಯವೇನು ;

(ಆ) ಯಾವ ವಿಧದ ಮರಗಳನ್ನು ಅರಣ್ಯ ಕೃಷಿಗೆ ಉಚಿತವಾಗಿ ನೀಡಲಾಗುವುದು ; ಸದರಿ ಮರಗಳ ಪೋಷಣೆಗೆ ಸರ್ಕಾರ ನೀಡುವ ಪ್ರೋತ್ಸಾಹ ಧನವೆಷ್ಟು ; ಸದರಿ ಮರಗಳನ್ನು ಎಷ್ಟು ವರ್ಷಗಳ ನಂತರ ಕಟಾವು ಮಾಡಬಹುದು ;

(ಇ) ಕಡಿಮೆ ಅವಧಿಗೆ ಕಟಾವಿಗೆ ಬರುವ ಮತ್ತು ಕಡಿಮೆ ಆರೈಕೆ ಬೇಡುವ ಮರಗಳು ಯಾವುವು ;

(ಈ) ಸದರಿ ಮರಗಳ ಕಟಾವಿಗೆ ಇರುವ ನಿಯಮವೇನು ; ಮರ ಕಡಿಯಲು ರೈತರಿಗೆ ಅನುಮತಿಯನ್ನು ನೀಡಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ ;

(ಉ) ಅರಣ್ಯ ಕೃಷಿಯಲ್ಲಿ ಬೆಳೆದ ಮರಗಳನ್ನು ಸರ್ಕಾರವೇ ಬೆಂಬಲ ಬೆಲೆ ನೀಡಿ ಖರೀದಿಸುವುದೇ ; ಖರೀದಿಸುವುದಿದ್ದರೆ, ನೀಡುವ ಬೆಂಬಲ ಬೆಲೆ ಎಷ್ಟು ?

## ಸರ್ಕಾರದಿಂದ ಅನುಮತಿ ಪಡೆದ ಖಾಸಗಿ ವಿಶ್ವವಿದ್ಯಾಲಯಗಳ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೭೫ (೧೪೫೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದಿಂದ ಬೆಂಗಳೂರು ನಗರ ಜಿಲ್ಲೆಗಳಲ್ಲಿ ಅನುಮತಿ ಪಡೆದು ಖಾಸಗಿ ವಿಶ್ವವಿದ್ಯಾನಿಲಯಗಳು (Private University) ಮತ್ತು ಚಾರಿಟಬಲ್ ಸೊಸೈಟಿ ಸಂಸ್ಥೆಯಾಗಿ ನೋಂದಣಿಗೊಂಡಿರುವ ಸಂಸ್ಥೆಗಳು ಮತ್ತು ವಿಶ್ವವಿದ್ಯಾಲಯಗಳು ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಸರ್ಕಾರದಿಂದ ಅನೇಕ ಲಾಭಗಳನ್ನು ಈ ಸಂಸ್ಥೆಗಳು ಪಡಿದಿರುತ್ತದೆ ಮತ್ತು ಇತ್ತೀಚಿಗೆ ಆದಾಯ ತೆರಿಗೆ ಇಲಾಖೆಯು ದಾಳಿ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಈ ಸಂಸ್ಥೆಗಳಲ್ಲಿ ಖಾಸಗಿ ಕ್ಷೇತ್ರದಲ್ಲಿ ಸೇವೆ ಸಲ್ಲಿಸುವವರನ್ನು ವಿಶ್ವವಿದ್ಯಾನಿಲಯದ ಡೀನ್ (Dean) ಹುದ್ದೆಗೆ ನೇಮಕ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಈ) ಖಾಸಗಿ ವಿಶ್ವವಿದ್ಯಾನಿಲಯ ಡೀನ್ ಹುದ್ದೆಗಳ ನೇಮಕಾತಿಗೆ ಯಾವ ಯಾವ ಮಾನದಂಡಗಳನ್ನು ನಿಗದಿಪಡಿಸಿದೆ ;

(ಉ) ಶಿಕ್ಷಣ ಕ್ಷೇತ್ರದಲ್ಲಿ ಯಾವುದೇ ಅನುಭವವಿಲ್ಲದೆ ಮತ್ತು ಯಾವುದೇ ಪರೀಕ್ಷೆ ಬರೆಯದೇ UGC, NET ಮತ್ತು KSET ಈ ತರಹ ಪರೀಕ್ಷೆಗಳನ್ನು ಬರೆಯದೇ ಡೀನ್ ಆಗಿರುವುದು ವಿದ್ಯಾರ್ಥಿಗಳ ಭವಿಷ್ಯಗಳ ಮೇಲೆ ದುಷ್ಪರಿಣಾಮ ಬೀರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಂಡಿದೆ ? (ವಿವರ ನೀಡುವುದು)

## ಬೆಂಗಳೂರು ನಗರ ಜಿಲ್ಲೆಗಳಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೭೬ (೧೪೫೨) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆಗಳಲ್ಲಿ ಪ್ರಸ್ತುತ ಇರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ;(ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಬಹುತೇಕ ಶಾಲೆಗಳಲ್ಲಿ ಪೀಠೋಪಕರಣಗಳ ಸೌಕರ್ಯಗಳಿಲ್ಲದೆ ಹಾಗೂ ಮಕ್ಕಳಿಗೆ ಕೂರಲು ಕೊಠಡಿಗಳಿಲ್ಲದೇ ಮತ್ತು ಕಂಪ್ಯೂಟರ್ ಕೊರತೆ ಅಂತಹ ತರಗತಿಗಳಲ್ಲಿ ಮಕ್ಕಳು ಕುಳಿತು ಪಾಠ ಕೇಳುವ ಪರಿಸ್ಥಿತಿ ನಿರ್ಮಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಇ) ಸರ್ಕಾರಿ ಹಾಗೂ ಖಾಸಗಿ ಶಾಲೆಗಳಲ್ಲಿ ಶಿಕ್ಷಕರುಗಳ ಸಂಖ್ಯೆ ಕಡಿಮೆ ಇದ್ದರೂ ಸಹ ಸಾಮರ್ಥ್ಯಕ್ಕೂ ಮೀರಿ ಶಾಲೆ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಈ) ಸರ್ಕಾರಿ ಹಾಗೂ ಖಾಸಗಿ ಶಾಲೆಗಳಲ್ಲಿ ಎಷ್ಟು ಮಕ್ಕಳಿಗೆ ಒಬ್ಬ ಶಿಕ್ಷಕರನ್ನು ನೇಮಿಸಬೇಕೆಂಬ ಮಾನದಂಡಗಳನ್ನು ರೂಪಿಸಲಾಗಿದೆ ? (ವಿವರ ನೀಡುವುದು)

## ಇಂಧನ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೭೭ (೧೪೫೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮತ್ತು ವಿಶೇಷವಾಗಿ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಇಂಧನ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯದ ಇಂಧನ ಇಲಾಖೆಗೆ ಅವಶ್ಯವಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಖಾಲಿ ಇರುವ ಸಿಬ್ಬಂದಿಗಳು ಆತ್ಯವಶ್ಯಕವಾಗಿರುವುದರಿಂದ ಖಾಲಿ ಇರುವ ಸಿಬ್ಬಂದಿಗಳನ್ನು ಯಾವ ಕಾಲಮಿತಿಯೊಳಗೆ ನೇಮಕ ಮಾಡಲಾಗುವುದು ; (ವಿವರ ನೀಡುವುದು)

(ಈ) ಅವಶ್ಯವಿರುವ ಇಂಜಿನಿಯರ್ ಹುದ್ದೆಗಳು ಮತ್ತು ಇತರೆ ಬೇರೆ ಹುದ್ದೆಗಳಿಗೆ ಸ್ಥಳೀಯವಾಗಿ ಲಭ್ಯವಿರುವ ಅಭ್ಯರ್ಥಿಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳುವ ಚಿಂತನೆ ಸರ್ಕಾರ ನಡೆಸಿದೆಯೇ ; ಇದ್ದಲ್ಲಿ, ವಿವರ ನೀಡುವುದು ?

# ಒ.ಸಿ ಮತ್ತು ಸಿ.ಸಿ ಇಲ್ಲದ ಕಾರಣ ವಿದ್ಯುತ್ ಸಂಪರ್ಕ ಸಿಗದೆ ಇರುವ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೭೮ (೧೪೫೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫ನೇ ಸಾಲಿನಲ್ಲಿ ವಿದ್ಯುತ್ ಸಂಪರ್ಕ ಕೋರಿ ಹೆಸ್ಕಾಂಗಳಿಗೆ ಬಂದ ಅರ್ಜಿಗಳ ಸಂಖ್ಯೆ ಎಷ್ಟು ; (ಹೆಸ್ಕಾಂವಾರು ವಿವರ ನೀಡುವುದು)

(ಆ) ಇಲ್ಲಿಯವರೆಗೆ ಎಷ್ಟು ಸಂಪರ್ಕ ನೀಡಲಾಗಿದೆ ; ಬಾಕಿಯಿರುವ ಅರ್ಜಿಗಳ ಸಂಖ್ಯೆ ಎಷ್ಟು ; ( ಹೆಸ್ಕಾಂವಾರು ವಿವರ ನೀಡುವುದು)

(ಇ) ವಿದ್ಯುತ್ ಸಂಪರ್ಕಕ್ಕಾಗಿ ಸುಪ್ರೀಂ ಕೋರ್ಟ್ ಸಿಸಿ ಮತ್ತು ಒಸಿಯನ್ನು ಪಡೆಯುವಂತೆ ಆದೇಶಿಸಿದ ದಿನಾಂಕ ಯಾವುದು ; ಇಂಧನ ಇಲಾಖೆ ಇದರ ಬಗ್ಗೆ ಯಾವ ದಿನಾಂಕದಂದು ಸುತ್ತೋಲೆ ಹೊರಡಿಸಿದೆ ; (ಸುತ್ತೋಲೆಯ ಪ್ರತಿಯನ್ನು ನೀಡುವುದು)

(ಈ) ಸುಪ್ರೀಂ ಕೋರ್ಟ್ ತೀರ್ಪಿಗೆ ಮುಂಚಿತವಾಗಿ ಅರ್ಜಿ ಸಲ್ಲಿಸಿ ಠೇವಣಿ ಪಾವತಿಸಿರುವ ಅರ್ಜಿದಾರರಿಗೆ ಸಹ ವಿದ್ಯುತ್ ಸಂಪರ್ಕ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇವರಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಕಂದಾಯ ನಿವೇಶನ ಮತ್ತು 'ಬಿ' ಖಾತಾಗಳಿಗೆ ಸಿಸಿ ಮತ್ತು ಒಸಿ ಸಿಗದ ಕಾರಣ ವಿದ್ಯುತ್ ಸಂಪರ್ಕ ಸಿಗದೆ ಸಾರ್ವಜನಿಕರು ತೊಂದರೆಗೆ ಸಿಲುಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದರ ಪರಿಹಾರಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಊ) ಸಣ್ಣ ಕೈಗಾರಿಕೆಗಳಿಗೂ ಸಹ ಸಿಸಿ ಮತ್ತು ಒಸಿ ಕಡ್ಡಾಯ ಮಾಡಿರುವ ಕಾರಣ ಹಲವು ಕೈಗಾರಿಕೆಗಳು ವಿದ್ಯುತ್ ಸಂಪರ್ಕದ ಕೊರತೆಯುಂಟಾಗಿ ಉತ್ಪಾದನೆ, ಉದ್ಯೋಗ ಮತ್ತು ಸ್ಥಳೀಯ ಕಚ್ಚಾ ಸಂಪನ್ಮೂಲ ಸದುಪಯೋಗ ಪಡಿಸಿಕೊಳ್ಳಲು ಸಾಧ್ಯವಾಗದೆ ಸಮಸ್ಯೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗಾರಿಕೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಋ) ಸುಪ್ರೀಂ ಕೋರ್ಟ್ ಆದೇಶಕ್ಕೂ ಮುನ್ನ ನಿರ್ಮಾಣವಾಗಿರುವ ಎಲ್ಲಾ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಅರಣ್ಯ ವಲಯಗಳಲ್ಲಿ ಸಫಾರಿ ನಿರ್ಬಂಧಿಸಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೭೯ (೧೩೨೬) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅರಣ್ಯ ಪ್ರದೇಶಗಳಲ್ಲಿ ಸಾರ್ವಜನಿಕರ ಸಫಾರಿಗೆ ಸರ್ಕಾರ ನಿರ್ಬಂಧ ವಿಧಿಸಲಾಗಿದೆಯೇ ; ಇದರ ಆದೇಶದ ಪ್ರತಿಗಳನ್ನು ಒದಗಿಸುವುದು ಹಾಗೂ ನಿರ್ಬಂಧ ವಿಧಿಸಲು ಇರುವ ಕಾರಣಗಳೇನು ;

(ಆ) ಈ ರೀತಿಯ ಕ್ರಮದಿಂದ ಮುಂದಿನ ದಿನದಲ್ಲಿ ಇಡೀ ರಾಜ್ಯದ ಪ್ರವಾಸೋದ್ಯಮದ ಮೇಲೆ ತೀವ್ರ ಹೊಡೆತ ಬೀಳುವ ಸಾಧ್ಯತೆ ಇಲ್ಲವೇ ; ಇದರ ಬಗ್ಗೆ ಸರ್ಕಾರ ಗಮನಹರಿಸಿದೆಯೇ ;

(ಇ) ರಾಜ್ಯದಲ್ಲಿ ಎಷ್ಟು ಅರಣ್ಯ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ಸಫಾರಿಗೆ ಅವಕಾಶ ನೀಡಲಾಗಿದೆ ; ಸರ್ಕಾರದ ಈ ರೀತಿಯ ಕ್ರಮದಿಂದ ವಿದೇಶದಿಂದ ಬರುವ ಪ್ರವಾಸಿಗರು ಕರ್ನಾಟಕಕ್ಕೆ ಬಾರದೇ ಬೇರೆ ರಾಜ್ಯಕ್ಕೆ ಹೋದರೆ, ರಾಜ್ಯಕ್ಕೆ ಬರುವ ಆದಾಯಕ್ಕೆ ಹೊಡೆತ ಬೀಳುವುದಿಲ್ಲವೇ ;

(ಈ) ಸಫಾರಿಗೂ ಹುಲಿಗಳ ದಾಳಿಗೂ ಸಂಬಂಧವಿಲ್ಲದಿದ್ದರೂ ಸಫಾರಿಯುನ್ನು ನಿರ್ಬಂಧಿಸಿರುವ ಅರಣ್ಯ ಇಲಾಖೆಯ ಮೇಲಾಧಿಕಾರಿಗಳಿಗೆ ಬಂಡೀಪುರ–ನಾಗರಹೊಳೆ ಪ್ರದೇಶದ ಸ್ಪಷ್ಟ ಚಿತ್ರಣವಿಲ್ಲ ಎಂಬುದಾಗಿ ಹೇಳಲಾಗುತ್ತಿದೆ ; ಇದರ ಬಗ್ಗೆ ಅಧಿಕಾರಿಗಳು ಪರಿಶೀಲಿಸಿದ್ದಾರೆಯೇ ;

(ಉ) ಈ ಭಾಗದ ರೆಸಾರ್ಟ್, ಹೋಮ್ ಸ್ಟೇ ಮಾಲೀಕರು ಈಗಾಗಲೇ ನಷ್ಟ ಅನುಭವಿಸಿ, ಬೀದಿಗೆ ಬೀಳುವ ಪರಿಸ್ಥಿತಿಯಲ್ಲಿದ್ದಾರೆ ; ಸಫಾರಿಯ ನಿರ್ಬಂಧ ಇಡೀ ರಾಜ್ಯದ ಪ್ರವಾಸೋದ್ಯಮದ ಮೇಲೆ ಹೊಡೆತ ಬೀಳುತ್ತದೆ ; ಇದರ ಬಗ್ಗೆ ಸರ್ಕಾರ ಮರುಪರಿಶೀಲಿಸುವ ಆಲೋಚನೆ ಇದೆಯೇ ?

## ರಾಜ್ಯದ ಐದು ವಿದ್ಯುತ್ ಸರಬರಾಜು ಕಂಪನಿಗಳು ನಷ್ಟ ಅನುಭವಿಸುತ್ತಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೮೦ (೧೩೨೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಐದು ವಿದ್ಯುತ್ ಸರಬರಾಜು ಕಂಪನಿಗಳು ತೀವ್ರ ಆರ್ಥಿಕ ಸಂಕಷ್ಟದ ಸುಳಿಗೆ ಸಿಲುಕಿರುವುದು ನಿಜವೇ; ಸರ್ಕಾರದಿಂದ

ಪಾವತಿಯಲ್ಲಿ ಕೊರತೆಯಾಗುವ ಮೊತ್ತ ಸರಿದೂಗಿಸಿಕೊಳ್ಳಲು ಐದು ಕಂಪನಿಗಳು ಸಾಲದ ಮೊರೆ ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯ ಸರ್ಕಾರವು ಕೇಂದ್ರ ಸರ್ಕಾರಕ್ಕೆ ಒದಗಿಸಿರುವ ಮಾಹಿತಿಯಂತೆ ಎಸ್ಕಾಂಗಳ ಒಟ್ಟು ಸಾಲದ ಮೊತ್ತ ರೂ. ೪೫ ಸಾವಿರ ಕೋಟಿ ದಾಟಿದ್ದು, ಈ ಪೈಕಿ ಬೆಸ್ಕಾಂ ಅತ್ಯಧಿಕ ರೂ. ೧೯,೦೨೯ ಕೋಟಿ ಕೆಪಿಸಿಎಲ್ ಗೆ ಬರಬೇಕಾದ ಬಾಕಿ ಮೊತ್ತ ರೂ. ೧೯ ಸಾವಿರ ಕೋಟಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇದಕ್ಕೆ ಯಾರು ಹೊಣೆ, ಯಾವ ಕಾರಣಗಳಿಂದ ಈ ಪರಿಸ್ಥಿತಿ ಎದುರಾಗಿದೆ ;

(ಇ) ಸರ್ಕಾರದ ನಗರಾಭಿವೃದ್ಧಿ ಇಲಾಖೆ, ಸ್ಥಳೀಯ ಸಂಸ್ಥೆಗಳು ಹಾಗೂ ಸರ್ಕಾರಿ ಸಂಸ್ಥೆಗಳಿಂದ ಇದುವರೆಗೂ ಎಷ್ಟು ವಿದ್ಯುತ್ ಬಾಕಿ ಉಳಿಸಿಕೊಂಡಿದೆ; ಇದರ ವಸೂಲಿಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಈ) ರಾಜ್ಯದ ೫ ವಿದ್ಯುತ್ ವಿತರಣೆ ಕಂಪನಿಗಳು ಸಾಲ ಮತ್ತು ನಷ್ಟದಲ್ಲಿ ಮುಳುಗಿ ಹೋಗಿವೆ ; ಇದಕ್ಕೆ ರಾಜ್ಯ ಸರ್ಕಾರವು ಕಾರಣವಾಗಿದ್ದು, ಸಕಾಲಕ್ಕೆ ಸಹಾಯಧನ ಹೋಗದಿರುವುದು ಹಾಗೂ ವಿದ್ಯುತ್ ಇಲಾಖೆ ಆಡಳಿತವೇ ಕಾರಣ ಎಂಬುದನ್ನು ಸರ್ಕಾರ ಒಪ್ಪಿಕೊಳ್ಳುವುದೇ ;

(ಉ) ವಿದ್ಯುತ್ ವಿತರಣಾ ಪರಿಕರಗಳು ತೀವ್ರವಾಗಿ ಬಳಕೆಯಾಗಿ ನಷ್ಟ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಊ) ಈ ಪರಿಕರಗಳನ್ನು ಬದಲಾಯಿಸಲು ಅಂದಾಜು ಎಷ್ಟು ಹಣ ಬೇಕಾಗುತ್ತದೆ ?

## ಆಯುಷ್ ಇಲಾಖೆಯ ತಜ್ಞವೈದ್ಯರಿಗೆ ಕಡಿಮೆ ವೇತನ ನೀಡುತ್ತಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೮೧ (೧೩೨೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಯುಷ್ ಇಲಾಖೆಯ ಗುತ್ತಿಗೆ ತಜ್ಞ ವೈದ್ಯರಿಗೆ ಅಲೋಪತಿ ಗುತ್ತಿಗೆ ತಜ್ಞ ವೈದ್ಯರಿಗಿಂತ ಕಡಿಮೆ ವೇತನ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಂತಹ ತಾರತಮ್ಯದ ಮೂಲ ಕಾರಣಗಳು ಯಾವುವು ; (ವಿವರವಾದ ಮಾಹಿತಿ ನೀಡುವುದು)

(ಆ) ಆಯುಷ್ ತಜ್ಞವೈದ್ಯರನ್ನು ಅಲೋಪತಿ ತಜ್ಞವೈದ್ಯರ ಹುದ್ದೆಗಳ ಸಮಾನ ಹುದ್ದೆಗಳಲ್ಲಿ ಪರಿಗಣಿಸುವ ಕುರಿತು ಸರ್ಕಾರ ಯಾವುದೇ ನಿರ್ಧಾರ ತೆಗೆದುಕೊಂಡಿದೆಯೇ ; ಇದ್ದಲ್ಲಿ, ವೇತನ ಮತ್ತು ಸೌಲಭ್ಯಗಳಲ್ಲಿ ಸಮಾನತೆ ತರಲು ಕೈಗೊಂಡಿರುವ ಕ್ರಮಗಳ ಬಗ್ಗೆ ಮಾಹಿತಿ ನೀಡುವುದು ;

(ಇ) ಆಯುಷ್ ತಜ್ಞವೈದ್ಯರ ಕರ್ತವ್ಯಗಳು ಮತ್ತು ಜವಾಬ್ದಾರಿಗಳನ್ನು ಪ್ರತ್ಯೇಕವಾಗಿ ರೂಪಿಸಲಾಗಿದೆಯೇ ; ಇದ್ದಲ್ಲಿ, ಅದರ ವಿವರಗಳನ್ನು ನೀಡುವುದು ಇಲ್ಲದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಆ ಕರ್ತವ್ಯ/ ಜವಾಬ್ದಾರಿಗಳನ್ನು ನಿರ್ಧರಿಸಲಾಗುವುದು ;

(ಈ) ಆಯುರ್ವೇದ ತಜ್ಞ ವೈದ್ಯರ ಖಾಯಂ ಹುದ್ದೆಗಳನ್ನು ಸೃಜಿಸುವ ಕುರಿತು ಸರ್ಕಾರದ ನಿಲುವೇನು ; ಈ ಕುರಿತು ವಿಳಂಬವಾಗುತ್ತಿರುವುದಕ್ಕೆ ಕಾರಣಗಳು ಹಾಗೂ ಯಾವುದೇ ಕಾನೂನಾತ್ಮಕ ಅಥವಾ ಆಡಳಿತಾತ್ಮಕ ತೊಡಕುಗಳಿವೆಯೇ ಎಂಬುದರ ಕುರಿತು ಮಾಹಿತಿ ನೀಡುವುದು ;

(ಉ) ಕಳೆದ ಹತ್ತು ವರ್ಷಗಳಿಂದ ಆಯುಷ್ ಇಲಾಖೆಯಲ್ಲಿ ತಜ್ಞ ವೈದ್ಯರ ಅವಶ್ಯಕತೆ ಇದ್ದರೂ ಸಹ ಖಾಯಂ ನೇಮಕಾತಿ ಕೈಗೊಳ್ಳದಿರುವುದಕ್ಕೆ ಕಾರಣವೇನು; ಕೇವಲ ಗುತ್ತಿಗೆ ತಜ್ಞ ವೈದ್ಯರ ಮೇಲೆ ಇಲಾಖೆಯ ಸೇವೆಗಳು ನಿರ್ವಹಿಸುತ್ತಿರುವುದು ಸರಿಯಾದ ಕ್ರಮವೇ ? (ಸಂಪೂರ್ಣ ವಿವರ ನೀಡುವುದು)

## ಪರಿಶಿಷ್ಟ ವಿದ್ಯಾರ್ಥಿಗಳಿಗೆ ಪಠ್ಯ ಪುಸ್ತಕಗಳನ್ನು ಪೂರೈಸದಿರುವುದರ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೮೨ (೧೩೮೬) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಪ್ರಸ್ತುತ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ವಿದ್ಯಾರ್ಥಿ–ವಿದ್ಯಾರ್ಥಿನಿಯರ ಒಟ್ಟು ಸಂಖ್ಯೆ ಎಷ್ಟು ; (ಜಿಲ್ಲಾ ಹಾಗೂ ಕಾಲೇಜುವಾರು ವಿವರ ಒದಗಿಸುವುದು)

(ಆ) ಪ್ರಸ್ತುತ ಶೈಕ್ಷಣಿಕ ವರ್ಷದಲ್ಲಿ ಎಷ್ಟು ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಪರಿಶಿಷ್ಟ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕಗಳನ್ನು ಸಂಪೂರ್ಣವಾಗಿ ಪೂರೈಸಲಾಗಿದೆ ; ಇನ್ನೂ ಪೂರೈಸದೆ ಇರುವ ಕಾಲೇಜುಗಳು ಯಾವುವು ; (ಕಾಲೇಜುವಾರು ವಿವರ ಒದಗಿಸುವುದು)

(ಇ) ತರಗತಿಗಳು ಪ್ರಾರಂಭವಾಗಿ ಸುಮಾರು ಏಳು ತಿಂಗಳು ಕಳೆದಿದ್ದರೂ ಪರಿಶಿಷ್ಟ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕಗಳನ್ನು ಪೂರೈಸದಿರುವುದಕ್ಕೆ ಕಾರಣವೇನು ; ಈ ವಿಳಂಬಕ್ಕೆ ಹೊಣೆಗಾರರಾದ ಅಧಿಕಾರಿಗಳು ಯಾರು ; (ವಿವರ ಒದಗಿಸುವುದು)

(ಈ) ಪರಿಶಿಷ್ಟ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕಗಳನ್ನು ಪೂರೈಸಲು ನಿಖರವಾದ ಕಾಲಮಿತಿ (timeline) ಏನು ; ಯಾವ ದಿನಾಂಕದೊಳಗೆ ಎಲ್ಲಾ ವಿದ್ಯಾರ್ಥಿಗಳಿಗೆ ಪೂರೈಕೆ ಪೂರ್ಣಗೊಳ್ಳಲಿದೆ ; (ವಿವರ ಒದಗಿಸುವುದು)

(ಉ) ಈ ವಿಳಂಬದಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಹಿತಾಸಕ್ತಿಗೆ ಧಕ್ಕೆಯಾಗಿದೆ ಎಂಬುದನ್ನು ಸರ್ಕಾರ ಒಪ್ಪುತ್ತದೆಯೇ ; ಇದಕ್ಕೆ ಕಾರಣರಾದವರ ವಿರುದ್ಧ ಯಾವ ರೀತಿಯ ಶಿಸ್ತು ಕ್ರಮ ಕೈಗೊಳ್ಳಲಾಗಿದೆ ಅಥವಾ ಕೈಗೊಳ್ಳಲಾಗುತ್ತದೆ ?

## ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಗಳ ಕೊರತೆ ಮತ್ತು KSMSCL ಖರೀದಿ ಪ್ರಕ್ರಿಯೆಯಲ್ಲಿನ ಲೋಪಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೮೩ (೧೩೮೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರಾಥಮಿಕ ಆರೋಗ್ಯ ಕೇಂದ್ರಗಳು (PHC), ಸಮುದಾಯ ಆರೋಗ್ಯ ಕೇಂದ್ರಗಳು (CHC) ಮತ್ತು ಜಿಲ್ಲಾ ಆಸ್ಪತ್ರೆಗಳಲ್ಲಿ ಕಳೆದ ಕೆಲವು ತಿಂಗಳುಗಳಿಂದ ಜೀವರಕ್ಷಕ ಹಾಗೂ ಅತ್ಯಗತ್ಯ ಔಷಧಿಗಳ ತೀವ್ರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮವು (KSMSCL) ಔಷಧಿಗಳ ಖರೀದಿ ಪ್ರಕ್ರಿಯೆಯಲ್ಲಿ (Procurement Procedure) ವಿಳಂಬ ಮಾಡುತ್ತಿರುವುದು ಮತ್ತು ಖರೀದಿ ನಿಯಮಗಳನ್ನು ಉಲ್ಲಂಘಿಸುತ್ತಿರುವುದು

ಆಸ್ಪತ್ರೆಗಳಲ್ಲಿನ ಈ ಔಷಧಗಳ ಅಭಾವಕ್ಕೆ ಕಾರಣವಲ್ಲವೇ ; (ಕಳೆದ ೧ ವರ್ಷದಲ್ಲಿ ಔಷಧಿಗಳಿಗಾಗಿ ಮೀಸಲಿಟ್ಟ ಅನುದಾನ ಮತ್ತು ವ್ಯಯಿಸಲಾದ ಮೊತ್ತದ ವಿವರ ನೀಡುವುದು)

(ಇ) KSMSCL ಮೂಲಕ ಸರಬರಾಜು ಮಾಡಲಾಗುತ್ತಿರುವ ಔಷಧಿಗಳು ಕಳಪೆ ಗುಣಮಟ್ಟದಿಂದ ಕೂಡಿವೆ ಎಂಬ ದೂರುಗಳು ಬಂದಿವೆಯೇ ; ಕಳೆದ ೧ ವರ್ಷದಲ್ಲಿ ಗುಣಮಟ್ಟದ ಪರೀಕ್ಷೆಯಲ್ಲಿ ವಿಫಲವಾದ (Not of Standard Quality) ಔಷಧಿಗಳ ಬ್ಯಾಚ್‌ಗಳು ಎಷ್ಟು ಮತ್ತು ಆ ಕಂಪನಿಗಳನ್ನು ಕಪ್ಪು ಪಟ್ಟಿಗೆ ಸೇರಿಸಲು ಕೈಗೊಂಡ ಕ್ರಮಗಳೇನು ;

(ಈ) ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿಗಳು ಲಭ್ಯವಿಲ್ಲದ ಕಾರಣ, ಬಡ ರೋಗಿಗಳು ಅನಿವಾರ್ಯವಾಗಿ ಹೊರಗಿನ ಖಾಸಗಿ ಮೆಡಿಕಲ್ ಶಾಪ್‌ಗಳಿಂದ ಹೆಚ್ಚಿನ ಬೆಲೆಗೆ ಔಷಧಿಗಳನ್ನು ಖರೀದಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಸರ್ಕಾರಿ ಆಸ್ಪತ್ರೆಗಳಲ್ಲಿ ೧೦೦% ಔಷಧಿಗಳ ಲಭ್ಯತೆಯನ್ನು ಖಚಿತಪಡಿಸಲು ಮತ್ತು ಬಡ ರೋಗಿಗಳಿಗೆ ಆಗುತ್ತಿರುವ ಆರ್ಥಿಕ ಹೊರೆಯನ್ನು ತಪ್ಪಿಸಲು ಸರ್ಕಾರವು ರೂಪಿಸಿರುವ ತುರ್ತು ಕಾರ್ಯ ಯೋಜನೆಗಳೇನು ?

## ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆವತಿಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೮೪ (೧೩೮೮) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ರಾಜ್ಯದಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ಯೋಜನೆಗಳು ಯಾವುವು ; (ಪ್ರತಿ ಯೋಜನೆಯ ಉದ್ದೇಶ ಲಾಭಾರ್ಥಿಗಳ ವರ್ಗ ಹಾಗೂ ಅನುಷ್ಠಾನ ವಿಧಾನಗಳ ವಿವರ ಒದಗಿಸುವುದು)

(ಆ) ೨೦೨೩-೨೪, ೨೦೨೪-೨೫ ಹಾಗೂ ೨೦೨೫-೨೬ನೇ ಆರ್ಥಿಕ ವರ್ಷಗಳಲ್ಲಿ ಮೇಲ್ಕಂಡ ಯೋಜನೆಗಳಿಗೆ ಜಿಲ್ಲಾವಾರು ನಿಗದಿಪಡಿಸಿರುವ ಗುರಿ ಎಷ್ಟು ; ಅದರಲ್ಲಿ ಸಾಧನೆ ಪ್ರಮಾಣ ಎಷ್ಟು ; ಇನ್ನೂ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಸದರಿ ವರ್ಷಗಳಲ್ಲಿ ಪ್ರತಿ ಯೋಜನೆಗೆ ಬಿಡುಗಡೆಯಾದ ಅನುದಾನ ಎಷ್ಟು ; ಅದರಲ್ಲಿ ವಾಸ್ತವವಾಗಿ ಖರ್ಚು ಮಾಡಿರುವ ಮೊತ್ತ ಎಷ್ಟು ; ಬಳಕೆ ಪ್ರಮಾಣ ಎಷ್ಟು ? (Utilization Percentage) (ಜಿಲ್ಲಾವಾರು ವಿವರ ಒದಗಿಸುವುದು)

## ರಾಜ್ಯದ ಸರ್ಕಾರಿ ಪಿ.ಯು ಕಾಲೇಜಿನ ಉಪನ್ಯಾಸಕರ ಹುದ್ದೆಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೮೫ (೧೩೮೯) ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪಿ.ಯು ಕಾಲೇಜುಗಳಲ್ಲಿ ಪ್ರಸ್ತುತ ಒಟ್ಟು ಎಷ್ಟು ಉಪನ್ಯಾಸಕ ಹುದ್ದೆಗಳು ಮಂಜೂರಾಗಿವೆ ; ಈ ಪೈಕಿ ಎಷ್ಟು ಹುದ್ದೆಗಳು ಖಾಲಿಯಾಗಿವೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; (ಮಾಹಿತಿ ಒದಗಿಸುವುದು)

(ಇ) ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸಲು ಯಾವುದೇ ವೇಳಾಪಟ್ಟಿ ನಿಗದಿಪಡಿಸಲಾಯಿತೇ ; ಇದ್ದರೆ ಅದರ ವಿವರವೇನು ;

(ಈ) ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟಕ್ಕೆ ಧಕ್ಕೆಯಾಗದಂತೆ ತಾತ್ಕಾಲಿಕ ಉಪನ್ಯಾಸಕರ ನೇಮಕಕ್ಕೆ ಸರ್ಕಾರ ಯೋಜನೆ ರೂಪಿಸಿದೆಯೇ ? (ಮಾಹಿತಿ ಒದಗಿಸುವುದು)

## ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಒಳಪಟ್ಟ ಪ್ರಥಮ ದರ್ಜೆ ಕಾಲೇಜುಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೮೬ (೧೩೧೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ವಿಶ್ವವಿದ್ಯಾನಿಲಯ ಅಧೀನಕ್ಕೆ ಒಳಪಟ್ಟ ಪ್ರಥಮ ದರ್ಜೆ ಕಾಲೇಜುಗಳಲ್ಲಿ ೨೦೨೩–೨೪, ೨೦೨೪–೨೫ ಮತ್ತು ೨೦೨೫–೨೬ ರಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಆ) ಸದರಿ ಕಾಲೇಜುಗಳಲ್ಲಿ ಎಷ್ಟು ಉಪನ್ಯಾಸಕರ ಹುದ್ದೆ ಖಾಲಿ ಇದೆ ; ಪ್ರಸ್ತುತ ಇರುವ ಹುದ್ದೆಗಳೆಷ್ಟು ; ಗುತ್ತಿಗೆ ಆಧಾರದ ಹುದ್ದೆಗಳು ಹಾಗೂ ಖಾಯಂ ಇರುವ ಹುದ್ದೆಗಳು ಎಷ್ಟು ; (ವಿವರ ನೀಡುವುದು)

(ಇ) ಮಂಗಳೂರು ವಿಶ್ವವಿದ್ಯಾನಿಲಯದ ಆರ್ಥಿಕ ಪರಿಸ್ಥಿತಿ ಸುಧಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ವಿಶ್ವವಿದ್ಯಾನಿಲಯಗಳು ಆರ್ಥಿಕ ಸಂಕಷ್ಟ ಎದುರಿಸುತ್ತಿದೆ ಎಂಬ ಸುದ್ದಿಗಳಾಗಿದ್ದು, ಪ್ರಸ್ತುತ ಜಿಲ್ಲೆಗೊಂದು ವಿಶ್ವವಿದ್ಯಾನಿಲಯ ಸ್ಥಾಪಿಸಬೇಕೆಂಬ ನಿರ್ಣಯ ಯಾವ ಹಂತದಲ್ಲಿದೆ ; ಎಷ್ಟು ಜಿಲ್ಲೆಗಳಲ್ಲಿ ವಿಶ್ವವಿದ್ಯಾನಿಲಯ ಸ್ಥಾಪಿಸಲಾಗಿದೆ ? (ವಿವರ ನೀಡುವುದು)

## BPL ಕಾರ್ಡ್‌ಗಾಗಿ ಬಂದಿರುವ ಅರ್ಜಿಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೮೭ (೧೩೧೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ 3 ವರ್ಷಗಳಿಂದ ರಾಜ್ಯದಲ್ಲಿ ಹೊಸ ಬಿಪಿಎಲ್ ಕಾರ್ಡ್‌ಗಾಗಿ ಬಂದಿರುವ ಅರ್ಜಿಗಳು ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ 3 ವರ್ಷಗಳಿಂದ ರಾಜ್ಯದಲ್ಲಿ ಎಷ್ಟು ಅನರ್ಹ ಕಾರ್ಡ್‌ಗಳನ್ನು ಗುರುತಿಸಿದೆ ; ಗುರುತಿಸಿದಲ್ಲಿ, ಅವುಗಳನ್ನು ರದ್ದುಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹೊಸದಾಗಿ ಎಷ್ಟು ಕುಟುಂಬಗಳಿಗೆ ಬಿಪಿಎಲ್ ಕಾರ್ಡ್‌ಗಳನ್ನು ನೀಡಲು ಸರ್ಕಾರ ಉದ್ದೇಶಿಸಿದೆ ; (ವಿವರ ನೀಡುವುದು)

(ಈ) ಅನಾರೋಗ್ಯ ಪೀಡಿತರಿಗೆ ಬಿಪಿಎಲ್ ಕಾರ್ಡ್ ನೀಡದೆ ಚಿಕಿತ್ಸೆ ಪಡೆಯಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಗೃಹಜ್ಯೋತಿ ಬಳಕೆ ಮಾಡುವವರ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೮೮ (೧೩೯೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಗೃಹಜ್ಯೋತಿ ಬಳಕೆ ಮಾಡುವ ಗ್ರಾಹಕರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಗೃಹಜ್ಯೋತಿ ಬಳಕೆದಾರರ ವಿವರ ನೀಡುವುದು)

(ಆ) ಗ್ಯಾರಂಟಿ ಯೋಜನೆಯಡಿಯಲ್ಲಿ ಎಷ್ಟು ಮಂದಿ ಗೃಹಜ್ಯೋತಿ ಫಲಾನುಭವಿಗಳಿದ್ದಾರೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಗೃಹಜ್ಯೋತಿ ಗ್ಯಾರಂಟಿಗೆ ಒಳಪಡದ ಬಳಕೆದಾರರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಗೃಹಜ್ಯೋತಿ ಯೋಜನೆಯಡಿಯಲ್ಲಿ ಗ್ರಾಹಕರಿಗೆ ಹೊಸದಾಗಿ ಯೋಜನೆಯನ್ನು ಸರ್ಕಾರದಿಂದ ಹಮ್ಮಿಕೊಳ್ಳಲಾಗಿದೆಯೇ ? (ಇದ್ದರೆ, ವಿವರ ನೀಡುವುದು)

## ಅರಣ್ಯ ಪ್ರದೇಶ ವಿಸ್ತರಣೆ ಮಾಡುವ ಕುರಿತು

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೮೯ (೧೩೨೦) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಅರಣ್ಯ ಪ್ರದೇಶಗಳ ವಿಸ್ತಾರ ಮತ್ತು ಅವುಗಳ ಸಂರಕ್ಷಣೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳಾವುವು ;

(ಆ) ಅರಣ್ಯ ನಾಶವನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳಾವುವು ; (ವಿವರ ನೀಡುವುದು)

(ಇ) ಅರಣ್ಯ ನಾಶಕ್ಕೆ ಕಾರಣವಾಗುತ್ತಿರುವ ಪ್ರಮುಖ ಅಂಶಗಳಾವುವು ?

# ರಾಜ್ಯದಲ್ಲಿರುವ ಆಯುಷ್ ಇಲಾಖೆ ಆಸ್ಪತ್ರೆಗಳು ಮತ್ತು ಚಿಕಿತ್ಸಾಲಯ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೯೦ (೧೩೦೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆಯುಷ್ ಇಲಾಖೆಯನ್ನಾಗಿ ಪ್ರತ್ಯೇಕವಾಗಿ ಎಂದಿನಿಂದ ಪ್ರಾರಂಭಿಸಲಾಯಿತು ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರ ಚಿಕಿತ್ಸೆಗೆ ಪ್ರೋತ್ಸಾಹ ಹಾಗೂ ಒತ್ತು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಆಯುಷ್ ಇಲಾಖೆಯನ್ನು ಆರೋಗ್ಯ ಇಲಾಖೆಯ ಜೊತೆಗೆ ವಿಲೀನಗೊಳಿಸುವ ಚಿಂತನೆ ನಡೆದಿದೆಯೇ ; (ವಿವರ ನೀಡುವುದು)

(ಇ) ಆಯುಷ್ ಇಲಾಖೆ ವ್ಯಾಪ್ತಿಯಲ್ಲಿ ಎಷ್ಟು ಆಸ್ಪತ್ರೆಗಳಿವೆ ಹಾಗೂ ಎಷ್ಟು ಚಿಕಿತ್ಸಾಲಯುಗಳಿವೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಈ) ಆಯುಷ್ ಇಲಾಖೆಗೆ ಮಂಜೂರಾಗಿರುವ ಒಟ್ಟು ವೈದ್ಯಾಧಿಕಾರಿಗಳ/ ಅರೆ ವೈದ್ಯಾಧಿಕಾರಿಗಳ/ಇತರೆ ಸಿಬ್ಬಂದಿ ವರ್ಗದವರ ಸಂಖ್ಯೆ ಎಷ್ಟು ಹಾಗೂ ಇವುಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಮಾಹಿತಿ ಒದಗಿಸುವುದು)

(ಉ) ಖಾಲಿ ಇರುವ ಹುದ್ದೆಗಳನ್ನು ಕಾಲಮಿತಿಯೊಳಗೆ ಭರ್ತಿ ಮಾಡಲು ಸರ್ಕಾರ ಕ್ರಮವಹಿಸುವುದೇ ?

## ಕೌಶಲ್ಯಾಭಿವೃದ್ಧಿ ಇಲಾಖೆಗಳ ಯೋಜನೆ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೯೧ (೧೩೦೬) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಲ್ಲಿರುವ ಯೋಜನೆಗಳು ಯಾವುವು ; (ವಿವರದೊಂದಿಗೆ ಮಾಹಿತಿ ನೀಡುವುದು)

(ಆ) ಕಳೆದ ಎರಡು ವರ್ಷಗಳಲ್ಲಿ ಇಲಾಖೆಯ ಯಾವ ಯಾವ ಯೋಜನೆಗಳಿಗೆ ಅನುದಾನ ಒದಗಿಸಿದೆ ; ಒದಗಿಸಿರುವ ಅನುದಾನದಲ್ಲಿ ಏನೇನು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಕಳೆದ ಎರಡು ವರ್ಷಗಳಲ್ಲಿ ಕೌಶಲ್ಯಾಭಿವೃದ್ಧಿ ಯೋಜನೆಯಲ್ಲಿ ಯಾವ ಯಾವ ವಿಷಯಗಳಲ್ಲಿ ತರಬೇತಿ ನೀಡಲಾಗಿದೆ ಹಾಗೂ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಎಲ್ಲೆಲ್ಲಿ ಉದ್ಯೋಗವನ್ನು ಒದಗಿಸಿಕೊಡಲಾಗಿದೆ ಈ ಅಭ್ಯರ್ಥಿಗಳಿಗೆ ಒದಗಿಸಿಕೊಟ್ಟಿರುವ ಸೌಲಭ್ಯಗಳೇನು ? (ವಿವರ ನೀಡುವುದು)

## ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿರುವ ಮೂಲಭೂತ ಸೌಕರ್ಯಗಳ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೯೨ (೧೩೦೭) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು ; ಅವು ಯಾವ ಯಾವ ಜಿಲ್ಲೆಗಳಲ್ಲಿ ಇವೆ ; ಈ ವೈದ್ಯಕೀಯ ಕಾಲೇಜುಗಳಿಗೆ ಒದಗಿಸಿರುವ ಮೂಲಭೂತ ಸೌರ್ಕಯಗಳೇನು ; (ವಿವರ ನೀಡುವುದು)

(ಆ) ರಾಜ್ಯದಲ್ಲಿರುವ ಪ್ರತಿಯೊಂದು ಸರ್ಕಾರಿ ವೈದ್ಯ ಕಾಲೇಜುಗಳಿಗೆ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಎಲ್ಲಾ ವರ್ಗದ ಹುದ್ದೆಗಳು ಸೇರಿದಂತೆ) ಮಂಜೂರಾಗಿರುವ ಹುದ್ದೆಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಿಕೊಳ್ಳಲಾಗುವುದು ;

(ಇ) ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಕೊರತೆ ಇರುವುದರಿಂದ ವೈದ್ಯಕೀಯ ಗುಣಮಟ್ಟ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಅರಣ್ಯ ಇಲಾಖೆಯಲ್ಲಿರುವ ಹುದ್ದೆಗಳ ಸಂಖ್ಯೆ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೯೩ (೧೩೦೮) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಅರಣ್ಯ ಇಲಾಖೆಯಲ್ಲಿರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ; (ಎಲ್ಲಾ ವೃಂದದ ಹುದ್ದೆಗಳು ಸೇರಿದಂತೆ) ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಆ) ಕಾಡುಗಳನ್ನು ಸಂರಕ್ಷಿಸುವುದು ಹಾಗೂ ಗಸ್ತು ತಿರುಗುವುದು ಅತಿ ಹೆಚ್ಚಿನ ಸಂಖ್ಯೆಯಲ್ಲಿ ಸಿ ಮತ್ತು ಡಿ ದರ್ಜೆಯ ಸಿಬ್ಬಂದಿಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಖಾಲಿ ಇರುವ ಸಿ ಮತ್ತು ಡಿ ದರ್ಜೆಯ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಹಾಗೂ ಈ ಖಾಲಿ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ;

(ಈ) ಸಾಮಾಜಿಕ ಅರಣ್ಯ ಇಲಾಖೆಯಲ್ಲಿರುವ ಅಧಿಕಾರಿ/ಸಿಬ್ಬಂದಿಗಳ ಒಟ್ಟು ಸಂಖ್ಯೆ ಎಷ್ಟು ; ಈ ಇಲಾಖೆಯನ್ನು ಅರಣ್ಯ ಇಲಾಖೆಯಲ್ಲಿ ವಿಲೀನಗೊಳಿಸುವ ಪ್ರಕ್ರಿಯೆಯು ಯಾವ ಹಂತದಲ್ಲಿದೆ ಮತ್ತು ಅನವಶ್ಯಕವಾಗಿರುವ ಈ ಇಲಾಖೆಯನ್ನು ವಿಲೀನಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಸರ್ಕಾರಿ ಆಸ್ಪತ್ರೆಗಳಲ್ಲಿ ಸಿ.ಟಿ.ಸ್ಕ್ಯಾನ್ ಮತ್ತು ಎಂ.ಆರ್.ಐ ಸೇವೆಗಳು ಸ್ಥಗಿತಗೊಂಡಿರುವ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೯೪ (೧೩೩೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಸಿ.ಟಿ.ಸ್ಕ್ಯಾನ್ ಮತ್ತು ಎಂ.ಆರ್.ಐ ಸೇವೆಗಳು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಸಿ.ಟಿ.ಸ್ಕ್ಯಾನ್ ಮತ್ತು ಎಂ.ಆರ್.ಐ ಸೇವೆಗಳನ್ನು ನೀಡಲು ಯಾವ ಸಂಸ್ಥೆಗೆ ಗುತ್ತಿಗೆ ನೀಡಲಾಗಿದೆ; ಅವರಿಗೆ ನೀಡಬೇಕಾಗಿರುವ ಬಾಕಿ ಮೊತ್ತ ಎಷ್ಟು ; ಯಾವ ಕಾರಣಕ್ಕೆ ಬಾಕಿ ಉಳಿಸಿಕೊಳ್ಳಲಾಗಿದೆ ; ಸಕಾಲದಲ್ಲಿ ಪಾವತಿಸಲು ನಿರ್ಲಕ್ಷ್ಯ ಮಾಡಿದವರು ಯಾರು ; ನಿರ್ಲಕ್ಷ್ಯ ಮಾಡಿದವರ ಮೇಲೆ ಸರ್ಕಾರ ಕೈಗೊಂಡ ಕ್ರಮಗಳು ಯಾವುವು ; ಸಂಪೂರ್ಣ ಮಾಹಿತಿ ನೀಡುವುದು ;

(ಇ) ಸರ್ಕಾರಿ ಆಸ್ಪತ್ರೆಯಲ್ಲಿ ಉಚಿತವಾಗಿ ಸಿಗಬೇಕಿದ್ದ ಸೇವೆಗೆ. ಬಡವರು ಇಂದು ಖಾಸಗಿ ಕೇಂದ್ರಗಳಲ್ಲಿ ರೂ.೨.೧೮೧ (ಸಿ.ಟಿ.ಸ್ಕ್ಯಾನ್) ಮತ್ತು ರೂ.೪.೨೨೧ (ಎಂ.ಆರ್.ಐ)ಗೆ ಪಾವತಿಸಬೇಕಾದ ಪರಿಸ್ಥಿತಿ

ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಅವರಿಗೆ ಹಣವನ್ನು ಮರುಪಾವತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಆರೋಗ್ಯ ಸೇವೆ ಎನ್ನುವುದು ನಾಗರಿಕರ ಮೂಲಭೂತ ಹಕ್ಕು. ಆದ್ದರಿಂದ ಬಡ ರೋಗಿಗಳಿಗೆ ಸಿ.ಟಿ.ಸ್ಕ್ಯಾನ್ ಮತ್ತು ಎಂ.ಆರ್.ಐ ಸೇವೆಗಳ ಪರ್ಯಾಯ ವ್ಯವಸ್ಥೆ ಕಲ್ಪಿಸಿದೆಯೇ ; ಸಂಪೂರ್ಣ ಮಾಹಿತಿ ನೀಡುವುದು ?

## ಆಸ್ಪತ್ರೆಗಳಲ್ಲಿ ಔಷಧ ಕೊರತೆ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೯೫ (೧೩೨೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಜಿಲ್ಲಾ ಆಸ್ಪತ್ರೆಗಳು, ತಾಲ್ಲೂಕು ಆಸ್ಪತ್ರೆಗಳು, ಸಮುದಾಯ ಆರೋಗ್ಯ ಕೇಂದ್ರಗಳು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಜೀವ ರಕ್ಷಕ ಔಷಧಗಳು, ಐವಿ ದ್ರಾವಣಗಳು, ಸಾಮಾನ್ಯ ನೋವು ನಿವಾರಕ, ಜ್ವರದ ಔಷಧಿಗಳು ಹಾಗೂ ಆಂಟಿಬಯೋಟಿಕ್ ಸೇರಿದಂತೆ ನಿತ್ಯ ಬಳಕೆಯ ಔಷಧಗಳ ತೀವ್ರ ಕೊರತೆ ಉಂಟಾಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕೆಲವು ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧ ಹಾಗೂ ಹೊಲಿಗೆ (ಸರ್ಜಿಕಲ್) ಸಾಮಗ್ರಿಗಳ ಕೊರತೆಯಿಂದ ತುರ್ತು ಹಾಗೂ ಯೋಜಿತ ಶಸ್ತ್ರಚಿಕಿತ್ಸೆಗಳನ್ನು ತಾತ್ಕಾಲಿಕವಾಗಿ ಮುಂದೂಡಲಾಗಿದೆ ಎಂಬ ವರದಿಗಳಿದ್ದು ಇದರಿಂದ ರೋಗಿಗಳ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಉಂಟಾಗಿರುವುದನ್ನು ಸರ್ಕಾರ ಪರಿಗಣಿಸದೇ ಇರಲು ಕಾರಣವೇನು ;

(ಇ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಔಷಧ ಖರೀದಿ ಮಾಡಲು ಮೀಸಲಾದ ಅನುದಾನ ಎಷ್ಟು ; ಖರ್ಚು ಮಾಡಿದ ಮೊತ್ತ ಎಷ್ಟು ; ವರ್ಷವಾರು ವಿವರ ನೀಡುವುದು)

(ಈ) ಔಷಧಗಳ ಪೂರೈಕೆಯಲ್ಲಿ ಉಂಟಾದ ವಿಳಂಬಕ್ಕೆ ಕಾರಣವಾದ ಆಡಳಿತಾತ್ಮಕ ಅಥವಾ ತಾಂತ್ರಿಕಾ ಸಮಸ್ಯೆಗಳು ಯಾವುವು ; ಔಷಧ ಖರೀದಿ ಪ್ರಕ್ರಿಯೆಯಲ್ಲಿ ಯಾವುದೇ ಲೋಪ, ನಿರ್ಲಕ್ಷ್ಯ ಅಥವಾ ಭ್ರಷ್ಟಾಚಾರ ನಡೆದಿರುವ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ ; ಇದ್ದಲ್ಲಿ, ಅವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಉ) ರಾಜ್ಯ ಔಷಧ ಉಗ್ರಾಣಗಳಲ್ಲಿ ಕನಿಷ್ಠ ಅಗತ್ಯ ಪ್ರಮಾಣದ ಔಷಧ ಸಂಗ್ರಹವನ್ನು ನಿರಂತರವಾಗಿ ಉಳಿಸಿಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ; ಶಸ್ತ್ರಚಿಕಿತ್ಸೆಗಳಿಗೆ ಅಗತ್ಯವಾದ ಹೊಲಿಗೆ ಸಾಮಗ್ರಿ, ಬ್ಯಾಂಡೇಜ್ ಹಾಗೂ ಇತರೆ ವೈದ್ಯಕೀಯ ಉಪಕರಣಗಳ ಸಮರ್ಪಕ ಪೂರೈಕೆಗೆ ವಿಶೇಷ ತುರ್ತು ಕ್ರಮಗಳನ್ನು ಕೈಗೊಳ್ಳುವ ಯೋಜನೆ ಸರ್ಕಾರಕ್ಕಿದೆಯೇ ; ಮುಂದಿನ ದಿನಗಳಲ್ಲಿ ಇಂತಹ ಔಷಧ ಕೊರತೆ ಉಂಟಾಗದಂತೆ ದೀರ್ಘಕಾಲಿಕ ಕಾರ್ಯಯೋಜನೆ ರೂಪಿಸಿದೆಯೇ ? (ವಿವರ ನೀಡುವುದು)

## ರಾಜ್ಯದ ಕೌಶಲ್ಯಾಭಿವೃದ್ಧಿ ಯೋಜನೆಗಳ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೯೬ (೧೩೨೩) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯು ಯುವಕರು, ಮಹಿಳೆಯರು, ಸ್ವ–ಸಹಾಯ ಸಂಘಗಳು, ಗ್ರಾಮೀಣ ನಿರುದ್ಯೋಗಿಗಳು ಹಾಗೂ ಆರ್ಥಿಕವಾಗಿ ಹಿಂದುಳಿದ ವರ್ಗಗಳ

ಅಭಿವೃದ್ಧಿಗಾಗಿ ಜಾರಿಗೊಳಿಸಿರುವ ಕೇಂದ್ರ ಪ್ರಾಯೋಜಿತ ಮತ್ತು ರಾಜ್ಯ ಸರ್ಕಾರದ ಯೋಜನೆಗಳು ಯಾವುವು ; ಅವುಗಳ ಉದ್ದೇಶ, ಗುರಿ ಏನು ; ಫಲಾನುಭವಿಗಳ ಸಂಖ್ಯೆ ಎಷ್ಟು ; ಅರ್ಹತಾ ಮಾನದಂಡಗಳೇನು ;

(ಆ) ಕಳೆದ ಮೂರು ಹಣಕಾಸು ವರ್ಷಗಳಲ್ಲಿ ಪ್ರತಿ ಯೋಜನೆಗೆ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರದಿಂದ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ ; ಅದರಲ್ಲಿ ವಾಸ್ತವವಾಗಿ ಎಷ್ಟು ಮೊತ್ತ ಬಿಡುಗಡೆಯಾಗಿದೆ ಮತ್ತು ಎಷ್ಟು ಖರ್ಚಾಗಿದೆ ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) ಮಂಜೂರಾದ ಅನುದಾನ ಸಂಪೂರ್ಣವಾಗಿ ಬಳಸಲಾಗದಿದ್ದಲ್ಲಿ ಅದಕ್ಕೆ ಕಾರಣಗಳೇನು ; ಅನುದಾನ ಲ್ಯಾಪ್ಸ್ ಆಗಿರುವುದೇ ; ಆಗಿದ್ದರೆ, ಎಷ್ಟು ಮೊತ್ತ ಲ್ಯಾಪ್ಸ್ ಆಗಿದೆ ;

(ಈ) ಪ್ರತಿ ಯೋಜನೆಯಡಿ ತರಬೇತಿ ಪಡೆದವರ ಸಂಖ್ಯೆ ; ಉದ್ಯೋಗ ಪಡೆದವರ ಸಂಖ್ಯೆ ಹಾಗೂ ಸ್ವಯಂ ಉದ್ಯಮ ಆರಂಭಿಸಿದವರ ಸಂಖ್ಯೆ ಎಷ್ಟು ; ಅದರ ಯಶಸ್ಸಿನ ಪ್ರಮಾಣ ಎಷ್ಟು ;

(ಉ) ಸರ್ಕಾರವು ಯೋಜನೆಗಳ ಅನುಷ್ಠಾನವನ್ನು ಮೇಲ್ವಿಚಾರಣೆ ಮಾಡಲು ಯಾವ ರೀತಿಯ ಮೇಲುಸ್ತುವಾರಿ ವ್ಯವಸ್ಥೆಯನ್ನು ಅಳವಡಿಸಿಕೊಂಡಿದೆ ; ತೃತೀಯ ಪಕ್ಷದ ಮೌಲ್ಯಮಾಪನ (Third Party Evaluation) ನಡೆಸಲಾಗಿದೆಯೇ ;

(ಊ) ಗ್ರಾಮೀಣ ಮತ್ತು ನಗರ ಭಾಗಗಳಲ್ಲಿ ಯೋಜನೆಗಳ ಅನುಷ್ಠಾನದಲ್ಲಿ ಉಂಟಾದ ವ್ಯತ್ಯಾಸಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುವ ಅಂಶಗಳೇನು ; ಸಮಾನ ಅನುಷ್ಠಾನಕ್ಕಾಗಿ ಕೈಗೊಳ್ಳಲಿರುವ ಕ್ರಮಗಳೇನು ;

(ಋ) ಭವಿಷ್ಯದಲ್ಲಿ ಇಲಾಖೆಯು ಯೋಜನೆಗಳನ್ನು ಹೆಚ್ಚು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಹಾಗೂ ಯುವಕರಿಗೆ ಸುಸ್ಥಿರ ಜೀವನೋಪಾಯ ಕಲ್ಪಿಸಲು ಸರ್ಕಾರ ಯಾವ ಹೊಸ ನೀತಿ ರೂಪಿಸಲು ಕ್ರಮಗಳನ್ನು ಕೈಗೊಳ್ಳಲಿದೆ ?

## ವಿದ್ಯುತ್ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೯೭ (೧೩೩೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಗೆ ಸಂಬಂಧಿಸಿದಂತೆ ವಿದ್ಯುತ್ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಗಳ ಸಂಖ್ಯೆ ಎಷ್ಟು; ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ಹೆಸರು, ವಿಭಾಗವಾರು, ವೃಂದವಾರು ಮಾಹಿತಿ ನೀಡುವುದು ;

(ಆ) ನಿಯೋಜನೆ ಹಾಗೂ ಪ್ರಭಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಇ) ಕೊಡಗು ಹಾಗೂ ರಾಜ್ಯದ ಅನೇಕ ಕಡೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಲೈನ್‌ಮೆನ್‌ಗಳು ಬೇರೆ ಬೇರೆ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸಿ ನಂತರ ತಮ್ಮ ಜಿಲ್ಲೆಗಳಿಗೆ ವರ್ಗಾವಣೆ ಮಾಡಿಸಿಕೊಂಡು ತೆರಳುತ್ತಿರುವುದರಿಂದ ಸಮರ್ಪಕವಾಗಿ ವಿದ್ಯುತ್ ಒದಗಿಸಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಈ) ಕೊಡಗು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಲೈನ್‌ಮೆನ್‌ಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಲೈನ್‌ಮೆನ್ ಹುದ್ದೆಗಳ ಸಂಖ್ಯೆ ಎಷ್ಟು ;

(ಉ) ಸಮರ್ಪಕವಾಗಿ ವಿದ್ಯುತ್ ಒದಗಿಸುವ ಹಿತದೃಷ್ಟಿಯಿಂದ ಆಯಾ ಜಿಲ್ಲೆಯ ಸ್ಥಳೀಯರಿಗೆ ತರಬೇತಿ ನೀಡಿ, ಲೈನ್‌ಮೆನ್ ಹುದ್ದೆಯನ್ನು ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಕಾಡು ಪ್ರಾಣಿಗಳ ಕಳ್ಳಬೇಟೆ ಪ್ರಕರಣಗಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೧೯೮ (೧೩೬೮) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಡೆಯುತ್ತಿರುವ ಕಾಡು ಪ್ರಾಣಿಗಳ ಕಳ್ಳಬೇಟೆ ಪ್ರಕರಣಗಳ ಹಿಂದೆ ರಾಜ್ಯ ಮತ್ತು ಹೊರ ರಾಜ್ಯಗಳ ತಂಡ/ಜಾಲಗಳ ಪಾತ್ರ ಇರುವುದು ಕಂಡಬಂದಿದೆಯೇ ; ಇದ್ದಲ್ಲಿ, ಈ ಜಾಲವನ್ನು ಬೇಧಿಸಲು ಸರ್ಕಾರದ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಾಡು ಪ್ರಾಣಿಗಳ ಅಕ್ರಮ ಬೇಟೆ, ಚರ್ಮ, ಮಾಂಸ ಮತ್ತು ಅಂಗಾಂಗಗಳ ಮಾರಾಟ ಸಂಬಂಧ ರಾಜ್ಯದಲ್ಲಿ 2021 ರಿಂದ ಈವರೆಗೆ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ವೃತ್ತ, ವಿಭಾಗ, ಪ್ರಕರಣಗಳ ಸಂಖ್ಯೆ, ಬಂಧಿತ ಆರೋಪಿಗಳ ಸಂಖ್ಯೆ, ವಿಚಾರಣೆ ಮುಕ್ತಾಯಗೊಂಡ ಪ್ರಕರಣಗಳ ಸಂಖ್ಯೆ ; ಸಾಬೀತಾದ ಮತ್ತು ವಿಚಾರಣೆ ಹಂತದಲ್ಲಿರುವ ಪ್ರಕರಣಗಳ ಸಂಖ್ಯೆ ಕುರಿತು ಮಾಹಿತಿ ನೀಡುವುದು)

(ಇ) ಕಳ್ಳಬೇಟೆ ಪ್ರಕರಣಗಳಲ್ಲಿ ವಶಕ್ಕೆ ಪಡೆಯಲಾಗಿರುವ ಕಾಡುಪ್ರಾಣಿಗಳ ಅಂಗಾಂಗಗಳು ಯಾವುವು ; ಇವುಗಳ ಪ್ರಮಾಣ ಮತ್ತು ಮಾರುಕಟ್ಟೆ ಮೌಲ್ಯ ಎಷ್ಟು ; ಮುಟ್ಟುಗೋಲು ಹಾಕಿಕೊಂಡ ವಾಹನಗಳ ಸಂಖ್ಯೆ ಎಷ್ಟು ಹಾಗೂ ಇಂತಹ ಪ್ರಕರಣಗಳಲ್ಲಿ ಯಾವ ರೀತಿಯ ಶಿಕ್ಷೆ ವಿಧಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಕೃಷಿ ಪಂಪ್‌ಸೆಟ್‌ಗಳಿಗೆ ಹಗಲಿನಲ್ಲಿ ೭ ತಾಸು ವಿದ್ಯುತ್ ಪೂರೈಸುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೧೯೯ (೧೩೭೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬೇಸಿಗೆ ಅವಧಿಯಲ್ಲಿ ವಿದ್ಯುತ್ ಬಳಕೆ ಪ್ರಮಾಣವು ಗಣನೀಯುವಾಗಿ ಏರಿಕೆ ಆಗುವುದರಿಂದ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಹಗಲಿನಲ್ಲಿ ೦೭ ತಾಸು ವಿದ್ಯುತ್ ಪೂರೈಕೆಯನ್ನು ಮುಂದುವರೆಸಲಾಗುವುದೇ ; (ಸಂಪೂರ್ಣ ವಿವರ ನೀಡುವುದು)

(ಆ) ಪ್ರಸಕ್ತ ವರ್ಷದ ಮಾರ್ಚ್–ಮೇ ತಿಂಗಳಾಂತ್ಯದವರೆಗೆ ಅಗತ್ಯವಿರುವ ವಿದ್ಯುತ್ ಬೇಡಿಕೆ ಎಷ್ಟು ; ಈ ಅವಧಿಯಲ್ಲಿ ದೈನಂದಿನ ವಿದ್ಯುತ್ ಬೇಡಿಕೆ ಪ್ರಮಾಣ ಎಷ್ಟಿರಲಿದೆ ; ಕಳೆದ ವರ್ಷ ಇದೇ ಅವಧಿಯಲ್ಲಿದ್ದ ವಿದ್ಯುತ್ ಬೇಡಿಕೆ ಎಷ್ಟು ; ಹಿಂದಿನ ವರ್ಷಕ್ಕೆ ಹೋಲಿಸಿದರೆ ಈ ಬಾರಿ ಶೇಕಡ ಎಷ್ಟು ಪ್ರವಾಣದಲ್ಲಿ ವಿದ್ಯುತ್ ಬೇಡಿಕೆ ಹೆಚ್ಚಾಗಬಹುದು ; (ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯದಲ್ಲಿ ಜಲ, ಸೌರ, ಕಲ್ಲಿದ್ದಲು, ಪವನ ಮತ್ತು ಇನ್ನಿತರ ಮೂಲಗಳಿಂದ ಎಷ್ಟು ಪ್ರಮಾಣದಲ್ಲಿ ವಿದ್ಯುತ್ ಉತ್ಪಾದಿಸಲು ಸಾಧ್ಯವಿದೆ ; ಒಂದು ವೇಳೆ ಕೊರತೆ ಅದಲ್ಲಿ ವಿದ್ಯುತ್ ಖರೀದಿಸುವ ಕುರಿತು ಸರ್ಕಾರದ ನಿಲುವೇನು ; ಇದಕ್ಕಾಗಿ ಮೀಸಲಿಟ್ಟಿರುವ ಹಣ ಎಷ್ಟು ;

(ಈ) ರಾಜ್ಯದಲ್ಲಿ ಕೃಷಿ ಉದ್ದೇಶದ ಸುಮಾರು ಎಷ್ಟು ಪಂಪ್ ಸೆಟ್‌ಗಳಿವೆ; ರಾಜ್ಯದಲ್ಲಿ ಉತ್ಪಾದನೆ ಆಗುವ ಒಟ್ಟಾರೆ ವಿದ್ಯುತ್‌ನಲ್ಲಿ ಶೇಕಡ ಎಷ್ಟು ಕೃಷಿ ಪಂಪ್ ಸೆಟ್‌ಗಳಿಗೆ ಬಳಕೆ ಆಗುತ್ತದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಆರೋಗ್ಯ ಸಂಜೀವಿನಿ ಯೋಜನೆಗೆ ಆಸ್ಪತ್ರೆಗಳ ಸೇರ್ಪಡೆ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೨೦೦ (೧೩೭೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) 'ಆರೋಗ್ಯ ಸಂಜೀವಿನಿ' ಯೋಜನೆಯಡಿ ಮಂಡ್ಯ ಮೈಸೂರು, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ನೋಂದಾಯಿಸಿ ಕಾರ್ಯನಿರ್ವಹಿಸುತ್ತಿರುವ ಖಾಸಗಿ ಆಸ್ಪತ್ರೆಗಳು ಸಂಖ್ಯೆ ಎಷ್ಟು; ಯಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಮೇಲ್ಕಂಡ ಜಿಲ್ಲೆಗಳಲ್ಲಿ ಹೊಸದಾಗಿ ಎಷ್ಟು ಆಸ್ಪತ್ರೆಗಳನ್ನು ಆರೋಗ್ಯ ಸಂಜೀವಿನಿ' ಯೋಜನೆ ವ್ಯಾಪ್ತಿಗೆ ತರಲು ಕ್ರಮವಹಿಸಲಾಗಿದೆ ;

(ಇ) ಈ ಯೋಜನೆಯಡಿ ಎಷ್ಟು ಸಂಖ್ಯೆಯ ಖಾಯಿಲೆಗಳಿಗೆ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆಯ ಸೌಲಭ್ಯಗಳು ದೊರೆಯಲಿವೆ ; (ವಿವರ ನೀಡುವುದು)

(ಈ) ಈ ಯೋಜನೆಯಡಿ ನೋಂದಾಯಿಸಲ್ಪಟ್ಟ ಆಸ್ಪತ್ರೆಗಳಿಗೆ ಸರ್ಕಾರದ ವತಿಯಿಂದ ನೀಡುವ ಅನುದಾನ, ಸೌಲಭ್ಯಗಳೇನು ;

(ಉ) ಪ್ರಮುಖ ಖಾಸಗಿ ಆಸ್ಪತ್ರೆಗಳು ಈ ಯೋಜನೆಯಡಿ ನೋಂದಾಯಿಸಿಕೊಳ್ಳಲು ಹಿಂದೇಟು ಹಾಕುತ್ತಿರುವುದರಿಂದ ಗುಣಮಟ್ಟದ ಚಿಕಿತ್ಸೆ ಲಭ್ಯವಾಗುತ್ತಿಲ್ಲ ಎನ್ನುವ ಆರೋಪಗಳ ಕುರಿತು ಸರ್ಕಾರದ ನಿಲುವೇನು ?

# 'ಜ್ಞಾನಪೀಠ' ಪ್ರಶಸ್ತಿ ಪುರಸ್ಕೃತರ ಓದಿದ ಶಾಲೆಗಳನ್ನು ಅಭಿವೃದ್ಧಿ ಪಡಿಸುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೨೦೧ (೧೩೭೧) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕದ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರು ವ್ಯಾಸಂಗ ಮಾಡಿದ ಶಾಲೆಗಳನ್ನು ಸರ್ಕಾರ ಅಭಿವೃದ್ಧಿಪಡಿಸುತ್ತಿದೆಯೇ ;

(ಆ) ಇದ್ದಲ್ಲಿ, ರಾಜ್ಯ ಸರ್ಕಾರ ಈ ಉದ್ದೇಶಕ್ಕಾಗಿ ಮೀಸಲಿಟ್ಟಿರುವ ಅನುದಾನ ಎಷ್ಟು ; ಒಟ್ಟು ಎಷ್ಟು ಶಾಲೆಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ ; ಏನೆಲ್ಲಾ ಮೂಲಸೌಲಭ್ಯಗಳನ್ನು ಕಲ್ಪಿಸಲು ಯೋಜಿಸಿದೆ ; ಅನುಷ್ಠಾನಕ್ಕೆ ಸಮಿತಿ ರಚಿಸಲಾಗಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಇ) ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರು ವ್ಯಾಸಂಗ ಮಾಡಿದ ಶಾಲೆಗಳ ವಿವರ ನೀಡುವುದು: (ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರ ಹೆಸರು: ಓದಿದ ಶಾಲೆ ಹೆಸರು ಮತ್ತು ವಿಳಾಸ ; ಒದಗಿಸಿದ ಅನುದಾನದೊಂದಿಗೆ ಸಂಪೂರ್ಣ ವಿವರ ನೀಡುವುದು)

(ಈ) ಈ ಶಾಲೆಗಳು ನಿರ್ಮಾಣವಾದ ವರ್ಷ ಯಾವುದು ; ಇಲ್ಲಿ ವಿದ್ಯಾರ್ಥಿಗಳು ಈಗಲೂ ವ್ಯಾಸಂಗ ಮಾಡುತ್ತಿದ್ದಾರೆಯೇ ;

(ಉ) ಈವರೆವಿಗೂ ಸಂಪೂರ್ಣವಾಗಿ ಅಭಿವೃದ್ಧಿಪಡಿಸಲಾಗಿರುವ ಶಾಲೆಗಳು ಯಾವುವು ; ಬಾಕಿ ಉಳಿದಿದ್ದಲ್ಲಿ ಯಾವ ಶಾಲೆಗಳು, ಯಾವ ವೇಳೆಗೆ ಅಭಿವೃದ್ಧಿಪಡಿಸಲಾಗುವುದು ? (ವಿವರ ನೀಡುವುದು)

# ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿನ ಔಷಧಿಗಳ ಕೊರತೆ ಮತ್ತು ದಾಸ್ತಾನು ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೦೨ (೧೩೫೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಹಾಗೂ ಗೋದಾಮುಗಳಲ್ಲಿ (warehouse) ಔಷಧಿಗಳ ತೀವ್ರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಜೆಟ್‌ನಲ್ಲಿ ನಿಗದಿಪಡಿಸಿದ ೪೯೬ ಮಾದರಿಯ ಔಷಧಿಗಳ ಪೈಕಿ ಪ್ರಸ್ತುತ ಕೇವಲ ೧೨೦ ರಿಂದ ೧೮೦ ಮಾದರಿಯ ಔಷಧಿಗಳು ಮಾತ್ರ ಲಭ್ಯವಿರುವುದು ನಿಜವೇ ; ಆಗಿದ್ದಲ್ಲಿ, ಉಳಿದ ಔಷಧಿಗಳ ಲಭ್ಯತೆ ಇಲ್ಲದಿರಲು ಕಾರಣಗಳೇನು ;

(ಇ) ರಾಜ್ಯದ ಹಲವು ಜಿಲ್ಲಾ ಆಸ್ಪತ್ರೆಗಳಲ್ಲಿ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಅಗತ್ಯ ಔಷಧಿಗಳಿಲ್ಲದೆ ರೋಗಿಗಳು ಖಾಸಗಿ ಮೆಡಿಕಲ್ ಸ್ಟೋರ್‌ಗಳಿಂದ ಔಷಧಿ ಖರೀದಿಸುವಂತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹೊಸದಾಗಿ ೪೯೬ ಮಾದರಿಯ ಔಷಧಿಗಳ ಖರೀದಿ ಪ್ರಕ್ರಿಯೆ ಯಾವ ಹಂತದಲ್ಲಿದೆ ; ಗೋದಾಮುಗಳಲ್ಲಿ ಶೂನ್ಯ ದಾಸ್ತಾನು (zero stock) ಇರುವುದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ತುರ್ತು ಕ್ರಮಗಳೇನು ?

# ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ತೀವ್ರಗೊಳ್ಳುತ್ತಿರುವ ಮಾನವ ವನ್ಯಜೀವಿ ಸಂಘರ್ಷ, ಪರಿಹಾರ ವಿತರಣೆಯ ಸ್ಥಿತಿಗತಿ ಹಾಗೂ ತಡೆಗೋಡೆ ನಿರ್ಮಾಣದ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೦೩ (೧೩೬೧) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ಅರಣ್ಯ ಅಂಚಿನ ಗ್ರಾಮಗಳಲ್ಲಿ ವನ್ಯಜೀವಿಗಳ ದಾಳಿಯಿಂದ ಮೃತಪಟ್ಟ ನಾಗರಕರ ಸಂಖ್ಯೆ ಎಷ್ಟು ಇವರಲ್ಲಿ ಎಷ್ಟು ಕುಟುಂಬಗಳಿಗೆ ಸರ್ಕಾರಿ ಆದೇಶದಂತೆ ರೂ. ೧೫ ಲಕ್ಷ ಪರಿಹಾರವನ್ನು ಸಂಪೂರ್ಣವಾಗಿ ವಿತರಿಸಲಾಗಿದೆ ಮತ್ತು ಎಷ್ಟು ಪ್ರಕರಣಗಳು ಬಾಕಿ ಇದೆ ; (ಜಿಲ್ಲಾವಾರು ಮತ್ತು ವರ್ಷವಾರು ಪಟ್ಟಿ ನೀಡುವುದು)

(ಆ) ಮೈಸೂರು ಜಿಲ್ಲೆಯ ಟಿ ನರಸೀಪುರ ಮತ್ತು ಎಚ್ ಡಿ ಕೋಟೆ ಭಾಗಗಳಲ್ಲಿ ಚಿರತೆ ದಾಳಿಗಳು ಹೆಚ್ಚುತ್ತಿರುವುದು ಹಾಗೂ ಚಾಮರಾಜನಗರ ಬಂಡೀಪುರ ಅಂಚಿನ ಗ್ರಾಮಗಳಲ್ಲಿ ಹುಲಿ ದಾಳಿಯಿಂದ ಜಾನುವಾರು ಹಾನಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಈ ಭಾಗಗಳಲ್ಲಿ ಎಷ್ಟು ವಿಶೇಷ ಚಿರತೆ ಕಾರ್ಯಪಡೆ (Leopard task force) ತಂಡಗಳನ್ನು ನಿಯೋಜಿಸಲಾಗಿದೆ

(ಇ) ಬಂಡೀಪುರ ಮತ್ತು ನಾಗರಹೊಳೆ ಅಭಯಾರಣ್ಯಗಳ ಅಂಚಿನಲ್ಲಿರುವ ರೈತರ ಜಮೀನುಗಳಿಗೆ ಕಾಡಾನೆಗಳು ನುಗ್ಗದಂತೆ ತಡೆಯಲು ರೈಲ್ವೆ ಬ್ಯಾರಿಕೇಡ್ (Railway Barricade) ನಿರ್ಮಿಸಲಾಗಿದೆಯೇ, ಕಾಮಗಾರಿ ಎಷ್ಟು ಕಿಲೋಮೀಟರ್ ಪೂರ್ಣಗೊಂಡಿದ ಮತ್ತು ಅನುದಾನದ ಕೊರತೆಯಿಂದ ಅರ್ಧಕ್ಕೆ ನಿಂತಿರುವ ಕಾಮಗಾರಿಗಳ ವಿವರಗಳನ್ನು ನೀಡುವುದು;

(ಈ) ವನ್ಯಜೀವಿ ದಾಳಿಯಿಂದ ಮೃತಪಟ್ಟವರ ಕುಟುಂಬದ ಒಬ್ಬ ಸದಸ್ಯರಿಗೆ ಅನುಕಂಪ, ಆಧಾರದ ಮೇಲೆ ಸರ್ಕಾರಿ ಕೆಲಸ ನೀಡುವ ಅಥವಾ ತಿಂಗಳಿಗೆ ನಿಗದಿತ ಮಾಶಾಸನ ನೀಡುವ ಪ್ರಸ್ತಾವನೆ ಪ್ರಸ್ತುತ ಯಾವ ಹಂತದಲ್ಲಿದೆ ;

(ಉ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಸಂಘರ್ಷ ಪೀಡಿತ ಗ್ರಾಮಗಳ ಜನರಿಗೆ ರಾತ್ರಿ ವೇಳೆ ಅರಣ್ಯ ಇಲಾಖೆಯಿಂದ 'ಹೈ–ಇಂಟೆನ್ಸಿಟಿ' ಬೀದಿ ದೀಪಗಳು ಮತ್ತು ಸೋಲಾರ್ ದೀಪಗಳನ್ನು ಅಳವಡಿಸಲು ಹಾಗೂ ಡ್ರೋನ್ ಮೂಲಕ ನಿರಂತರ ನಿಗಾ ವಹಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕೆಪಿಎಸ್ ಮ್ಯಾಗ್ನೆಟ್ ಯೋಜನೆ ಮತ್ತು ಸರ್ಕಾರಿ ಶಾಲೆಗಳ ವಿಲೀನ ಪ್ರಕ್ರಿಯೆ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೦೪ (೧೩೫೯) ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜಾರಿಗೆ ತರಲು ಉದ್ದೇಶಿಸಿರುವ ಕೆಪಿಎಸ್ ಮ್ಯಾಗ್ನೆಟ್ ಯೋಜನೆಯ (KPS Magnet Scheme) ಉದ್ದೇಶ ಮತ್ತು ಸ್ವರೂಪವೇನು ; ಈ ಯೋಜನೆಯನ್ನು ಜಾರಿಗೊಳಿಸಲು ಸರ್ಕಾರವು ಎಡಿಬಿಯಿಂದ (ADB) ಪಡೆದಿರುವ ಸಾಲದ ಮೊತ್ತ ಎಷ್ಟು; ಮತ್ತು ಅದಕ್ಕಾಗಿ ವಿಧಿಸಲಾಗಿರುವ ಪ್ರಮುಖ ಷರತ್ತುಗಳೇನು ;

(ಆ) ಈ ಯೋಜನೆಯ ಅಡಿಯಲ್ಲಿ ರಾಜ್ಯದ ಸುಮಾರು ೪೦ ಸಾವಿರ ಸರ್ಕಾರಿ ಶಾಲೆಗಳನ್ನು ಮುಚ್ಚಲು ಅಥವಾ ವಿಲೀನಗೊಳಿಸಲು ಸರ್ಕಾರ ಮುಂದಾಗಿರುವುದು ನಿಜವೇ ; ಹಾಗಿದ್ದಲ್ಲಿ, ಈ

ಕ್ರಮದಿಂದ ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಶಿಕ್ಷಣದ ಮೇಲೆ ಉಂಟಾಗುವ ಪರಿಣಾಮಗಳ ಬಗ್ಗೆ ಸರ್ಕಾರವು ಅಧ್ಯಯನ ನಡೆಸಿದೆಯೇ ; (ವಿವರ ನೀಡುವುದು)

(ಇ) ಪ್ರಾಯೋಗಿಕವಾಗಿ 'ವಿಲೀನ' ಪ್ರಕ್ರಿಯೆಯ ಮೂಲಕ ಶಾಲೆಗಳನ್ನು ಸ್ಥಗಿತಗೊಳಿಸುತ್ತಿರುವ ಬಗ್ಗೆ ಶಿಕ್ಷಣ ತಜ್ಞರು ವ್ಯಕ್ತಪಡಿಸಿರುವ ಆತಂಕಕ್ಕೆ ಸರ್ಕಾರದ ಸ್ಪಷ್ಟನೆ ಏನು ;

(ಈ) ಈ ಯೋಜನೆಯು ಕಾರ್ಪೊರೇಟ್ ಹಿತಾಸಕ್ತಿಗೆ ಪೂರಕವಾಗಿದೆ ಎಂಬ ಆರೋಪಗಳ ಹಿನ್ನೆಲೆಯಲ್ಲಿ ಈ ಯೋಜನೆಯನ್ನು ಹಿಂಪಡೆಯಲು ಹಾಗೂ ಬರುವ ಬಜೆಟ್ ನಲ್ಲಿ ಈ ಬಗ್ಗೆ ಅಧಿಕೃತವಾಗಿ ಘೋಷಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ ?

## ಹೊಸದಾಗಿ ಎ.ಪಿ.ಎಲ್ (APL) ಪಡಿತರ ಚೀಟಿಗಳನ್ನು ನೀಡದಿರುವ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೦೫ (೧೩೬೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಹೊಸದಾಗಿ ಎ.ಪಿ.ಎಲ್ (APL) ಪಡಿತರ ಚೀಟಿಗಳನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹೊಸ ಕಾರ್ಡ್‌ಗಳ ವಿತರಣೆಯನ್ನು ಸ್ಥಗಿತಗೊಳಿಸಲು ಕಾರಣಗಳೇನು ;

(ಆ) ನ್ಯಾಯಬೆಲೆ ಅಂಗಡಿಗಳಲ್ಲಿ ಹಣ ಪಾವತಿಸಿ ರೇಷನ್ ಪಡೆಯಲು ನಿರಾಸಕ್ತಿ ತೋರಿದ ಸುಮಾರು ಶೇ.೮೦ ರಷ್ಟು ಎ.ಪಿ.ಎಲ್

ಕಾರ್ಡ್ ದಾರರ ಕಾರ್ಡ್‌ಗಳನ್ನು ಇಲಾಖೆಯು ರದ್ದುಗೊಳಿಸಿರುವುದು ಅಥವಾ ಡಿಲೀಟ್ ಮಾಡಿರುವುದು ನಿಜವೇ ;

(ಇ) ಎ.ಪಿ.ಎಲ್ ಕಾರ್ಡ್‌ಗಳ ರದ್ಧತಿಯಿಂದಾಗಿ ರೈತರು ಕೃಷಿ ಪತ್ತಿನ ಬ್ಯಾಂಕ್‌ಗಳಲ್ಲಿ ಬೆಳೆ ಸಾಲ ಪಡೆಯಲು ಮತ್ತು ಯಶಸ್ವಿನಿ ಯೋಜನೆಯಡಿ ಸೌಲಭ್ಯ ಪಡೆಯಲು ತೊಂದರೆ ಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ೭೦ ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಉಚಿತ ನೀಡುವ 'ಆಯುಷ್ಮಾನ್ ಭಾರತ್' ಯೋಜನೆಗೆ ಎ.ಪಿ.ಎಲ್ ಕಾರ್ಡ್ ಕಡ್ಡಾಯವಾಗಿದ್ದು ಕಾರ್ಡ್‌ಗಳ ರದ್ಧತಿಯಿಂದಾಗಿ ಲಕ್ಷಾಂತರ ಹಿರಿಯರು ಈ ಆರೋಗ್ಯ ಸೌಲಭ್ಯದಿಂದ ವಂಚಿತರಾಗುತ್ತಿರುವುದನ್ನು ಸರ್ಕಾರ ಹೇಗೆ ಸರಿಪಡಿಸಲಿದೆ ;

(ಉ) ಆರ್ಥಿಕವಾಗಿ ಹಿಂದುಳಿದ ವರ್ಗದವರಿಗೆ (EWS) ನೀಡಲಾಗುವ ಶೇ.೧೦ ರಷ್ಟು ಮೀಸಲಾತಿ ಸೌಲಭ್ಯ ಪಡೆಯಲು ಎ.ಪಿ.ಎಲ್ ಕಾರ್ಡ್ ಅತ್ಯಗತ್ಯವಾಗಿದ್ದು, ಕಾರ್ಡ್ ಇಲ್ಲದೆ ಈ ವರ್ಗದವರು ಶಿಕ್ಷಣ ಮತ್ತು ಉದ್ಯೋಗದಲ್ಲಿ ವಂಚಿತರಾಗುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ?

## ರಾಜ್ಯದಲ್ಲಿ ಕಾರ್ಯಪಾಲನಾ ಶಾಖೆಗಳನ್ನು ಪ್ರಾರಂಭಿಸುವ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೦೬ (೧೪೪೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೊಸದಾಗಿ ಎಷ್ಟು ವಿದ್ಯುತ್ ವಿತರಣ ನಿಗಮಗಳ ಕಾರ್ಯಪಾಲನಾ ಶಾಖೆಗಳನ್ನು ಸ್ಥಾಪಿಸಲಾಗಿದೆ ; ವರ್ಷವಾರು ಹಾಗೂ ಕಂಪನಿವಾರು ವಿವರ ನೀಡುವುದು ;

(ಆ) ರಾಜ್ಯದಲ್ಲಿ ಉಪವಿಭಾಗ ವ್ಯಾಪ್ತಿಯಲ್ಲಿ ಹೆಚ್ಚುವರಿ ಕಾರ್ಯಪಾಲನಾ ಶಾಖೆಯನ್ನು ಸ್ಥಾಪಿಸಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು ; ಗ್ರಾಹಕರ ಸಂಖ್ಯೆ, ಭೌಗೋಳಿಕ ವ್ಯಾಪ್ತಿ, ಆದಾಯ, ಕಾರ್ಯದೊತ್ತಡ, ತಾಂತ್ರಿಕ ಅವಶ್ಯಕತೆ ಇತ್ಯಾದಿಗಳ ಪೈಕಿ ಯಾವುವುಗಳನ್ನು ಆದ್ಯತೆಗೆ ಪರಿಗಣಿಸಲಾಗುವುದು ;

(ಇ) ಕಳೆದ ಮೂರು ವರ್ಷಗಳಲ್ಲಿ ಮೆಸ್ಕಾಂ ವ್ಯಾಪ್ತಿಯಲ್ಲಿ ಹೆಚ್ಚುವರಿ ಕಾರ್ಯಪಾಲನಾ ಶಾಖೆಗಳನ್ನು ಸ್ಥಾಪಿಸಲು ಸ್ವೀಕರಿಸಲಾದ ಪ್ರಸ್ತಾವನೆಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಎಷ್ಟು ಪ್ರಸ್ತಾವನೆಗಳನ್ನು ಅಂಗೀಕರಿಸಲಾಗಿದೆ: ಎಷ್ಟು ಪ್ರಸ್ತಾವನೆಗಳನ್ನು ತಿರಸ್ಕರಿಸಲಾಗಿದೆ ; ಪ್ರಸ್ತಾವನೆಗಳನ್ನು ತಿರಸ್ಕರಿಸುವುದಕ್ಕೆ ಇದ್ದ ಕಾರಣಗಳೇನು ;

(ಈ) ಉಡುಪಿ ಜಿಲ್ಲೆಯ ಕುಂದಾಪುರ ಉಪವಿಭಾಗ ವ್ಯಾಪ್ತಿಯಲ್ಲಿ ಹೆಚ್ಚುವರಿ ಕಾರ್ಯಪಾಲನಾ ಶಾಖೆಯನ್ನು ಹುಣ್ಸೆಮಕ್ಕಿ ಹಾಗೂ ತೆಕ್ಕಟ್ಟೆ ಪ್ರದೇಶಗಳಲ್ಲಿ ಸ್ಥಾಪಿಸಲು ಪ್ರಸ್ತಾವನೆ ಸ್ವೀಕರಿಸಲಾಗಿದೆಯೇ ; ಸದರಿ ಪ್ರಸ್ತಾವನೆಯ ಪ್ರಸ್ತುತ ಸ್ಥಿತಿಗತಿಗಳೇನು ; ಈ ಕುರಿತು ಇಲಾಖೆಯಿಂದ ಇದುವರೆಗೆ ಕೈಗೊಂಡ ಕ್ರಮಗಳೇನು ;

(ಉ) ಕುಂದಾಪುರ ಉಪವಿಭಾಗದಲ್ಲಿ ಕಾರ್ಯದೊತ್ತಡ ಹೆಚ್ಚುತ್ತಿರುವ ಹಿನ್ನೆಲೆ ಹೆಚ್ಚುವರಿ ಕಾರ್ಯಪಾಲನಾ ಶಾಖೆ ಸ್ಥಾಪಿಸುವ ಅಗತ್ಯವಿರುವುದನ್ನು ಸರ್ಕಾರ ಪರಿಗಣಿಸಿರುವುದೇ ; ಪರಿಗಣಿಸಿದ್ದರೆ, ಯಾವಾಗ ಹೊಸ ಶಾಖೆಯನ್ನು ಪ್ರಾರಂಭಿಸಲಾಗುವುದು ?

## ಆಡಳಿತಾತ್ಮಕ ಹಾಗೂ ಕಾರ್ಯನಿರ್ವಹಣಾ ಸಮಸ್ಯೆಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೦೭ (೧೪೪೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆರೋಗ್ಯ ಇಲಾಖೆಯಲ್ಲಿ ಉದ್ಭವವಾಗಿರುವ ಆಡಳಿತಾತ್ಮಕ ಹಾಗೂ ಕಾರ್ಯನಿರ್ವಹಣಾ ಸಮಸ್ಯೆಗಳ ಬಗ್ಗೆ ಸರ್ಕಾರದ ಗಮನದಲ್ಲಿದೆಯೇ ; ಅವು ಯಾವುವು ಮತ್ತು ಅವುಗಳನ್ನು ಪರಿಹರಿಸಲು ಕೈಗೊಂಡಿರುವ ಕ್ರಮಗಳೇನು ;

(ಆ) ಆರೋಗ್ಯ ಇಲಾಖೆ ಸಿಬ್ಬಂದಿ ವಿವಿಧ ಬೇಡಿಕೆಗಳನ್ನು ಮುಂದಿಟ್ಟು ಒಪಿಡಿ (OPD) ಸೇವೆಗಳನ್ನು ಸ್ಥಗಿತಗೊಳಿಸುವ ಮಾಹಿತಿ ನೀಡಿರುವುದು ಸರ್ಕಾರದ ಗಮನದಲ್ಲಿದೆಯೇ ; ಎನ್‌ಎಚ್‌ಎಮ್ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗೆ ವೇತನ ಹೆಚ್ಚಳವನ್ನು ಒಂದು ವರ್ಷಕ್ಕೆ ಸೀಮಿತಗೊಳಿಸಿ ನಂತರದ ವೇತನ ಹೆಚ್ಚಿಸದಿರಲು ಕಾರಣವೇನು ; ಈ ಕುರಿತು ಸರ್ಕಾರದ ನಡೆ ಮತ್ತು ಪರಿಹಾರ ಕ್ರಮಗಳೇನು ;

(ಇ) ರೇಟ್ ಕಾರ್ಡ್ ಆಧಾರದಲ್ಲಿ ಔಷಧ ಖರೀದಿ ಸರ್ಕಾರಕ್ಕೆ ಹೆಚ್ಚುವರಿ ಆರ್ಥಿಕ ಹೊರೆಯಾಗುತ್ತಿದೆಯೇ ; ರಾಜ್ಯದ ವಿವಿಧ ಸರ್ಕಾರಿ ಆಸ್ಪತ್ರೆಗಳಲ್ಲಿ ಆರೋಗ್ಯ ಸೇವೆ ಒದಗಿಸುತ್ತಿರುವ ಸಿಟಿ ಸ್ಕ್ಯಾನ್, ಎಂಆರ್‌ಐ ಸ್ಕ್ಯಾನ್ ಸೇರಿದಂತೆ ಇತರ ಡಯಾಗೋಸ್ಟಿಕ್ ಸೇವಾ ಪೂರೈಕೆದಾರರಿಗೆ ಬಾಕಿ ಬಿಲ್ಲುಗಳನ್ನು ಪಾವತಿಸದಿರಲು ಕಾರಣವೇನು ; ಬಾಕಿ ಮೊತ್ತ ಎಷ್ಟು ; ಪಾವತಿ ಮಾಡಿ ಈ ಸೇವೆಗಳನ್ನು ಯಾವಾಗ ಪುನರಾರಂಭಿಸಲಾಗುವುದು ;

(ಈ) ಮಂಗಳೂರಿನ ಸುಮಾರು ೧೭೦ ಕ್ಕಿಂತ ಹೆಚ್ಚು ವರ್ಷಗಳ ಇತಿಹಾಸ ಹೊಂದಿರುವ ವೆನ್‌ಲಾಕ್‌ನಲ್ಲಿ ಸಿಬ್ಬಂದಿ ಕೊರತೆಯಿದೆಯೇ ; ಆರೋಗ್ಯ ಇಲಾಖೆ ಮೂಲಭೂತ ಸೇವಾ ಇಲಾಖೆಯಾಗಿದ್ದು, ಅಗತ್ಯ ಪ್ರಮಾಣದ ವೈದ್ಯರು, ನರ್ಸ್‌ಗಳು ಹಾಗೂ ಇತರ ಸಿಬ್ಬಂದಿಯ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಒಟ್ಟಾರೆಯಾಗಿ, ರಾಜ್ಯದ ಆರೋಗ್ಯ ವ್ಯವಸ್ಥೆಯನ್ನು ಮತ್ತು ಇಲಾಖೆಯನ್ನು ಸುಧಾರಿಸಲು ಸರ್ಕಾರ ರೂಪಿಸಿರುವ ಸಮಗ್ರ ಕಾರ್ಯಯೋಜನೆಯೇನು ; ಅವುಗಳನ್ನು ಯಾವ ಕಾಲಮಿತಿಯೊಳಗೆ ಜಾರಿಗೆ ತರಲಾಗುವುದು ?

## ಪಡಿತರ ಚೀಟಿಗಳ ವಿತರಣೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೦೮ (೧೪೪೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅನರ್ಹರ ಬಿ.ಪಿ.ಎಲ್ ಪಡಿತರ ಚೀಟಿಗಳನ್ನು ರದ್ದು ಮಾಡುವ ಪ್ರಕ್ರಿಯೆ ನಡೆಯುತ್ತಿದ್ದು, ಬಿ.ಪಿ.ಎಲ್ ಕಾರ್ಡ್‌ನಿಂದ ಹೆಸರು ಕೈಬಿಟ್ಟಿರುವ ಅಥವಾ ಕಾರ್ಡ್ ರದ್ದಾದ ಕುಟುಂಬಗಳಿಗೆ ಹೊಸ ಎ.ಪಿ.ಎಲ್ ಕಾರ್ಡ್ ನೀಡುವ ಪ್ರಕ್ರಿಯೆ ಪ್ರಾರಂಭಿಸದಿರಲು ಕಾರಣವೇನು ; ಯಾವಾಗ ಪುನರಾರಂಭಿಸಲಾಗುವುದು ;

(ಆ) ಹೊಸ ಕಾರ್ಡ್ ವಿತರಣೆ ವಿಳಂಬವಾಗಿರುವುದಕ್ಕೆ ಕಾರಣವೇನು ; ಈ ಮೊದಲು ಹೊಸ ಕಾರ್ಡಿಗಾಗಿ ಸಲ್ಲಿಸಲಾದ ಅರ್ಜಿಗಳಲ್ಲಿ ಇನ್ನೂ ಎಷ್ಟು ಬಾಕಿಯಿವೆ ; ಅವುಗಳನ್ನು ವಿಲೇವಾರಿ ಮಾಡಲು ಸರ್ಕಾರ ಯಾವ ಕಾಲಮಿತಿಯನ್ನು ನಿಗದಿಪಡಿಸಿದೆ ;

(ಇ) ಬಿ.ಪಿ.ಎಲ್ ಕಾರ್ಡ್ ರದ್ದಾದ ಪರಿಣಾಮ ಹಲವು ಕುಟುಂಬಗಳು ಉಚಿತ ಪಡಿತರ, ಆರೋಗ್ಯ ಸೇವೆ, ಸಹಕಾರಿ ಸಂಸ್ಥೆಗಳಲ್ಲಿ ಸಾಲ ಹಾಗೂ ಇತರ ಸರ್ಕಾರಿ ಸೌಲಭ್ಯಗಳಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ; ಪಡಿತರ ಚೀಟಿಯನ್ನು ವಿವಿಧ ಸೌಲಭ್ಯಗಳ ಮಾನದಂಡವಾಗಿ ಬಳಸುವುದನ್ನು ತಡೆಯುವ ಸಹಿತ ಈ ಸಮಸ್ಯೆ ನಿವಾರಣೆಗೆ ಸರ್ಕಾರ ಯಾವ ಕ್ರಮವಹಿಸಿದೆ ;

(ಈ) ಮನೆ ನಿರ್ಮಾಣ, ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಬ್ಯಾಂಕ್ ಸಾಲ ಪಡೆಯುವ ಉದ್ದೇಶದಿಂದ ವಾರ್ಷಿಕ ಆದಾಯ ಹೆಚ್ಚು ತೋರಿಸಿರುವ ಕಾರಣಕ್ಕೆ ಅನರ್ಹ ಪಟ್ಟಿಗೆ ಸೇರಿಸಿರುವ ಕುಟುಂಬಗಳ ಬಗ್ಗೆ ಸರ್ಕಾರ ಪುನರ್ ಪರಿಶೀಲನೆ ನಡೆಸಿದೆಯೇ ;

(ಉ) ಆಯುಷ್ಮಾನ್ ಯೋಜನೆಯಡಿ ಹಿರಿಯ ನಾಗರಿಕರು ಸೌಲಭ್ಯ ಪಡೆಯಲು ಎಪಿಎಲ್ ಕಾರ್ಡ್ ಅಗತ್ಯವಿರುವ ಹಿನ್ನೆಲೆಯಲ್ಲಿ ಹೊಸ ಕಾರ್ಡ್ ಇಲ್ಲದೆ ಉಂಟಾಗುತ್ತಿರುವ ತೊಂದರೆಯನ್ನು ಪರಿಹರಿಸಲು ಸರ್ಕಾರದ ಕ್ರಮವೇನು ;

(ಊ) ತಾಂತ್ರಿಕ ಕಾರಣದಿಂದ ಹೊಸ ಕಾರ್ಡ್ ವಿತರಣೆ ತಡೆಹಿಡಿದಿದ್ದು, ಅರ್ಹತೆಯಿದ್ದರೂ ಕಾರ್ಡ್‌ರಹಿತರಾಗಿರುವ ಕುಟುಂಬಗಳಿಗೆ ತಾತ್ಕಾಲಿಕ ಅಥವಾ ಮಧ್ಯಂತರ ವ್ಯವಸ್ಥೆಯ ಮೂಲಕ ಸೌಲಭ್ಯ ನೀಡಲು ಸರ್ಕಾರದಿಂದ ಯಾವಾಗ ಕ್ರಮ ಕೈಗೊಳ್ಳಲಾಗುವುದು ?

## ರಾಜ್ಯದಲ್ಲಿ ವನ್ಯಜೀವಿ–ಮಾನವ ಸಂಘರ್ಷ ನಿವಾರಣೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೦೯ (೧೪೪೬) ಮಾನ್ಯ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವನ್ಯಜೀವಿ–ಮಾನವ ಸಂಘರ್ಷ ಪ್ರಕರಣಗಳು ಹೆಚ್ಚುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ; ಇಂತಹ ಪ್ರಕರಣಗಳನ್ನು ಸಮರ್ಪಕವಾಗಿ ನಿಭಾಯಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ವಿವಿಧ ಪ್ರದೇಶಗಳಲ್ಲಿ ಆನೆ, ಚಿರತೆ, ಮಂಗ, ನವಿಲು ಹಾಗೂ ಇತರ ಕಾಡುಪ್ರಾಣಿಗಳಿಂದ

ಕೃಷಿ, ತೋಟಗಾರಿಕೆ ಬೆಳೆ ಹಾನಿ, ಸಾಕುಪ್ರಾಣಿ, ಜಾನುವಾರು ಹಾಗೂ ಮಾನವರ ಮೇಲೆ ದಾಳಿಮಾಡಿದ ಪ್ರಕರಣಗಳ ಸಂಖ್ಯೆ ಎಷ್ಟು ; ಜಿಲ್ಲಾವಾರು ಹಾಗೂ ವನ್ಯಜೀವಿ ಪ್ರಭೇದವಾರು ವಿವರ ನೀಡುವುದು ;

(ಇ) ಇಂತಹ ಪ್ರಕರಣಗಳನ್ನು ಆಯಾ ಪ್ರದೇಶದ ಭೌಗೋಳಿಕ ಹಾಗೂ ಪರಿಸರ ವೈಶಿಷ್ಟ್ಯತೆಗಳಿಗೆ ಅನುಗುಣವಾಗಿ ನಿಭಾಯಿಸಲು ಅರಣ್ಯ ಇಲಾಖೆಯ ಬಳಿ ಅಗತ್ಯ ಮಾನವ ಸಂಪನ್ಮೂಲ, ತಾಂತ್ರಿಕ ಉಪಕರಣಗಳು ಹಾಗೂ ಮೂಲಸೌಕರ್ಯಗಳು ಲಭ್ಯವಿದೆಯೇ ; ಇಲ್ಲದಿದ್ದಲ್ಲಿ, ಅವುಗಳನ್ನು ಒದಗಿಸಲು ಕೈಗೊಂಡ ಕ್ರಮಗಳೇನು ;

(ಈ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ದಾಖಲಾಗಿರುವ ವನ್ಯಜೀವಿ–ಮಾನವ ಸಂಘರ್ಷ ಪ್ರಕರಣಗಳಷ್ಟು ; ಎಷ್ಟು ವನ್ಯಜೀವಿಗಳನ್ನು ಜನವಸತಿ ಪ್ರದೇಶಗಳಿಂದ ಸುರಕ್ಷಿತ ಅರಣ್ಯ ಪ್ರದೇಶಗಳಿಗೆ ಸ್ಥಳಾಂತರಿಸಲಾಗಿದೆ ;

(ಉ) ಹಾನಿಗೊಳಗಾದ ರೈತರು ಹಾಗೂ ನಾಗರಿಕರಿಗೆ ಪರಿಹಾರಧನ ನೀಡುವ ಸಹಿತ ವನ್ಯಜೀವಿ–ಮಾನವ ಸಂಘರ್ಷವನ್ನು ವ್ಯವಸ್ಥಿತವಾಗಿ ನಿಭಾಯಿಸಲು ಸರ್ಕಾರ ರೂಪಿಸಿರುವ ಸಮಗ್ರ ಕಾರ್ಯಯೋಜನೆಯೇನು ; ಮುನ್ನೆಚ್ಚರಿಕಾ ಕ್ರಮಗಳು, ಜನಜಾಗೃತಿ ಕಾರ್ಯಕ್ರಮಗಳು ಹಾಗೂ ತ್ವರಿತ ಪ್ರತಿಕ್ರಿಯಾ ತಂಡಗಳ (Rapid Response Teams) ಸ್ಥಾಪನೆ ಕುರಿತು ಸರ್ಕಾರದ ನಿಲುವೇನು ?

# ಬೀದರ್ ಜಿಲ್ಲೆಯಲ್ಲಿನ ಅನರ್ಹ ಬಿ.ಪಿ.ಎಲ್ ಕಾರ್ಡ್‌ಗಳ ರದ್ದು ಮತ್ತು ಹೊಸ ಕಾರ್ಡ್‌ಗಳ ವಿತರಣೆಯಲ್ಲಿನ ವಿಳಂಬ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೧೦ (೧೩೭೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಬಿ.ಪಿ.ಎಲ್ ಪಟ್ಟಿಯ ಮರುಪರಿಶೀಲನೆ ಸಂದರ್ಭದಲ್ಲಿ ಅನರ್ಹ ಕಾರ್ಡ್ ದಾರರ ಸಂಖ್ಯೆ ಎಷ್ಟು ; ಇವರಿಂದ ಸರ್ಕಾರಕ್ಕೆ ಆಗುತ್ತಿದ್ದ ಆರ್ಥಿಕ ನಷ್ಟವನ್ನು ತಡೆಯಲು ಕೈಗೊಂಡ ಕ್ರಮಗಳೇನು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಜಿಲ್ಲೆಯಲ್ಲಿನ ವಾರ್ಷಿಕ ಆದಾಯ ಮಿತಿ ಹಾಗೂ ಇತರ ಮಾನದಂಡಗಳ ಅಡಿಯಲ್ಲಿ ಅರ್ಹರಾಗಿದ್ದರೂ ತಾಂತ್ರಿಕ ಕಾರಣಗಳಿಂದ ಅಥವಾ "ಹೊಸ ಕಾರ್ಡ್ ವಿತರಣೆ ಸ್ಥಗಿತ" ಎಂಬ ನೆಪದಿಂದ ಪಡಿತರ ಚೀಟಿ ವಂಚಿತವಾಗಿರುವ ಬಡ ಕುಟುಂಬಗಳ ಸಂಖ್ಯೆ ಎಷ್ಟು ;

(ಇ) ಹೊಸ ಬಿ.ಪಿ.ಎಲ್ ಕಾರ್ಡ್‌ಗಾಗಿ ಸಲ್ಲಿಕೆಯಾಗಿರುವ ಅರ್ಜಿಗಳ ಪರಿಶೀಲನೆ ವಿಪರೀತ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅರ್ಜಿ ಸಲ್ಲಿಕೆಯಾದ ನಂತರ ಎಷ್ಟು ದಿನಗಳೊಳಗೆ ವಿಲೇವಾರಿ ಮಾಡಲು ಕಾಲಮಿತಿ ನಿಗದಿಪಡಿಲಾಗಿದೆ ;

(ಈ) ಅನರ್ಹ ಕಾರ್ಡ್‌ಗಳನ್ನು ರದ್ದುಪಡಿಸುವ ಪ್ರಕ್ರಿಯೆಯಲ್ಲಿ ಯಾವುದೇ ಮುನ್ಸೂಚನೆ ನೀಡದೆ ಅರ್ಹ ಬಡ ಕುಟುಂಬಗಳ ಕಾರ್ಡ್‌ಗಳನ್ನು ಅಮಾನತ್ತಿನಲ್ಲಿಟ್ಟಿರುವ ಪ್ರಕರಣಗಳು ಜಿಲ್ಲೆಯಲ್ಲಿ ವರದಿಯಾಗಿವೆಯೇ ; ಇದ್ದಲ್ಲಿ, ಅಂತಹ ಅರ್ಹ ಕುಟುಂಬಗಳಿಗೆ ನ್ಯಾಯ ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಪಡಿತರ ಚೀಟಿ ವಿತರಣೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಲು ಗ್ರಾಮ ಮಟ್ಟದ ಜಾಗೃತ ಸಮಿತಿಗಳನ್ನು ಬಲಪಡಿಸಲಾಗಿದೆಯೇ ; ಕಳೆದ ಆರು ತಿಂಗಳಲ್ಲಿ ಈ ಸಮಿತಿಗಳು ನಡೆಸಿದ ಸಭೆಗಳ ತಾಲ್ಲೂಕುವಾರು ವಿವರ ನೀಡುವುದು ?

## ಬೀದರ್ ಜಿಲ್ಲೆಯಲ್ಲಿ ತಾಯಿ–ಮಗು ಆರೋಗ್ಯ ಸೂಚ್ಯಂಕಗಳು ಮತ್ತು ಆಸ್ಪತ್ರೆಗಳ ಮೂಲಸೌಕರ್ಯ ಕುರಿತು

**ಡಾ|| ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೧೧ (೧೩೭೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ದಾಖಲಾಗಿರುವ ತಾಯಿ ಹಾಗೂ ಶಿಶು ಮರಣ ಪ್ರಮಾಣ (IMR) ಎಷ್ಟು: ರಾಜ್ಯದ ಸರಾಸರಿಯೊಂದಿಗೆ ಹೋಲಿಸಿದಾಗ ಜಿಲ್ಲೆಯ ಸಾಧನ ತೃಪ್ತಿಕರವಾಗಿದೆಯೇ ; (ವರ್ಷವಾರು ಮಾಹಿತಿ ನೀಡುವುದು)

(ಆ) ಜಿಲ್ಲೆಯಲ್ಲಿ ಹೆಚ್ಚಿನ ಅಪಾಯದ ಗರ್ಭಿಣಿಯರನ್ನು (High-Risk Pregnancies) ಮುಂಚಿತವಾಗಿ ಗುರುತಿಸಲು ಮತ್ತು ಅವರಿಗೆ ವಿಶೇಷ ಚಿಕಿತ್ಸೆಯನ್ನು ಒದಗಿಸಲು ಯಾವ ವ್ಯವಸ್ಥೆಗಳು ಜಾರಿಯಲ್ಲಿವೆ; ಇಂತಹ ಗರ್ಭಿಣಿಯರಿಗೆ ಸಕಾಲದಲ್ಲಿ ಆಂಬ್ಯುಲೆನ್ಸ್ ಸೌಲಭ್ಯ ಒದಗಿಸಲು ಕೈಗೊಂಡ ಕ್ರಮಗಳೇನು ;

(ಇ) ಜಿಲ್ಲೆಯ ಎಲ್ಲಾ ತಾಲ್ಲೂಕು ಆಸ್ಪತ್ರೆಗಳಲ್ಲಿ ಪೂರ್ಣ ಪ್ರಮಾಣದ ಐಸಿಯು (ICU) ಹಾಗೂ ವೆಂಟಿಲೇಟರ್ ಸೌಲಭ್ಯಗಳು

ಕಾರ್ಯನಿರ್ವಹಿಸುತ್ತಿವೆಯೇ ; ತಜ್ಞ ವೈದ್ಯರು ಮತ್ತು ಅರಿವಳಿಕೆ ತಜ್ಞ (Anaesthetists) ಕೊರತೆಯಿಂದಾಗಿ ಈ ಸೌಲಭ್ಯಗಳು ಸಮರ್ಪಕವಾಗಿ ಬಳಕೆಯಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬೀದರ್ ಜಿಲ್ಲೆಯಲ್ಲಿ ತೀವ್ರ ಅಪೌಷ್ಠಿಕತೆ (SAM) ಹಾಗು ಸಾಧಾರಣ ಅಪೌಷ್ಟಿಕತೆ (MAM) ಯಿಂದ ಬಳಲುತ್ತಿರುವ ಮಕ್ಕಳ ಪ್ರಮಾಣ ಎಷ್ಟು ; ಅಪೌಷ್ಠಿಕತೆ ನಿರ್ಮೂಲನೆಗಾಗಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ ಜಾರಿಗೊಳಿಸಿರುವ ವಿಶೇಷ ಯೋಜನೆಗಳು ಯಾವುವು ;

(ಉ) ಜಿಲ್ಲೆಯ ಗ್ರಾಮೀಣ ಹಾಗೂ ಗಡಿ ಭಾಗಗಳಲ್ಲಿ ಕಳೆದ ಒಂದು ವರ್ಷದಲ್ಲಿ ಎಷ್ಟು ಬಾರಿ 'ತಾಯಿ–ಮಗು ಆರೋಗ್ಯ ಶಿಬಿರ'ಗಳನ್ನು ಹಮ್ಮಿಕೊಳ್ಳಲಾಗಿದೆ ; ಈ ಶಿಬಿರಗಳ ಮೂಲಕ ಎಷ್ಟು ಫಲಾನುಭವಿಗಳಿಗೆ ಲಸಿಕೆ ಮತ್ತು ಪೌಷ್ಟಿಕಾಂಶ ಕಿಟ್‌ಗಳನ್ನು ವಿತರಿಸಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಸೌರ ಇಂಧನ ಯೋಜನೆಗಳ ಅನುಷ್ಠಾನ ಮತ್ತು ಸಬ್ಸಿಡಿ ವಿತರಣೆಯ ಕುರಿತು

**ಡಾ|| ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೧೨ (೧೩೭೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ 'ಪಿಎಂ ಸೂರ್ಯ ಘರ್' ಮುಫ್ತಾ ಬಿಜ್ಲಿ ಯೋಜನೆ ಹಾಗೂ ರಾಜ್ಯ ಸರ್ಕಾರದ ಇತರ ಯೋಜನೆಗಳ ಅಡಿಯಲ್ಲಿ ಮನೆಮೇಲೆ ಸೌರ ಪ್ಯಾನಲ್ (Rooftop Solar) ಅಳವಡಿಸಿಕೊಂಡಿರುವ ಒಟ್ಟು ಮನೆಗಳ ಸಂಖ್ಯೆ ಎಷ್ಟು: (ತಾಲ್ಲೂಕುವಾರು ವಿವರ ನೀಡುವುದು)

(ಆ) ಸೌರ ಪ್ಯಾನೆಲ್ ಅಳವಡಿಸಿಕೊಂಡ ಫಲಾನುಭವಿಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಮಂಜೂರಾದ ಸಬ್ಸಿಡಿ ಹಣವನ್ನು ಎಷ್ಟು ಜನರಿಗೆ ವಿತರಿಸಲಾಗಿದೆ ; ಸಬ್ಸಿಡಿ ಬಾಕಿ ಉಳಿದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ಹಾಗೂ ವಿಳಂಬಕ್ಕೆ ಕಾರಣಗಳೇನು ;

(ಇ) ಜಿಲ್ಲೆಯಲ್ಲಿರುವ ಎಷ್ಟು ಸರ್ಕಾರಿ ಕಟ್ಟಡಗಳಲ್ಲಿ (ಜಿಲ್ಲಾಧಿಕಾರಿ ಕಛೇರಿ, ತಾಲ್ಲೂಕು ಕಛೇರಿ, ಸರ್ಕಾರಿ ಆಸ್ಪತ್ರೆಗಳು, ಶಾಲೆಗಳು ಇತ್ಯಾದಿ) ಸೌರ ವಿದ್ಯುತ್ ವ್ಯವಸ್ಥೆಯನ್ನು ಅಳವಡಿಸಲಾಗಿದೆ ; ಇದರಿಂದ ಪ್ರತಿ ತಿಂಗಳು ಸರ್ಕಾರಕ್ಕೆ ಉಳಿತಾಯವಾಗುತ್ತಿರುವ ವಿದ್ಯುತ್ ವೆಚ್ಚ ಪ್ರಮಾಣ ಎಷ್ಟು ;

(ಈ) 'ಪಿಎಂ-ಕುಸಮ್' (PM-KUSUM) ಯೋಜನೆಯಡಿ ಬೀದರ್ ಜಿಲ್ಲೆಯ ರೈತರಿಗೆ ವಿತರಿಸಲಾದ ಸೌರ ಪಂಪ್‌ಸೆಟ್‌ಗಳ ಸಂಖ್ಯೆ ಎಷ್ಟು ; ಇನ್ನು ಎಷ್ಟು ರೈತರ ಅರ್ಜಿಗಳು ಅನುಮೋದನೆಗಾಗಿ ಬಾಕಿ ಉಳಿದಿವೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಉ) ಗಡಿ ಜಿಲ್ಲೆಯಾಗಿರುವ ಬೀದರ್‌ನಲ್ಲಿ ಸೌರ ವಿದ್ಯುತ್ ಉತ್ಪಾದನೆಯನ್ನು ಉತ್ತೇಜಿಸಲು ಹಾಗೂ 'ಸೌರ ಪಾರ್ಕ್' (Solar Park) ಸ್ಥಾಪಿಸಲು ಸರ್ಕಾರ ಯಾವುದೇ ವಿಶೇಷ ಕ್ರಿಯಾ ಯೋಜನೆ ರೂಪಿಸಿರುವುದೇ ; ಇದ್ದಲ್ಲಿ, ಅದರ ಹಂತವಾರು ವಿವರ ನೀಡುವುದು ?

## ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಸಂಶೋಧನಾ ಯೋಜನೆಗಳು ಮತ್ತು ಸ್ನಾತಕೋತ್ತರ ಶಿಕ್ಷಣ ಅಭಿವೃದ್ಧಿ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೧೩ (೧೩೭೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ಶೈಕ್ಷಣಿಕ ವರ್ಷಗಳಲ್ಲಿ ರಾಜ್ಯದ ವಿವಿಧ ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಕೈಗೆತ್ತಿಕೊಳ್ಳಲಾದ ಒಟ್ಟು ಸಂಶೋಧನಾ

ಯೋಜನೆಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಪೂರ್ಣಗೊಂಡಿರುವ ಮತ್ತು ಪ್ರಗತಿಯಲ್ಲಿರುವ ಯೋಜನೆಗಳ ವಿವರವೇನು ; (ವಿಶ್ವವಿದ್ಯಾಲಯವಾರು ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಮೇಲ್ಕಂಡ ಸಂಶೋಧನಾ ಯೋಜನೆಗಳಿಗೆ ಸರ್ಕಾರದಿಂದ ಬಿಡುಗಡೆಗೊಳಿಸಲಾದ ಒಟ್ಟು ಅನುದಾನದ ಮೊತ್ತ ಎಷ್ಟು ; ಇದರಲ್ಲಿ ಕೇಂದ್ರ ಸರ್ಕಾರ ಅಥವಾ ಯುಜಿಸಿ (UGC) ಲಭಿಸಿದ ಅನುದಾನದ ಪ್ರಮಾಣ ಎಷ್ಟು: (ವಿಶ್ವವಿದ್ಯಾಲಯವಾರು ವಿವರ ನೀಡುವುದು)

(ಇ) ರಾಜ್ಯದ ಸರ್ಕಾರಿ ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳಲ್ಲಿ ವಿದ್ಯಾರ್ಥಿಗಳು ಹೆಚ್ಚುತ್ತಿರುವ ಬೇಡಿಕೆಗೆ ಅನುಗುಣವಾಗಿ ಸ್ನಾತಕೋತ್ತರ (PG) ಪಠ್ಯಕ್ರಮಗಳ ಸೀಟುಗಳನ್ನು ಹೆಚ್ಚಿಸುವ ಕುರಿತು ಸರ್ಕಾರದ ಮುಂದೆ ಯಾವುದೇ ಪ್ರಸ್ತಾವನೆ ಇದೆಯೇ ; ಇದ್ದಲ್ಲಿ, ಪ್ರಸ್ತುತ ಶೈಕ್ಷಣಿಕ ವರ್ಷದಿಂದ ಎಷ್ಟು ಹೊಸ ಸೀಟುಗಳನ್ನು ಸೇರ್ಪಡೆಗೊಳಿಸಲು ಉದ್ದೇಶಿಸಲಾಗಿದೆ ;

(ಈ) ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಯುಜಿ–ನೆಟ್(UGC-NET) ಕೆ–ಸೆಟ್ (K-SET) ಹಾಗೂ ಸಿಎಸ್ಐಆರ್ (CSIR) ಮುಂತಾದ ರಾಷ್ಟ್ರೀಯ ಮಟ್ಟದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ಮಾಡಿಕೊಳ್ಳಲು ವಿಶ್ವವಿದ್ಯಾಲಯ ಮಟ್ಟದಲ್ಲಿ ವಿಶೇಷ ತರಬೇತಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆಯೇ ; ಇದ್ದಲ್ಲಿ, ಈವರೆಗೆ ಎಷ್ಟು ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆದಿದ್ದಾರೆ ;

(ಉ) ರಾಜ್ಯದ ವಿಶ್ವವಿದ್ಯಾಲಗಳ ಸಂಶೋಧಕರು ಮತ್ತು ಪ್ರಾಧ್ಯಾಪಕರು ಅಂತರಾಷ್ಟ್ರೀಯ ಮಟ್ಟದ ಗುಣಮಟ್ಟದ ನಿಯತಕಾಲಿಕೆಗಳಲ್ಲಿ (Scopus/Web of Science) ಪ್ರಕಟಿಸಿರುವ ಸಂಶೋಧನಾ ಪ್ರಬಂಧಗಳ ಸಂಖ್ಯೆ ಎಷ್ಟು ; ಸಂಶೋಧನೆಯ ಗುಣಮಟ್ಟ ಹೆಚ್ಚಿಸಲು ಸರ್ಕಾರದಿಂದ ನೀಡಲಾಗುತ್ತಿರುವ ಪ್ರೋತ್ಸಾಹಕಗಳು ಯಾವುವು ?

# ರಾಜ್ಯದಲ್ಲಿ ಅರಣ್ಯ ಬೆಂಕಿ ಪ್ರಕರಣಗಳ ತಡೆಗಟ್ಟುವಿಕೆ ಮತ್ತು ಅರಣ್ಯ ಸಂರಕ್ಷಣೆ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೧೪ (೧೩೭೬) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ವಿವಿಧ ಅರಣ್ಯ ವಲಯಗಳಲ್ಲಿ ಸಂಭವಿಸಿದ ಅರಣ್ಯ ಬೆಂಕಿ (Forest Fire) ಪ್ರಕರಣಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಮಾನವ ನಿರ್ಮಿತ ಹಾಗೂ ನೈಸರ್ಗಿಕ ಬೆಂಕಿ ಪ್ರಕರಣಗಳನ್ನು ಪ್ರತ್ಯೇಕವಾಗಿ ಗುರುತಿಸಲಾಗಿದೆಯೇ ; (ವರ್ಷವಾರು ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಮೇಲ್ಕಂಡ ಅವಧಿಯಲ್ಲಿ ಬೆಂಕಿಯಿಂದ ರಾಜ್ಯದ ಎಷ್ಟು ಹೆಕ್ಟೇರ್ ಅರಣ್ಯ ಪ್ರದೇಶ ಹಾನಿಗೊಳಗಾಗಿದೆ ; ಬೆಂಕಿಯಿಂದ ನಾಶವಾದ ವನ್ಯಜೀವಿಗಳು ಹಾಗೂ ಅಮೂಲ್ಯ ಮರಗಿಡಗಳ ಅಂದಾಜು ನಷ್ಟ ಮೌಲ್ಯ ಎಷ್ಟು ;

(ಇ) ಅರಣ್ಯ ಬೆಂಕಿಯನ್ನು ಮುಂಚಿತವಾಗಿ ಪತ್ತೆಹಚ್ಚಲು ಭಾರತೀಯ ಅರಣ್ಯ ಸಮೀಕ್ಷೆ (FSI) ನೀಡುವ 'ಉಪಗ್ರಹ' ಮೇಲ್ವಿಚಾರಣೆ (Satellite-based Alert System) ವ್ಯವಸ್ಥೆಯನ್ನು ರಾಜ್ಯದಲ್ಲಿ ಎಷ್ಟು ಪರಿಣಾಮಕಾರಿಯಾಗಿ ಜಾರಿಗೊಳಿಸಲಾಗಿದೆ ; ಬೇಸಿಗೆಯ ಪೂರ್ವದಲ್ಲಿ ಎಷ್ಟು ಕಿಲೋಮೀಟರ್ ಉದ್ದದ 'ಫೈರ್ ಲೈನ್' (Fire Line) ನಿರ್ಮಿಸಲಾಗಿದೆ ; (ವರ್ಷವಾರು ವಿವರ ನೀಡುವುದು)

(ಈ) ಅರಣ್ಯ ಗಡಿಭಾಗದ ಎಷ್ಟು ಜಿಲ್ಲೆಗಳಲ್ಲಿ ಅರಣ್ಯ ಬೆಂಕಿ ತಡೆ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ; ಕಾರ್ಯಕ್ರಮಗಳ ವಿವರವೇನು ;

(ಉ) ಅರಣ್ಯ ಬೆಂಕಿಯನ್ನು ತ್ವರಿತವಾಗಿ ನಿಯಂತ್ರಿಸಲು ರಾಜ್ಯ ಮಟ್ಟದಲ್ಲಿ ವಿಶೇಷ ಅರಣ್ಯ ಬೆಂಕಿ ಪ್ರತಿಕ್ರಿಯಾ ಪಡೆ (Special Forest Fire Task Force) ರಚಿಸಲಾಗಿದೆಯೇ ; ಇದ್ದಲ್ಲಿ, ಈ ಪಡೆಗೆ ಅಗತ್ಯವಾದ ಆಧುನಿಕ ಉಪಕರಣಗಳು ಹಾಗೂ ಅಗ್ನಿ ನಿರೋಧಕ ರಕ್ಷಣಾ ಉಡುಪುಗಳನ್ನು ಒದಗಿಸಲಾಗಿದೆಯೇ ? (ವಿವರ ನೀಡುವುದು)

## ರಾಜ್ಯದ ವಿದ್ಯುತ್ ವಿತರಣಾ ಸಂಸ್ಥೆಗಳಿಂದ ಕೈಗೊಂಡಿರುವ ಕ್ರಮದ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೧೫ (೧೪೦೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿದ್ಯುತ್ ವಿತರಣಾ ಸಂಸ್ಥೆಗಳಾದ BESCOM, HESCOM, GESCOM, MESCOM, CESC Mysuru ಸಂಸ್ಥೆಗಳಿಂದ ಕಳೆದ ಮೂರು ವರ್ಷಗಳಲ್ಲಿ ಗಳಿಸಿರುವ ಆದಾಯವೆಷ್ಟು ಮತ್ತು ನಷ್ಟವೆಷ್ಟು ;

(ಆ) ರಾಜ್ಯದಲ್ಲಿ ಘೋಷಿಸಿರುವ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹಜ್ಯೋತಿ ಅನುಷ್ಠಾನದ ನಂತರ ಈ ಮೇಲ್ಕಂಡ ವಿದ್ಯುತ್ ಸರಬರಾಜು ಕಂಪನಿಗಳ ಮೇಲೆ ಬಿದ್ದ ಆರ್ಥಿಕ ಹೊರೆ ಎಷ್ಟು ;

(ಇ) ರಾಜ್ಯದ ಎಷ್ಟು ಗ್ರಾಮೀಣ ಪ್ರದೇಶಗಳಲ್ಲಿ ವಿದ್ಯುತ್ ಸಂಪರ್ಕಕ್ಕಾಗಿ ನೀಡಿರುವ ಅರ್ಜಿಗಳು ಬಾಕಿ ಇವೆ ಮತ್ತು ಸಿ.ಎ.ಜಿ. ವರದಿಯಲ್ಲಿ ಉಲ್ಲೇಖಿಸಿರುವಂತೆ ವಿದ್ಯುತ್ ಖರೀದಿಯಲ್ಲಿ ಅನಿಯಮಿತತೆಗಳು ನಡೆದಿರುವುದು ನಿಜವೇ ಇದ್ದಲ್ಲಿ, ಯಾವ ವರ್ಷದಲ್ಲಿ ಮತ್ತು ಎಷ್ಟು ಮೊತ್ತದ ಅನಿಯಮಿತತೆಗಳು ನಡೆದಿವೆ ? (ಮಾಹಿತಿ ನೀಡುವುದು)

## ಗ್ರಾಮೀಣ ಪ್ರದೇಶಗಳಲ್ಲಿ ಮಂಜೂರಾದ ವೈದ್ಯಕೀಯ ಸಿಬ್ಬಂದಿಯ ಹುದ್ದೆಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೧೬ (೧೪೦೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ವೈದ್ಯರು, ತಜ್ಞರು ಮತ್ತು ನರ್ಸ್‌ಗಳ ಖಾಲಿ ಹುದ್ದೆಗಳು ಶೇಕಡವಾರು ಎಷ್ಟು ; ಈ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳಲಾಗುತ್ತಿದೆಯೇ ;

(ಆ) ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಪೂರ್ಣಕಾಲಿಕ ವೈದ್ಯರಿಲ್ಲ ; ತಾಲ್ಲೂಕು ಆಸ್ಪತ್ರೆಗಳಲ್ಲಿ ತಜ್ಞರ ಹುದ್ದೆಗಳು ಖಾಲಿ ಇರುವುದಕ್ಕೆ ಕಾರಣಗಳೇನು ;

(ಇ) ಗ್ರಾಮೀಣ ಪ್ರದೇಶಗಳಲ್ಲಿ ಗ್ರಾಮೀಣ ಸೇವಾ ಬಾಂಡ್ ಯೋಜನೆಯನ್ನು ಜಾರಿಗೆ ತರಲಾಗಿದೆಯೇ ಮತ್ತು ರಾಜ್ಯದ ಎಷ್ಟು ತಾಲ್ಲೂಕು ಆಸ್ಪತ್ರೆಗಳು ೨೪X೭ ಹೆರಿಗೆ ಸೇವೆ ನೀಡುತ್ತಿವೆ ? (ಮಾಹಿತಿ ನೀಡುವುದು)

## ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೧೭ (೧೪೦೫) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಮಂಜೂರಾದ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು ; ಪ್ರಸ್ತುತ ಶೇಕಡವಾರು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ೨೦೨೬ರ ಒಳಗೆ ಎಲ್ಲಾ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಯೋಜನೆ ಇದೆಯೇ ;

(ಆ) ರಾಜ್ಯದಲ್ಲಿ ಎಷ್ಟು ಸರ್ಕಾರಿ ಶಾಲೆಗಳು ಕಟ್ಟಡ ಭದ್ರತಾ ಪ್ರಮಾಣ ಪತ್ರ (Structural Safety Certificate) ಇಲ್ಲದೇ ಕಾರ್ಯ ನಿರ್ವಹಿಸುತ್ತಿವೆ ಇಂತಹ ಶಾಲೆಗಳನ್ನು ಇಲಾಖೆ ವತಿಯಿಂದ ಗುರುತಿಸಲಾಗಿದೆಯೇ ; ಬಿದ್ದು ಹೋಗುವ ಸ್ಥಿತಿಯಲ್ಲಿರುವ ಸರ್ಕಾರಿ ಶಾಲೆಗಳು ಎಷ್ಟು ; ಇವುಗಳ ಪುನರ್ ನಿರ್ಮಾಣಕ್ಕೆ ೨೦೨೬ನೇ ಆಯವ್ಯಯದಲ್ಲಿ ಎಷ್ಟು ಅನುದಾನ ಮೀಸಲಿಡಲಾಗಿದೆ ;

(ಇ) ೨೦೧೯ ರಿಂದ ೨೦೨೫ರವರೆಗೆ ರಾಜ್ಯದಲ್ಲಿ ಎಷ್ಟು ಸರ್ಕಾರಿ ಶಾಲೆಗಳನ್ನು ಮುಚ್ಚಲಾಗಿತ್ತು ಅಂತಹ ಶಾಲೆಗಳನ್ನು ಪುನರ್ ಆರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಏನು ?

## ಉನ್ನತ ಶಿಕ್ಷಣ ಇಲಾಖೆಯಿಂದ ಕೈಗೊಂಡಿರುವ ಕ್ರಮದ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೨೧೮ (೧೪೦೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯ ಸರ್ಕಾರದ ಅಧೀನದಲ್ಲಿ ಬರುವ ಉನ್ನತ ಶಿಕ್ಷಣ ಇಲಾಖೆಗೆ ಮಂಜೂರಾದ ಅನುದಾನ ಎಷ್ಟು ; ಬಿಡುಗಡೆಯಾದ ಅನುದಾನದಲ್ಲಿ ಖರ್ಚಾಗಿರುವ ಮೊತ್ತವೆಷ್ಟು ;

(ಆ) ಇಲಾಖೆಯು ವಿವಿಧ ಕಾಮಗಾರಿಗಳಿಗೆ ನೇಮಿಸಲಾಗಿದ್ದ ಗುತ್ತಿಗೆದಾರರ ಬಿಲ್ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ಮತ್ತು ಕಳೆದ ಮೂರು ವರ್ಷಗಳಲ್ಲಿ ವಿದ್ಯಾರ್ಥಿಗಳಿಂದ ಶುಲ್ಕದ ಮೂಲಕ ಬಂದಿರುವ ಆದಾಯವೆಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಇ) ಉನ್ನತ ಶಿಕ್ಷಣ ಇಲಾಖೆಯ ಅಡಿಯಲ್ಲಿ ಬರುವ ಎಷ್ಟು ವಿಶ್ವವಿದ್ಯಾಲಯಗಳಲ್ಲಿ ಕೃತಕ ಬುದ್ಧಿಮತ್ತೆಯಂತಹ ವೃತ್ತಿಪರ ಕೋರ್ಸ್‌ಗಳಲ್ಲಿ ಪಠ್ಯಕ್ರಮ ಅಳವಡಿಸಲಾಗಿದೆ? (ವಿಶ್ವವಿದ್ಯಾಲಯವಾರು ಮಾಹಿತಿ ನೀಡುವುದು)

## ನೂತನ ಪಬ್ಲಿಕ್ ಶಾಲೆಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೧೨೯ (೧೯೯) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಡಿಬಿ ನೆರವಿನೊಂದಿಗೆ ರೂ.೨೫೦೦.೦೦ ಕೋಟಿ ಮೊತ್ತದಲ್ಲಿ ಸುಮಾರು ೫೦೦ ಶಾಲೆಗಳನ್ನು ನೂತನ ಪಬ್ಲಿಕ್ ಶಾಲೆಗಳನ್ನಾಗಿ ಪ್ರಾರಂಭಿಸಲಾಗುವುದು ಎಂದು ಆಯವ್ಯಯ ೨೦೨೫–೨೬ನೇ ಸಾಲಿನಲ್ಲಿ ತಿಳಿಸಿರುವಂತೆ ಇಲ್ಲಿಯವರೆಗೆ ಎಷ್ಟು ಶಾಲೆಗಳನ್ನು ಪ್ರಾರಂಭಿಸಲಾಗಿದೆ ; ತಾಲ್ಲೂಕುವಾರು ಮಾಹಿತಿ ನೀಡುವುದು ;

(ಆ) ರೂ. ೨೫೦೦.೦೦ ಕೋಟಿಗಳಲ್ಲಿ ಇಲ್ಲಿಯವರೆಗೆ ಒಟ್ಟು ಖರ್ಚಾದ ಮೊತ್ತ ಎಷ್ಟು ; ಶಾಲಾವಾರು/ಕಾಮಗಾರಿವಾರು/ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) ರಾಜ್ಯದಲ್ಲಿನ ಶಾಲೆಗಳನ್ನು ಪಬ್ಲಿಕ್ ಶಾಲೆಗಳನ್ನಾಗಿ ಪರಿವರ್ತಿಸಲು ಇರುವ ಮಾನದಂಡಗಳೇನು ; ಯಾವುದರ ಆಧಾರದ ಮೇಲೆ ಇವುಗಳನ್ನು ಪಬ್ಲಿಕ್ ಶಾಲೆಗಳನ್ನಾಗಿ ಪರಿವರ್ತಿಸಲಾಗುತ್ತಿದೆ ; ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು ;

(ಈ) ಆಯವ್ಯಯ ೨೦೨೫–೨೬ನೇ ಸಾಲಿನಲ್ಲಿ ತಿಳಿಸಿರುವಂತೆ, ರಾಜ್ಯದ ಅರ್ಹ ೧೦೦ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು, ಪ್ರೌಢ ಶಾಲೆಗಳನ್ನು ಹಾಗೂ ೫೦ ಪ್ರೌಢ ಶಾಲೆಗಳನ್ನು ಪದವಿ ಪೂರ್ವ ಕಾಲೇಜುಗಳನ್ನಾಗಿ ಉನ್ನತೀಕರಿಸಲಾಗಿದೆ ; ಈ ಕುರಿತು ಜಿಲ್ಲಾವಾರು ಮಾಹಿತಿ ನೀಡುವುದು ;

(ಉ) ಆಯವ್ಯಯ ೨೦೨೫–೨೬ನೇ ಸಾಲಿನಲ್ಲಿ ತಿಳಿಸಿರುವಂತೆ ಸರ್ಕಾರಿ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಹೆಚ್ಚುವರಿ ಕೊಠಡಿ, ಶೌಚಾಲಯಗಳ ನಿರ್ಮಾಣ ಮತ್ತು ದುರಸ್ಥಿ ಕಾಮಗಾರಿಗಳಿಗೆ ಹಾಗೂ ಅಗತ್ಯ ಪಿಠೋಪಕರಣಗಳನ್ನು ಖರೀದಿಸಲು ಬಿಡುಗಡೆ ಮಾಡಿದ ಒಟ್ಟು ಮೊತ್ತ ಎಷ್ಟು ; ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು ?

## ರಾಜ್ಯದಲ್ಲಿ ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ಸಮಸ್ಯೆಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೧೨೨೦ (೧೪೦೦) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಜ್ಯೋತಿ ಸಂಜೀವಿನಿ ಸೌಲಭ್ಯವನ್ನು ನೀಡುವ ಆಲೋಚನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವ ಕಾಲಮಿತಿಯಲ್ಲಿ ಸೌಲಭ್ಯವನ್ನು ನೀಡಲಾಗುವುದು ;

(ಆ) ರಾಜ್ಯದಲ್ಲಿನ ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರು ತಮ್ಮ Salary Slip

ಅನ್ನು ಸರ್ಕಾರಿ ನೌಕರರಂತೆ ನೇರವಾಗಿ ಸ್ವತಃ ಪಡೆಯುವಂತೆ ಅವಕಾಶ ಮಾಡಿಕೊಡದೇ ಇರಲು ಕಾರಣವೇನು ; ಈ ಸೌಲಭ್ಯವನ್ನು ಸದರಿಯವರಿಗೆ ನೀಡುವ ಬಗ್ಗೆ ಸರ್ಕಾರದ ನಿಲುವೇನು ;

(ಇ) ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರು ಜೀವ ವಿಮೆಯ ಕಂತನ್ನು HRMS ನಿಂದ ಕಡಿತಗೊಳಿಸಿ ಸರ್ಕಾರಿ ನೌಕರರಂತೆ ಇವರಿಗೂ ಕೂಡಾ ನೇರವಾಗಿ HRMS ನಿಂದ LIC ಸಂಸ್ಥೆಗೆ ವರ್ಗಾವಣೆಯಾಗುವಂತೆ ಅವಕಾಶ ಮಾಡಿಕೊಡಬಹುದಲ್ಲವೇ ; ಈ ಬಗ್ಗೆ ಇಲಾಖೆ ಕೈಗೊಳ್ಳಬಹುದಾದ ಕ್ರಮಗಳೇನು ;

(ಈ) ಇಲಾಖೆಯು ಸರ್ಕಾರಿ ನೌಕರರಿಗೆ ನೀಡಲು ಇಚ್ಚಿಸಿರುವ ESR (Electronic Service Record) ವ್ಯವಸ್ಥೆಯನ್ನು ಅನುದಾನಿತ ಶಾಲಾ ಕಾಲೇಜುಗಳ ನೌಕರರಿಗೂ ಅನ್ವಯಿಸುವಂತೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿರುವ ಸರ್ಕಾರಿ ಹಾಗೂ ಅನುದಾನಿತ ITI ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳ ನೇಮಕಾತಿ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೧೨೨೧ (೧೪೦೧) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಹಾಗೂ ಅನುದಾನಿತ ITI ಸಂಸ್ಥೆಗಳು ಎಷ್ಟು ; ಅವು ಯಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳು ಎಷ್ಟು ; (ಜಿಲ್ಲಾವಾರು ಸಂಸ್ಥೆವಾರು ಮಾಹಿತಿ ನೀಡುವುದು)

(ಇ) ಈ ಸಂಸ್ಥೆಗಳಲ್ಲಿ ಬಹಳ ವರ್ಷಗಳಿಂದ ಖಾಲಿ ಇರುವ ಹುದ್ದೆಗಳಿಂದ ವಿದ್ಯಾರ್ಥಿಗಳಿಗೆ ಪ್ರಸ್ತುತ ಇರುವ ನವೀಕೃತ ತಾಂತ್ರಿಕ ಶಿಕ್ಷಣ ನೀಡುವಲ್ಲಿ ಬಹಳ ಸಮಸ್ಯೆಯಾಗುತ್ತಿದ್ದು ಈ ಹುದ್ದೆಗಳನ್ನು ತುಂಬಿಕೊಳ್ಳಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳುತ್ತಿದೆ ; ಯಾವ ಕಾಲಮಿತಿಯಲ್ಲಿ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು ?

## ಚಿಂಕಾರ ಪ್ರಭೇದ ಪ್ರಾಣಿಗಳನ್ನು ರಕ್ಷಿಸುವ ಕುರಿತು

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೨೨ (೧೩೨೪) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಳಿವಿನಂಚಿನಲ್ಲಿರುವ ಚಿಂಕಾರ ಪ್ರಭೇದ ಪ್ರಾಣಿಗಳನ್ನು ರಕ್ಷಿಸಲು ಸರ್ಕಾರವು ೨೦೧೫ರಲ್ಲಿ ಎಡ ಹಳ್ಳಿ ಚಿಂಕಾರ ರಕ್ಷಿತಾರಣ್ಯ ಎಂದು ಘೋಷಣೆ ಮಾಡಿ ಚಿಂಕಾರ ಪ್ರಾಣಿಗಳ ಸಂರಕ್ಷಿಸಲು ಕ್ರಮವು ಸರಿಯಾಗಿದ್ದು, ಸದರಿ ಅರಣ್ಯ ಪ್ರದೇಶವು ಬೀಳಗಿ ಹಾಗೂ ಮುಧೋಳ ತಾಲ್ಲೂಕಿನ ವ್ಯಾಪ್ತಿಯನ್ನು ಒಳಗೊಂಡಿದ್ದು ಪ್ರಾಣಿ ಸಂರಕ್ಷಣೆಯೊಂದಿಗೆ ಸಾರ್ವಜನಿಕರ ಸಮಸ್ಯೆಗಳಿಗೂ ಧ್ವನಿ ಆಗುವಂತೆ ಸರ್ಕಾರ ಮಾರ್ಗಸೂಚನೆ ಹೊರಡಿಸಿದ್ದರೂ ಅಧಿಕಾರಿಗಳ ನಿರ್ಲಕ್ಷತೆಯಿಂದ ರಕ್ಷಿತಾರಣ್ಯದ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು ಮತ್ತು ರೈತರಿಗೂ ಉಂಟಾಗುತ್ತಿರುವ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿವೆಯೇ ;

(ಆ) ಬಂದಿದ್ದರೆ, ಪ್ರಾಣಿಗಳ ರಕ್ಷಣೆಯೊಂದಿಗೆ ರೈತರು ಹಾಗೂ ಸಾರ್ವಜನಿಕರು ಎದುರಿಸುತ್ತಿರುವ ಸಮಸ್ಯೆಗಳ ನಿವಾರಣೆಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ವಿವರವಾಗಿ ಮಾಹಿತಿಯನ್ನು ತಿಳಿಸುವುದು)

## ರಾಜ್ಯದಲ್ಲಿ ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳಲ್ಲಿ ಹೆಣ್ಣು ಮಕ್ಕಳ ಶಿಕ್ಷಣದ ಉತ್ತೇಜನಕ್ಕಾಗಿ ಸರ್ಕಾರ ಕೈಗೊಂಡ ಕ್ರಮಗಳ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೨೩ (೧೩೨೫) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅನುದಾನಿತ ಹಾಗೂ ಅನುದಾನ ರಹಿತ ಖಾಸಗಿ ಶಾಲೆಗಳು ಎಷ್ಟು ; ಅಲ್ಲಿ ಕಲಿಯುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು: ಹೆಣ್ಣು ಮತ್ತು ಗಂಡು ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಅನುದಾನಿತ ಹಾಗೂ ಅನುದಾನ ರಹಿತ ಖಾಸಗಿ ಶಾಲೆಗಳು ಪೂರ್ವ ಪ್ರಾಥಮಿಕ ಹಂತದಿಂದ ಪ್ರೌಢ ಶಾಲಾ ಹಂತದವರೆಗೂ ನಡೆಸುವ ಶಾಲಾ ಪ್ರವೇಶ ಪ್ರಕ್ರಿಯೆಯಲ್ಲಿ ಶೇ.೫೦ ರಷ್ಟು ಸೀಟುಗಳನ್ನು ಹೆಣ್ಣು ಮಕ್ಕಳಿಗೆ ಮೀಸಲಿಡಬೇಕೆಂದು ಸರ್ಕಾರ ಸುತ್ತೋಲೆ ಹೊರಡಿಸಿದ್ದು ಸರಿಯೆಷ್ಟೇ ; ಈ ಸುತ್ತೋಲೆ ಜಾರಿಯಲ್ಲಿದೆಯೇ ; (ಮಾಹಿತಿ ನೀಡುವುದು)

(ಇ) ಹೆಣ್ಣು ಮಕ್ಕಳಿಗೆ ಶಾಲಾ ಪ್ರದೇಶಕ್ಕೆ ಉತ್ತೇಜನೆ ನೀಡುವ ದಿಶೆಯಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ;

(ಈ) ಹೆಣ್ಣು ಮಕ್ಕಳ ಶಿಕ್ಷಣವನ್ನು ಉತ್ತೇಜಿಸಲು ಪ್ರವೇಶ ಫೀ ಕಡಿಮೆ ಮಾಡಲು ಸರ್ಕಾರ ಚಿಂತನೆ ಮಾಡಿದೆಯೇ ?

# ಬಾಗಲಕೋಟೆ ಜಿಲ್ಲೆಯಲ್ಲಿ ಪಡಿತರ ಚೀಟಿಗಳನ್ನು ಹೊಂದಿರುವವರ ಮಾಹಿತಿ ಕುರಿತು

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೨೪ (೧೪೧೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಿನಾಂಕ: ೦೩.೧೧.೨೦೨೫ ರಂದು ಸರ್ಕಾರ ಹೊರಡಿಸಿದ ಆದೇಶದ ಪ್ರಕಾರ ಬಾಗಲಕೋಟೆ ಜಿಲ್ಲೆಯಲ್ಲಿ ಆಧ್ಯತಾ ಪಡಿತರ ಚೀಟಿಗಳನ್ನು ಹೊಂದಿರುವವರು ಎಷ್ಟು ; ಎಷ್ಟು ಅನರ್ಹ ಫಲಾನುಭವಿಗಳನ್ನು ಆಧ್ಯೆತೆತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಜಿಲ್ಲೆಯಲ್ಲಿ ಆಧ್ಯೆತೆತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಿದ ನಂತರ ಅರ್ಹ ಫಲಾನುಭವಿಗಳು ಆಧ್ಯತಾ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಸಲ್ಲಿಸಿದ ಅಕ್ಷೇಪಣಾ ಅರ್ಜಿಗಳ ಸಂಖ್ಯೆ ಎಷ್ಟು ; ಆಕ್ಷೇಪಣೆಗಳನ್ನು ಪರಿಶೀಲಿಸಲಾಗಿ ಎಷ್ಟು ಆಧ್ಯೆತೇತರ ಪಡಿತರ ಚೀಟಿಗಳನ್ನು ಆಧ್ಯತಾ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲಾಗಿದೆ ; (ತಾಲ್ಲೂಕುವಾರು ಮಾಹಿತಿಯನ್ನು ನೀಡುವುದು)

(ಇ) ಅನರ್ಹರು ಹೊಂದಿದ ಆಧ್ಯತಾ ಪಡಿತರ ಚೀಟಿಗಳನ್ನು ಅಧ್ಯೆತೆತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಿದ ನಂತರ ಅಷ್ಟೇ ಸಂಖ್ಯೆ ಫಲಾನುಭವಿಗಳಿಗೆ ಆಧ್ಯತಾ ಪಡಿತರ ಚೀಟಿಗಳನ್ನು ನೀಡಲು ಕ್ರಮವಹಿಸುವಂತೆ ಸರ್ಕಾರ ಸೂಚಿಸಿದ್ದು, ಈ ನಿಟ್ಟಿನಲ್ಲಿ ಬಾಗಲಕೋಟೆ ಜಿಲ್ಲೆಯಲ್ಲಿ ಎಷ್ಟು ಅರ್ಹ ಫಲಾನುಭವಿಗಳಿಗೆ ಅಧ್ಯತಾ ಪಡಿತರ ಚೀಟಿಗಳನ್ನು ವಿತರಿಸಲಾಗಿದೆ ? (ತಾಲ್ಲೂಕುವಾರು ಮಾಹಿತಿಯನ್ನು ನೀಡುವುದು)

# ಶಾಲಾ ಆವರಣಗಳಲ್ಲಿ ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳಿಂದ ವಿದ್ಯುತ್ ದುರ್ಘಟನೆಯಾಗುತ್ತಿರುವ ಕುರಿತು

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೨೫ (೧೪೧೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಅನೇಕ ಸರ್ಕಾರಿ ಹಾಗೂ ಖಾಸಗಿ ಶಾಲಾ ಆವರಣಗಳಲ್ಲಿ ವಿದ್ಯುತ್ ಕಂಬ, ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳಿದ್ದು, ಶಾಲಾ ಆವರಣಗಳಲ್ಲಿ ವಿದ್ಯುತ್ ತಂತಿಗಳು ಕೂಡಾ ಹಾದು ಹೋಗಿರುತ್ತದೆ, ಕೊಪ್ಪಳ, ತುಮಕೂರು, ಹಾವೇರಿ ಜಿಲ್ಲೆಗಳಲ್ಲಿ ವಿದ್ಯುತ್ ದುರ್ಘಟನೆಯಿಂದ ವಿದ್ಯಾರ್ಥಿಗಳು ಗಾಯಗೊಂಡಿದ್ದು ಸಾವನ್ನಪ್ಪಿರುವುದು ಪತ್ರಿಕೆಗಳಲ್ಲಿ ವರದಿಯಾಗಿವೆ ; ಬಾಗಲಕೋಟೆ ಜಿಲ್ಲೆಯ ಬಾಗಲಕೋಟೆ ನಗರದ ಬಿಟಿಡಿಎ ವ್ಯಾಪ್ತಿಯಲ್ಲಿನ ಯೂನಿಟ್–೨ರಲ್ಲಿ ಸುಮಾರು ೧೫ ಎಕರೆ ವ್ಯಾಪ್ತಿಯಲ್ಲಿರುವ ಪಿಎಂ ಕೇಂದ್ರೀಯ ವಿದ್ಯಾಲಯದಲ್ಲಿ ೪೬೩ ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದು, ಸದರಿ ಶಾಲೆ ಆವರಣದಲ್ಲಿ ಶಿಕ್ಷಕರ ವಸತಿ ಗೃಹಗಳಿದ್ದು ಸುಮಾರು ೩೦ ಶಿಕ್ಷಕರು ವಾಸಿಸುತ್ತಿರುತ್ತಾರೆ, ಇಂತಹ ಶಾಲಾ ಆವರಣದಲ್ಲಿ ೧೧೦ KV High Tension ವಿದ್ಯುತ್ ತಂತಿಯು ಹಾದು ಹೋಗಿದ್ದು, ಶಾಲೆಯಲ್ಲಿನ ವಿದ್ಯಾರ್ಥಿಗಳು, ಪೋಷಕರು ಹಾಗೂ ಶಾಲಾ ಸಿಬ್ಬಂದಿ ವರ್ಗವು ಜೀವಭಯದಲ್ಲಿದ್ದು, ವಿದ್ಯುತ್ ತಂತಿಗಳು ಹಾಯ್ದು ಹೋದ ಕಾರಣಕ್ಕಾಗಿಯೇ ಶಾಲೆಗೆ ಸಂಬಂಧಿಸಿದಂತೆ ಯಾವುದೇ ಹೊಸ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳದಂತಾಗಿದೆ, ಕಳೆದ ೯ ವರ್ಷಗಳಿಂದ ಸಮಸ್ಯೆ ಇದ್ದರೂ, ಪರಿಹರಿಸಲು ಅನೇಕ ಸಾರಿ ಸಂಬಂಧಿಸಿದವರಿಗೆ ದೂರಗಳನ್ನು ಸಲ್ಲಿಸಿದರೂ, ಸರ್ಕಾರದ ಆದೇಶ

ಸಂಖ್ಯೆ: KPTCL ಬಾಗಲಕೋಟೆ ಇವರ ಪತ್ರ ಸಂಖ್ಯೆ: CEE/BGKT/TRNS/SEE/(0)/AEE-5/24-25/F-11A&B/26405-09, ದಿನಾಂಕ:೨೪.೦೩.೨೦೨೫ ರಂದು ಹೊರಡಿಸಿದ್ದರೂ ಕೂಡಾ ಈವರೆಗೆ ಸಂಬಂಧಪಟ್ಟವರು ಯಾವುದೇ ಕ್ರಮಕೈಗೊಳ್ಳದೇ ಇರುವ ಗಂಭೀರ ಸಮಸ್ಯೆಯು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಸದರಿ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; ಯಾವ ಕಾಲಮಿತಿಯಲ್ಲಿ ಈ ಎಲ್ಲಾ ಸಮಸ್ಯೆಯನ್ನು ಪರಿಹರಿಸಿ, ವಿದ್ಯಾರ್ಥಿಗಳು ಮತ್ತು ಪಾಲಕರು, ಶಿಕ್ಷಕರ ಆತಂಕ ದೂರ ಮಾಡಲು ಕ್ರಮ ವಹಿಸಲಾಗುವುದು ?

## ಅನ್ನ–ಸುವಿಧ ಯೋಜನೆ ಕುರಿತು

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೨೬ (೧೪೧೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳು ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೭೫ ವಯಸ್ಸಿನ ಮೇಲ್ಪಟ್ಟ ಹಿರಿಯ ನಾಗರೀಕರು ಮಾತ್ರ ಇರುವ ಮನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅಂತಹ ಎಷ್ಟು ಹಿರಿಯ ನಾಗರೀಕ ಫಲಾನುಭವಿ ಮನೆಗಳಿಗೆ ಸರ್ಕಾರದ ಅನ್ನ–ಸುವಿಧ ಯೋಜನೆ ತಲುಪಿದೆ ; ಇನ್ನೂ ಬಾಕಿ ಇರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ತಿಳಿಸುವುದು)

(ಇ) ಬಾಗಲಕೋಟೆ ಜಿಲ್ಲೆಯಲ್ಲಿ ೭೫ ವಯಸ್ಸಿನ ಮೇಲ್ಪಟ್ಟ ಹಿರಿಯ ನಾಗರೀಕರು ಮಾತ್ರ ಇರುವ ಮನೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು) ಅಂತಹ ಹಿರಿಯ ನಾಗರೀಕರು ಮಾತ್ರ ಇರುವ ಮನೆಗಳಲ್ಲಿ ಎಷ್ಟು ಫಲಾನುಭವಿಗಳಿಗೆ ಅನ್ನ-ಸುವಿಧ ಯೋಜನೆ ತಲುಪಿದೆ ಹಾಗೂ ಇನ್ನೂ ಬಾಕಿ ಇರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಈ) ರಾಜ್ಯದಲ್ಲಿ ಹಾಗೂ ಜಿಲ್ಲೆಯಲ್ಲಿನ ಎಲ್ಲಾ ಅರ್ಹ ಫಲಾನುಭವಿಗಳಿಗೆ ಈ ಯೋಜನೆ ತಲುಪಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬೆಳ್ತಂಗಡಿ ತಾಲ್ಲೂಕಿನ ಶಾಲೆಗಳ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೧೨೨೭ (೧೪೨೪) ಮಾನ್ಯ ಶಾಲಾ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನಲ್ಲಿ ಒಟ್ಟು ಎಷ್ಟು ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿವೆ ; ಸದರಿ ಶಾಲೆಗಳಲ್ಲಿ ಪ್ರತಿ ತರಗತಿಯಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಆ) ಸದರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಪ್ರಮಾಣಕ್ಕೆ ತಕ್ಕಂತೆ, ಪ್ರತಿ ತರಗತಿಗೆ ಪ್ರತ್ಯೇಕ ಕೊಠಡಿ ವ್ಯವಸ್ಥೆ ಇದೆಯೇ ; ಎಲ್ಲಾ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಶಿಕ್ಷಕರ ಲಭ್ಯತೆ ಇದೆಯೇ ; (ವಿವರ ನೀಡುವುದು)

(ಇ) ಹಲವಾರು ಶಾಲೆಗಳಲ್ಲಿ ಕೊಠಡಿಗಳ ಕೊರತೆಯಿಂದಾಗಿ ಬಹಳ ವರ್ಷಗಳಿಂದ “ಒಂದೇ ಕೊಠಡಿಯಲ್ಲಿ ಹಲವು ತರಗತಿಗಳು ನಡೆಯುತ್ತಿರುವುದು” ಹಾಗೂ ಬಹುತೇಕ ಶಾಲೆಗಳಲ್ಲಿ ತುಂಬಾ ಕಾಲದಿಂದ ಸಾಕಷ್ಟು ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸದರಿ ಶಾಲೆಗಳಲ್ಲಿ ಶೈಕ್ಷಣಿಕ ಗುಣಮಟ್ಟ ಕಾಪಾಡುವ ಹಿತದೃಷ್ಟಿಯಿಂದ ಪ್ರತಿ ತರಗತಿಗೆ ಯಾವ ಕಾಲಮಿತಿಯೊಳಗೆ ಪ್ರತ್ಯೇಕ ಕೊಠಡಿ ನಿರ್ಮಾಣ ಮಾಡಲಾಗುವುದು ಹಾಗೂ ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಪೂರ್ಣಕಾಲಿಕ ಶಿಕ್ಷಕರನ್ನು ನೇಮಿಸಲಾಗುವುದು ?

## ಜಿಲ್ಲಾಸ್ಪತ್ರೆಗಳಲ್ಲಿ ಸೇವೆಗಳು ಸ್ಥಗಿತಗೊಂಡಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೨೮ (೧೪೨೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಜಿಲ್ಲಾಸ್ಪತ್ರೆಗಳಲ್ಲಿ ಸಿ.ಟಿ. ಸ್ಕ್ಯಾನಿಂಗ್ ಹಾಗೂ ಎಂ.ಆರ್.ಐ ಸೇವೆಗಳು ಸ್ಥಗಿತಗೊಂಡಿರುವುದರಿಂದ, ರೋಗಿಗಳು ಪರದಾಡುವಂತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಜಿಲ್ಲಾಸ್ಪತ್ರೆಗಳಲ್ಲಿ ಸಿ.ಟಿ. ಸ್ಕ್ಯಾನಿಂಗ್ ಹಾಗೂ ಎಂ.ಆರ್.ಐ ಸೇವೆಗಳು ಸ್ಥಗಿತಗೊಂಡಿರುವುದರಿಂದ, ಬಡ ರೋಗಿಗಳು ಖಾಸಗಿ ಲ್ಯಾಬ್ ಗಳಿಗೆ ದುಬಾರಿ ಶುಲ್ಕ ಪಾವತಿಸಲಾಗದೆ ಮತ್ತು ಬೇರೆ ದೂರದ ನಗರಗಳಿಗೆ ಅಲೆಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿದ್ದು, ಈ ಸೇವೆಗಳ ಅಲಭ್ಯತೆಯಿಂದಾಗಿ ಬಡರೋಗಿಗಳು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಇದನ್ನು ತಡೆಯಲು ಸರ್ಕಾರ ಸಕಾಲದಲ್ಲಿ ಸೂಕ್ತ ಹಾಗೂ ಅಗತ್ಯ ಕ್ರಮ ವಹಿಸದೇ ಈ ರೀತಿಯ ನಿರ್ಲಕ್ಷ್ಯತೆ ತೋರಲು ಕಾರಣಗಳೇನು ;

(ಇ) ಬಡವರು, ಮಧ್ಯಮ ವರ್ಗದವರು ಆರೋಗ್ಯ ಸಮಸ್ಯೆಗಳ ಚಿಕಿತ್ಸೆಗೆ ಸರ್ಕಾರಿ ಆಸ್ಪತ್ರೆಗಳನ್ನೇ ಸಂಪೂರ್ಣವಾಗಿ ಅವಲಂಬಿಸಿದ್ದು, ಸಕಾಲದಲ್ಲಿ ಸಿ.ಟಿ ಸ್ಕ್ಯಾನಿಂಗ್ ಹಾಗೂ ಎಂ.ಆರ್.ಐ ಸೇವೆಗಳು ಸಿಗದೆ ಸಂಕಷ್ಟ ಎದುರಿಸುತ್ತಿದ್ದು, ಇದನ್ನು ತಡೆಯಲು ಸರ್ಕಾರ ಇದುವರೆಗೆ ಕೈಗೊಂಡ ಕ್ರಮವೇನು ;

(ಈ) ಸಿ.ಟಿ. ಸ್ಕ್ಯಾನಿಂಗ್ ಹಾಗೂ ಎಂ.ಆರ್.ಐ ಸೇವೆಗಳು ರಾಜ್ಯದ ಎಲ್ಲಾ ಜಿಲ್ಲಾಸ್ಪತ್ರೆಗಳಲ್ಲಿ ಯಾವುದೇ ಅಡೆತಡೆ ಅಥವಾ ವ್ಯತ್ಯಯ ಇಲ್ಲದೆ ರೋಗಿಗಳಿಗೆ ಸಕಾಲದಲ್ಲಿ ಹಾಗೂ ನಿರಂತರವಾಗಿ ಸಿಗುವಂತೆ ಮಾಡಲು ಯಾವ ಕಾಲಮಿತಿಯೊಳಗೆ ಅಗತ್ಯ ಕ್ರಮ ವಹಿಸಲಾಗುವುದು ?

## ಎಪಿಎಲ್ ಕಾರ್ಡ್ ವಿತರಣೆ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೨೯ (೧೪೨೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯು ಎಪಿಎಲ್ ಕಾರ್ಡ್‌ಗಳಿಗೂ ಅವಕಾಶ ನೀಡದ ಪರಿಣಾಮ ರೈತರು ನಾನಾ ಕೃಷಿ ಪತ್ತಿನ ಬ್ಯಾಂಕ್ ಮತ್ತು ಇತರೆ ಬ್ಯಾಂಕ್‌ಗಳಲ್ಲಿ ಸೌಲಭ್ಯಗಳನ್ನು ಪಡೆಯಲಾಗುತ್ತಿಲ್ಲ, ಅಷ್ಟೇ ಅಲ್ಲದೇ ರೈತರು, ವಿಶೇಷಚೇತನರು, ಅನಾರೋಗ್ಯ ಪೀಡಿತರು ಯಶಸ್ವಿನಿ ಕಾರ್ಡ್, ಆಯುಷ್ಮಾನ್ ಭಾರತ್ ಸೇರಿದಂತೆ ಆರೋಗ್ಯ ಕಾರ್ಡ್‌ಗಳನ್ನು ಸಹ ಮಾಡಿಸಲು ಆಗದೆ ಅತ್ಯಂತ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ೨೦೨೩–೨೪, ೨೦೨೪–೨೫ ಮತ್ತು ೨೦೨೫–೨೬ ನೇ ಸಾಲಿನಲ್ಲಿ ಒಟ್ಟು ಎಷ್ಟು ಎಪಿಎಲ್ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗಿದೆ ಅಥವಾ ನಿಷ್ಕ್ರಿಯಗೊಳಿಸಲಾಗಿದೆ ಮತ್ತು ಅದಕ್ಕೆ ಕಾರಣಗಳೇನು ;

(ಇ) ಪ್ರಸ್ತುತ ಚಾಲ್ತಿಯಲ್ಲಿರುವ ಎಪಿಎಲ್ ಪಡಿತರ ಚೀಟಿಗಳ ಸಂಖ್ಯೆ ಎಷ್ಟು ;

(ಈ) ಹೊಸ ಎಪಿಎಲ್ ಪಡಿತರ ಚೀಟಿ ವಿತರಣೆಯನ್ನೇ ಸಂಪೂರ್ಣವಾಗಿ ನಿಲ್ಲಿಸಲಾಗಿದೆಯೇ ; ನಿಲ್ಲಿಸಲಾಗಿದ್ದಲ್ಲಿ, ಅದಕ್ಕೆ ಕಾರಣಗಳೇನು ;

(ಉ) ಎಪಿಎಲ್ ಪಡಿತರ ಚೀಟಿಗಳನ್ನು ಏಕಾಏಕಿ ರದ್ದುಪಡಿಸಿರುವುದು ಅಥವಾ ನಿಷ್ಕ್ರಿಯಗೊಳಿಸಲಾಗಿರುವುದು ಮತ್ತು ಹೊಸದಾಗಿ ಎಪಿಎಲ್ ಪಡಿತರ ಚೀಟಿ ವಿತರಣೆಯನ್ನೇ ಸಂಪೂರ್ಣವಾಗಿ ನಿಲ್ಲಿಸಲಾಗಿರುವುದರಿಂದ ಹಿರಿಯ ನಾಗರಿಕರು, ರೈತರು, ವಿಶೇಷಚೇತನರು, ಅನಾರೋಗ್ಯ ಪೀಡಿತರು, ಗಂಭೀರ ಕಾಯಿಲೆಗಳಿಂದ ನರಳುತ್ತಿರುವವರು ಹಾಗೂ ಮಹಿಳೆಯರು ಅರ್ಹರಾಗಿದ್ದರೂ ಕೂಡ ಸರ್ಕಾರದ ಹಲವಾರು ಯೋಜನೆಗಳು ಹಾಗೂ ಸೇವೆಗಳಿಂದ ವಂಚಿತರಾಗುತ್ತಿರುವುದನ್ನು ತಪ್ಪಿಸಲು ಸರ್ಕಾರ ತಗೆದುಕೊಳ್ಳಲಿರುವ ಕ್ರಮಗಳೇನು ?

## ನಿರ್ಗತಿಕ ಮಾನಸಿಕ ಅಸ್ವಸ್ಥರಿಗೆ ಚಿಕಿತ್ಸೆ ಮತ್ತು ಪುನರ್ವಸತಿ ಕಲ್ಪಿಸುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೩೦ (೧೪೨೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬಸ್ ಹಾಗೂ ರೈಲು ನಿಲ್ದಾಣಗಳು, ಬೀದಿ ಬದಿ ಸೇರಿ ವಿವಿದೆಡೆ ಅಲೆದಾಡುತ್ತಿರುವ ನಿರ್ಗತಿಕ ಮಾನಸಿಕ ಅಸ್ವಸ್ಥರನ್ನು ಗುರುತಿಸಿ, ಅವರಿಗೆ ಚಿಕಿತ್ಸೆ ಸಹಿತ ಪುನರ್ವಸತಿ ಕಲ್ಪಿಸುವ ಯೋಜನೆಯ ಅನುಷ್ಠಾನದ ತುರ್ತು ಅಗತ್ಯತೆ ಮತ್ತು ಅನಿವಾರ್ಯತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಇದುವರೆಗೆ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ರಾಜ್ಯದ ಎಲ್ಲಾ ಜಿಲ್ಲಾಸ್ಪತ್ರೆಗಳು ಹಾಗೂ ಪ್ರಮುಖ ಆಸ್ಪತ್ರೆಗಳಲ್ಲಿ ಈ ಸಂಬಂಧಿತ ತುರ್ತು ಆರೈಕೆ ಮತ್ತು ಪುನರ್ವಸತಿ ಕೇಂದ್ರಗಳನ್ನು ಈಗಾಗಲೇ ಸ್ಥಾಪಿಸಲಾಗಿದೆಯೇ ;

(ಈ) ಬಸ್ ಹಾಗೂ ರೈಲು ನಿಲ್ದಾಣಗಳೂ, ಬೀದಿ ಬದಿ ಸೇರಿ ವಿವಿದೆಡೆ ಅಲೆದಾಡುತ್ತಿರುವ ನಿರ್ಗತಿಕ ಮಾನಸಿಕ ಅಸ್ವಸ್ಥರನ್ನು ಗುರುತಿಸಿ, ಅವರಿಗೆ ಚಿಕಿತ್ಸೆ ಸಹಿತ ಪುನರ್ವಸತಿ ಕಲ್ಪಿಸಲೇಬೇಕಾದ ಕೆಲಸ ಅತ್ಯಂತ ತುರ್ತಾಗಿ ಆಗಬೇಕಿದ್ದು ಆರೈಕೆ ಕೇಂದ್ರಗಳನ್ನು ಆರಂಭಿಸಲು ಸರ್ಕಾರ ಈ ಕೂಡಲೇ ಅಗತ್ಯ ಕ್ರಮ ಕೈಗೊಳ್ಳುವುದೇ ;

(ಉ) ಬಸ್ ಹಾಗೂ ರೈಲು ನಿಲ್ದಾಣಗಳು, ಬೀದಿ ಬದಿ ಸೇರಿ ವಿವಿದೆಡೆ ಅಲೆದಾಡುತ್ತಿರುವ ನಿರ್ಗತಿಕ ಮಾನಸಿಕ ಅಸ್ವಸ್ಥರಿಗೆ ಪೂರ್ಣ ಪ್ರಮಾಣದಲ್ಲಿ ಚಿಕಿತ್ಸೆ ಸಹಿತ ಪುನರ್ವಸತಿ ಕಲ್ಪಿಸುವ ಯೋಜನೆಯನ್ನು ಕಡ್ಡಾಯವಾಗಿ ರಾಜ್ಯದ ಎಲ್ಲಾ ಜಿಲ್ಲಾಸ್ಪತ್ರೆಗಳು ಹಾಗೂ ಪ್ರಮುಖ ಆಸ್ಪತ್ರೆಗಳಲ್ಲಿ ಯಾವ ಕಾಲಮಿತಿಯೊಳಗೆ ಅನುಷ್ಠಾನಕ್ಕೆ ತರಲಾಗುವುದು ?

## ದಕ್ಷಿಣ ಕನ್ನಡ ಜಿಲ್ಲೆಯ ಗ್ರಾಮೀಣ ಭಾಗದ ಶಾಲೆಗಳ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೩೧ (೧೪೫೫) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯ ಗ್ರಾಮೀಣ ಭಾಗದ ಬಹುತೇಕ ಶಾಲೆಗಳಲ್ಲಿ ಹಲವಾರು ಅಭಿವೃದ್ಧಿ ಕಾಮಗಾರಿಗಳು ಅತ್ಯಂತ ತುರ್ತಾಗಿ ಮತ್ತು ಅತ್ಯಗತ್ಯವಾಗಿ ಆಗಬೇಕಾದ ತೀವ್ರ ಅನಿವಾರ್ಯತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಗ್ರಾಮೀಣ ಭಾಗದ ಶಾಲೆಗಳಲ್ಲಿ ದೀರ್ಘಕಾಲದಿಂದ ಅಭಿವೃದ್ಧಿ ಕಾಮಗಾರಿಗಳನ್ನು ಅನುಷ್ಠಾನ ಮಾಡದೇ ಇರಲು ಕಾರಣಗಳೇನು ;

(ಇ) ೨೦೨೩–೨೪, ೨೦೨೪–೨೫ ಮತ್ತು ೨೦೨೫–೨೬ ನೇ ಆರ್ಥಿಕ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಗ್ರಾಮೀಣ ಭಾಗದ ಸದರಿ ಶಾಲೆಗಳಿಗೆ ನೀಡಿರುವ ಅನುದಾನದ ವಿವರಗಳೇನು ; ಸದರಿ ಅನುದಾನದಲ್ಲಿ ಅನುಷ್ಠಾನಗೊಳಿಸಿರುವ ಕಾಮಗಾರಿಗಳ ವಿವರಗಳೇನು ; (ವರ್ಷವಾರು ಹಾಗೂ ಶಾಲಾವಾರು ಪ್ರತ್ಯೇಕ ವಿವರ ನೀಡುವುದು)

(ಈ) ಸದರಿ ಶಾಲೆಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆಯಿಂದಾಗಿ ವಿದ್ಯಾರ್ಥಿಗಳಿಗೆ ಸಾಕಷ್ಟು ತೊಂದರೆಯಾಗಿದ್ದು, ಅದನ್ನು ನಿವಾರಿಸಲು ಸರ್ಕಾರ ಇದುವರೆಗೆ ಯಾವುದೇ ಸೂಕ್ತ ಕ್ರಮ ಕೈಗೊಳ್ಳದೇ ಇರಲು ಕಾರಣಗಳೇನು ;

(ಉ) ಜಿಲ್ಲೆಯ ಗ್ರಾಮೀಣ ಭಾಗದ ಶಾಲೆಗಳಲ್ಲಿ ಶೈಕ್ಷಣಿಕ ಗುಣಮಟ್ಟ ಕಾಪಾಡುವುದು ಹಾಗೂ ವಿದ್ಯಾರ್ಥಿಗಳ ಭವಿಷ್ಯದ ದೃಷ್ಟಿಯಿಂದ ಸದರಿ ಶಾಲೆಗಳ ಅಭಿವೃದ್ಧಿ ಕಾಮಗಾರಿಗಳಿಗೆ ಯಾವ ಕಾಲಮಿತಿಯೊಳಗೆ ಅಗತ್ಯವಿರುವ ಅನುದಾನವನ್ನು ಒದಗಿಸಿ, ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುವುದು ?

## ಖಾಸಗಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಹಸ್ತಾಂತರ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೨೩೨ (೧೪೩೪) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಖಾಸಗಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಹಸ್ತಾಂತರ ಮತ್ತು ಸ್ಥಳಾಂತರಕ್ಕೆ ಅನುಮತಿ ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಈ ಅರ್ಜಿಗಳಲ್ಲಿ ಬಾಕಿ ಇರುವ ಮತ್ತು ಅನುಮತಿ ಪಡೆದ ಅರ್ಜಿಗಳೆಷ್ಟು ; ಬಾಕಿ ಇರಲು ಕಾರಣಗಳೇನು ; (ಪೂರ್ಣ ವಿವರಗಳನ್ನು ಒದಗಿಸುವುದು)

(ಆ) ಖಾಸಗಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಹಸ್ತಾಂತರಕ್ಕೆ ಇರುವ ನಿಯಮಾವಳಿಗಳು ಏನು ; ಸದರಿ ನಿಯಮಾವಳಿಗಳನ್ನು ಸರಳೀಕರಣಗೊಳಿಸಲು ಶಾಲಾ ಶಿಕ್ಷಣ ಇಲಾಖೆಯು ಹೊರಡಿಸಿರುವ ಸುತ್ತೋಲೆಗಳು ಯಾವುವು ; (ಪೂರ್ಣ ವಿವರಗಳನ್ನು ಒದಗಿಸುವುದು)

(ಇ) ಶಾಲಾ ಶಿಕ್ಷಣ ಇಲಾಖೆಯ ಅನುದಾನಿತ ಮತ್ತು ಅನುದಾನ ರಹಿತ ಖಾಸಗಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸ್ಥಳಾಂತರಕ್ಕೆ ನಿಗದಿಪಡಿಸಿರುವ ನಿಯಮಾವಳಿಗಳು ಯಾವುವು ; (ವಿವರಗಳನ್ನು ಒದಗಿಸುವುದು)

(ಈ) ಶಾಲಾ ಶಿಕ್ಷಣ ಇಲಾಖೆಯ ಅಂತರ ಜಿಲ್ಲಾ ಸ್ಥಳಾಂತರ ಪ್ರಕರಣಗಳಲ್ಲಿ ಇಲಾಖೆಯ ವಿಭಾಗವಾರು ಅಪರ ಆಯುಕ್ತರಿಗೆ ನೀಡಿದ್ದ ಅಧಿಕಾರವನ್ನು ಹಿಂದಕ್ಕೆ ಪಡೆದಿರುತ್ತದೆಯೇ ; ಪಡೆದಿದ್ದಲ್ಲಿ, ಇದಕ್ಕೆ ಕಾರಣಗಳೇನು ; ಇದರಿಂದ ಕಡತ ವಿಲೇವಾರಿ ನಿಧಾನ ಆಗುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ ;

(ಉ) ರಾಜ್ಯದಲ್ಲಿ ಅನುದಾನ ರಹಿತ ಖಾಸಗಿ ಶಾಲೆಗಳ ಹಸ್ತಾಂತರಕ್ಕೆ ಇರುವ ಮಾನದಂಡಗಳು ಏನು ; ರಾಜ್ಯದಲ್ಲಿ ಎಷ್ಟು ಅನುದಾನ ರಹಿತ ಶಾಲೆಗಳು ಸರ್ಕಾರಕ್ಕೆ ಹಸ್ತಾಂತರ ಕೋರಿ ಮನವಿ ಸಲ್ಲಿಸಿವೆ ; ಸಲ್ಲಿಸಿದ್ದಲ್ಲಿ, ಎಷ್ಟು ಅರ್ಜಿ ಅನುಮತಿಸಲಾಗಿದೆ, ಬಾಕಿ ಇರುವ ಅರ್ಜಿಗಳೆಷ್ಟು ? (೩ ವರ್ಷದ ಮಾಹಿತಿಯನ್ನು ಒದಗಿಸುವುದು)

## ಖಾಸಗಿ ಆಸ್ಪತ್ರೆಗಳ ನಿಯಂತ್ರಣ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೨೩೩ (೧೪೩೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ಖಾಸಗಿ ಕ್ಲಿನಿಕ್‌ಗಳು, ಖಾಸಗಿ ಆಸ್ಪತ್ರೆಗಳು, ಖಾಸಗಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳ ಸಂಖ್ಯೆ ಎಷ್ಟು ; ಖಾಸಗಿ ಆಸ್ಪತ್ರೆಗಳನ್ನು ಅಥವಾ ಕ್ಲಿನಿಕ್‌ಗಳನ್ನು ತೆರೆಯಲು ಇರುವ ನಿಬಂಧನೆಗಳು ಏನು ;

(ಆ) ರಾಜ್ಯದಲ್ಲಿ ಖಾಸಗಿ ಕ್ಲಿನಿಕ್, ಆಸ್ಪತ್ರೆ ಮತ್ತು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳು ನಿಯಂತ್ರಣವಿಲ್ಲದ ಶುಲ್ಕವನ್ನು ರೋಗಿಗಳಿಂದ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇವುಗಳನ್ನು ನಿಯಂತ್ರಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ರಾಜ್ಯದಲ್ಲಿರುವ ಖಾಸಗಿ ಕ್ಲಿನಿಕ್ ಮತ್ತು ಖಾಸಗಿ ಆಸ್ಪತ್ರೆಗಳು ರೋಗಿಗಳಿಗೆ ನೀಡುವ ಚಿಕಿತ್ಸೆಯ ಸಂಬಂಧ ಶುಲ್ಕವನ್ನು (Fee) ನಿಗದಿಪಡಿಸಲು ಯಾವ ಮಾನದಂಡದ ಆಧಾರದ ಮೇಲೆ ನಿಗದಿಗೊಳಿಸಲಾಗಿರುತ್ತದೆ ; ನಿಗದಿಗೊಳಿಸದೇ ಇದ್ದಲ್ಲಿ, ಇದಕ್ಕೆ ಕಾರಣಗಳೇನು ;

(ಈ) ರಾಜ್ಯದಲ್ಲಿರುವ ಖಾಸಗಿ ಆಸ್ಪತ್ರೆಗಳಿಗೆ ರೋಗಿಗಳ ಸಂಬಂಧ ಮತ್ತು ಚಿಕಿತ್ಸೆಯ ಸಂಬಂಧ ಏಕ ರೀತಿಯ ಶುಲ್ಕವನ್ನು ನಿಗದಿಪಡಿಸುವ ಉದ್ದೇಶ ಸರ್ಕಾರದ ಮುಂದೆ ಇದೆಯೇ ;

ಇದ್ದಲ್ಲಿ, ಅದನ್ನು ಯಾವಾಗ ಜಾರಿಗೊಳಿಸಲಾಗುವುದು ; ಇಲ್ಲದೇ ಇದ್ದಲ್ಲಿ, ಈ ಸಂಬಂಧ ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳುವುದು ;

(ಉ) ರಾಜ್ಯದಲ್ಲಿ ಖಾಸಗಿ ಕ್ಲಿನಿಕ್ ಮತ್ತು ಆಸ್ಪತ್ರೆಗಳು ರೋಗಿಗಳಿಂದ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಿದಾಗ, ಯಾವ ರೀತಿಯ ಪರಿಹಾರ ರೋಗಿಗಳಿಗೆ ಸಿಗುತ್ತದೆ ; ಸರ್ಕಾರದ ವತಿಯಿಂದ ಯಾವುದೇ ರೀತಿಯ ದೂರು ಪ್ರಾಧಿಕಾರಗಳನ್ನು ರಚಿಸಲಾಗಿದೆಯೇ ;

(ಊ) ರಚಿಸಲಾಗಿದ್ದಲ್ಲಿ, ಇಲ್ಲಿಯವರೆಗೆ ದಾಖಲಾಗಿರುವ ದೂರುಗಳು ಎಷ್ಟು ಮತ್ತು ದೂರು ಸಂಬಂಧ ಎಷ್ಟು ರೋಗಿಗಳಿಗೆ ಪರಿಹಾರ ದೊರಕಿರುತ್ತದೆ ? (ವಿವರಗಳನ್ನು ಒದಗಿಸುವುದು)

## ಬೆಸ್ಕಾಂ ಸಂಸ್ಥೆಯ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೨೩೪ (೧೪೩೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿಯು ಮಾದರಿ ಉಪಯೋಗ ಮತ್ತು ಸಿಸ್ಟಮ್ ಇಂಪ್ರೂಮೆಂಟ್ ಯೋಜನೆಯನ್ನು ಜಾರಿಗೊಳಿಸಿದೆಯೇ ; ಜಾರಿಗೊಳಿಸಿದ್ದಲ್ಲಿ, ಎಂದಿನಿಂದ ಈ ಯೋಜನೆಯನ್ನು ಜಾರಿಗೊಳಿಸಲಾಗಿದೆ ಮತ್ತು ಇದರ ಪ್ರಯೋಜನಗಳೇನು ;

(ಆ) ಬೆಸ್ಕಾಂ ಸಂಸ್ಥೆಯು ಮಾದರಿ ಉಪ ವಿಭಾಗ ಯೋಜನೆಯ ಅಡಿಯಲ್ಲಿ ಎಷ್ಟು ಹೊಸ ಲಿಂಕ್ ಲೈನ್‌ಗಳನ್ನು ಮತ್ತು ಹೊಸ ಫೀಡರ್‌ಗಳನ್ನು ಅಳವಡಿಸಿದೆ ; (ಕಳೆದ ೩ ವರ್ಷಗಳಲ್ಲಿ ಅಳವಡಿಸಿರುವ ಹೊಸ ಲಿಂಕ್ ಲೇನ್ ಮತ್ತು ಹೊಸ ಫೀಡರ್‌ಗಳ ವಿವರಗಳನ್ನು ಒದಗಿಸುವುದು)

(ಇ) ಬೆಸ್ಕಾಂ ಸಂಸ್ಥೆಯ ಮಾದರಿ ಉಪ ವಿಭಾಗ ಯೋಜನೆಯ ಅಡಿಯಲ್ಲಿ ಎಷ್ಟು ಓವರ್ ಹೆಡ್‌ಲೈನ್‌ಗಳನ್ನು ಯುಜಿ ಕೇಬಲ್‌ಗಳಾಗಿ ಪರಿವರ್ತಿಸಿದೆ ; (ಕಳೆದ ೩ ವರ್ಷಗಳಲ್ಲಿ ಬದಲಾಯಿಸಿರುವ ವಿವರಗಳನ್ನು ಒದಗಿಸುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಬೆಸ್ಕಾಂ ಸಂಸ್ಥೆಯು ತನ್ನ ವ್ಯಾಪ್ತಿಯಲ್ಲಿ ಮಾದರಿ ಉಪ ವಿಭಾಗ ಯೋಜನೆ ಅಡಿಯಲ್ಲಿ ಎಷ್ಟು ಎಲ್ ಟಿ ಏರಿಯಲ್ ಕೇಬಲ್‌ಗಳನ್ನು ಅಳವಡಿಸಿದೆ ; (ವಿವರಗಳನ್ನು ಒದಗಿಸುವುದು)

(ಉ) ಕಳೆದ ಮೂರು ವರ್ಷಗಳಲ್ಲಿ ಬೆಸ್ಕಾಂ ಸಂಸ್ಥೆಯು ತನ್ನ ವ್ಯಾಪ್ತಿಯಲ್ಲಿ ಎಷ್ಟು ಕಾಂಪ್ಯಾಕ್ಟ್ ಸಬ್ ಸ್ಟೇಷನ್‌ಗಳನ್ನು ಒದಗಿಸಿರುತ್ತದೆ ? (ಪೂರ್ಣ ವಿವರಗಳನ್ನು ಒದಗಿಸುವುದು)

## ಸರ್ಕಾರಿ ವಿಶ್ವವಿದ್ಯಾಲಯಗಳ ಮಾಹಿತಿ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೨೩೫ (೧೪೩೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಇರುವ ಸರ್ಕಾರಿ ವಿಶ್ವವಿದ್ಯಾಲಯಗಳು ಎಷ್ಟು; ಸದರಿ ವಿಶ್ವವಿದ್ಯಾಲಯಗಳಲ್ಲಿ ಪೂರ್ಣ ಪ್ರಮಾಣದ ಉಪಕುಲಪತಿಗಳು, ಕುಲ ಸಚಿವರು, ಕುಲ ಸಚಿವರು (ಮೌಲ್ಯಮಾಪನ) ಕಾರ್ಯನಿರ್ವಹಿಸುತ್ತಿದ್ದಾರೆಯೇ ; (ಇದ್ದಲ್ಲಿ, ಅವರ ಅವಧಿ, ಹೆಸರು ಮತ್ತು ಪೂರ್ಣ ವಿವರಗಳನ್ನು ಒದಗಿಸುವುದು)

(ಆ) ರಾಜ್ಯದಲ್ಲಿ ಇರುವ ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಅನುಮೋದನೆಗೊಂಡಿರುವ, ನೇಮಕವಾಗಿರುವ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಪೂರ್ಣ ವಿವರಗಳನ್ನು ಒದಗಿಸುವುದು)

(ಇ) ರಾಜ್ಯದಲ್ಲಿ ಇರುವ ಸರ್ಕಾರಿ ವಿಶ್ವವಿದ್ಯಾಲಯಗಳ ವಿಸ್ತೀರ್ಣ ಎಷ್ಟು ; ಪ್ರತಿ ವಿಶ್ವವಿದ್ಯಾಲಯದ ಪೂರ್ಣ ಮಾಹಿತಿ ಒದಗಿಸುವುದು ; ಎಷ್ಟು ಸರ್ಕಾರಿ ವಿಶ್ವವಿದ್ಯಾಲಯಗಳು ಭೂಮಿ ಮತ್ತು ಕಟ್ಟಡದ ಕೊರತೆಯನ್ನು ಎದುರಿಸುತ್ತಿವೆ ; ಅಗತ್ಯ ಭೂಮಿ ಮತ್ತು ಕಟ್ಟಡ ಹಾಗೂ ಸಂಪನ್ಮೂಲಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ರಾಜ್ಯದ ವಿಶ್ವವಿದ್ಯಾಲಯದ ಎಷ್ಟು ಉಪಕುಲಪತಿಗಳು, ಕುಲಸಚಿವರು, ಕುಲ ಸಚಿವರು (ಮೌಲ್ಯಮಾಪನ) ಇವರ ಮೇಲೆ ಭ್ರಷ್ಟಾಚಾರದ ಆರೋಪಗಳು ಬಂದಿರುತ್ತವೆ ; ಬಂದಿದ್ದಲ್ಲಿ, ಇವರ ಮೇಲೆ ನೇಮಕಗೊಂಡಿರುವ ವಿಚಾರಣಾ ಸಮಿತಿಗಳು ಎಷ್ಟು ; ಬಂದಿರುವ ವರದಿಗಳು ಹಾಗೂ ಬಾಕಿ ಇರುವ ವರದಿಗಳು ಎಷ್ಟು ; (ಪೂರ್ಣ ವಿವರಗಳನ್ನು ಒದಗಿಸುವುದು)

(ಉ) ರಾಜ್ಯದ ಯಾವ ಯಾವ ವಿಶ್ವವಿದ್ಯಾಲಯಗಳು ನೌಕರರ, ಪ್ರಾಧ್ಯಾಪಕರ ಮತ್ತು ಇತರೆ ಸಿಬ್ಬಂದಿಯ ನೇಮಕಾತಿಯನ್ನು ಕೋರಿ ಪ್ರಸ್ತಾವನೆಗಳನ್ನು ಸಲ್ಲಿಸಿರುತ್ತಾರೆ ; ಎಷ್ಟು ಪ್ರಸ್ತಾವನೆಗಳು ಅನುಮೋದನೆಗೊಂಡಿರುತ್ತವೆ ; ಎಷ್ಟು ಬಾಕಿ ಇರುತ್ತದೆ ; ಬಾಕಿ ಇದ್ದಲ್ಲಿ, ಅದಕ್ಕೆ ಕಾರಣಗಳೇನು ?

## ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೧೨೩೬ (೧೪೧೧) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ನಿರುದ್ಯೋಗ ದರ ಎಷ್ಟು ಇದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಸರ್ಕಾರದ ವಿವಿಧ ಇಲಾಖೆಗಳಲ್ಲಿರುವ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ; ಅವುಗಳನ್ನು ಯಾವಾಗ ಭರ್ತಿ ಮಾಡಲಾಗುತ್ತದೆ ; (ವಿವರ ನೀಡುವುದು)

(ಇ) ಎಷ್ಟು ಉದ್ಯೋಗ ಮೇಳಗಳನ್ನು Job Fairs ಆಯೋಜಿಸಲಾಗಿದೆ ; ಅದರಿಂದ ಎಷ್ಟು ಮಂದಿಗೆ ಉದ್ಯೋಗ ದೊರೆತಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಖಾಸಗಿ ಕ್ಷೇತ್ರದ ಸಹಕಾರದಿಂದ ಅಡಿಯಲ್ಲಿ ಬರುತ್ತವೆಯೇ ; (ಮಾಹಿತಿ ನೀಡುವುದು)

(ಉ) ಪದವಿ ಮತ್ತು ತಾಂತ್ರಿಕ ಶಿಕ್ಷಣ ಪಡೆದ ಯುವಕರಿಗೆ ಸಮರ್ಪಕ ಉದ್ಯೋಗಾವಕಾಶಗಳ ಕೊರತೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು ;

(ಊ) ಸ್ಟಾರ್ಟ್ ಅಪ್ ಮತ್ತು ಸ್ವ–ಉದ್ಯೋಗ ಪ್ರೋತ್ಸಾಹ ಯೋಜನೆಗಳಿಂದ ಎಷ್ಟು ಯುವಕರು ಲಾಭ ಪಡೆದಿದ್ದಾರೆ ? (ಮಾಹಿತಿ ನೀಡುವುದು)

## DDU-GKY ಉದ್ಯೋಗ ಯೋಜನೆಯಡಿಯಲ್ಲಿ ಉದ್ಯೋಗ ಸಿಕ್ಕಿರುವ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೧೨೩೭ (೧೪೧೨) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) DDU-GKY ಯೋಜನೆಯಡಿಯಲ್ಲಿ ತರಬೇತಿ ಪಡೆದ ಯುವಕರಲ್ಲಿ ಎಷ್ಟು ಮಂದಿಗೆ ಸ್ಥಿರ ಉದ್ಯೋಗ ಸಿಕ್ಕಿದೆ ;

(ಆ) ತರಬೇತಿ ನಂತರ ನೀಡುವ ಉದ್ಯೋಗಗಳು ದೀರ್ಘಕಾಲಿಕವಾಗಿವೆಯೇ ಅಥವಾ ತಾತ್ಕಾಲಿಕವಾಗಿವೆಯೇ ; (ವಿವರ ನೀಡುವುದು)

(ಇ) ತರಬೇತಿ ಪಡೆದವರಲ್ಲಿ ಎಷ್ಟು ಮಂದಿ ೬ ತಿಂಗಳ ನಂತರವೂ ಅದೇ ಉದ್ಯೋಗದಲ್ಲಿ ಮುಂದುವರೆದಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) DDU-GKY ಯೋಜನೆಯಡಿಯಲ್ಲಿ ಎಷ್ಟು ಜಿಲ್ಲೆಗಳಲ್ಲಿ ತರಬೇತಿ ನೀಡಲಾಗುತ್ತಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಸ್ಥಳೀಯ ಮಟ್ಟದಲ್ಲಿ ಉದ್ಯೋಗ ಸೃಷ್ಟಿಸಲು ಸರ್ಕಾರ ಯಾವ ಯೋಜನೆ ರೂಪಿಸಿದೆ ;

(ಊ) DDU-GKY ಯೋಜನೆಯಡಿ ನಿರುದ್ಯೋಗ ಸಮಸ್ಯೆಯನ್ನು ಎಷ್ಟು ಪ್ರಮಾಣದಲ್ಲಿ ಕಡಿಮೆ ಮಾಡಿದೆ ? (ಅಂಕಿ–ಅಂಶಗಳ ವಿವರ ಒದಗಿಸುವುದು)

## ಬೆಂಗಳೂರು ಗ್ರಾಮಾಂತರ ಮತ್ತು ನಗರ ವ್ಯಾಪ್ತಿಯಲ್ಲಿ ನಿರುದ್ಯೋಗ ಸಮಸ್ಯೆ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೧೨೩೮ (೧೪೧೩) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳ ವ್ಯಾಪ್ತಿಯಲ್ಲಿ ನಿರುದ್ಯೋಗ ಸಮಸ್ಯೆಯಿಂದ ಬಾಧಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ನಿರುದ್ಯೋಗ ನಿವಾರಣೆಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಇ) ಈ ಬಗ್ಗೆ ಸಮೀಕ್ಷೆ ನಡೆಸಿ ಸರ್ಕಾರ ಪರಿಹಾರೋಪಾಯಗಳನ್ನು ಕೈಗೊಳ್ಳವುದೇ ? (ಮಾಹಿತಿ ನೀಡುವುದು)

## KPTCL ನಲ್ಲಿ ಬಾಕಿ ಇರುವ ನೇಮಕಾತಿ ಅಧಿಸೂಚನೆಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೧೨೩೯ (೧೪೧೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆಪಿಟಿಸಿಎಲ್‌ನಲ್ಲಿ ಬಾಕಿ ಇರುವ ನೇಮಕಾತಿ ಅಧಿಸೂಚನೆಗಳ ಪ್ರಸ್ತುತ ಸ್ಥಿತಿ ಏನು ; (ಮಾಹಿತಿ ನೀಡುವುದು)

(ಆ) ಕೆಪಿಟಿಸಿಎಲ್‌ನಲ್ಲಿ ತಾಂತ್ರಿಕ ಸಿಬ್ಬಂದಿ ಮತ್ತು ಇಂಜಿನಿಯರ್‌ಗಳ ಕೊರತೆ ಇರುವುದರಿಂದ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳುತ್ತಿದೆ ;

(ಇ) ನಿರುದ್ಯೋಗ ಸಮಸ್ಯೆ ಕಡಿಮೆ ಮಾಡಲು ಕೆಪಿಟಿಸಿಎಲ್‌ನಲ್ಲಿ ಯಾವ ಹೊಸ ಯೋಜನೆಗಳನ್ನು ಸರ್ಕಾರ ಕೈಗೊಂಡಿದೆ ; (ವಿವರ ನೀಡುವುದು)

(ಈ) ವಿದ್ಯುತ್ ಕ್ಷೇತ್ರದಲ್ಲಿ ಕೌಶಲ್ಯ ತರಬೇತಿ ನೀಡಿದರೆ ಉದ್ಯೋಗಾವಕಾಶ ಹೆಚ್ಚಿಸುವುದಕ್ಕೆ ಸರ್ಕಾರ ರೂಪಿಸಿರುವ ಯೋಜನೆಗಳು ಯಾವುವು ?

## ಸರ್ಕಾರಿ ಆಸ್ಪತ್ರೆಗಳಲ್ಲಿ ಅಗತ್ಯ ಸಿಬ್ಬಂದಿ ಮತ್ತು ಮೂಲಭೂತ ಸೌಲಭ್ಯಗಳ ಕೊರತೆಯ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೪೦ (೧೩೫೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ ಆರೋಗ್ಯ ಕೇಂದ್ರಗಳೂ ಸೇರಿದಂತೆ ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಆಸ್ಪತ್ರೆಗಳು ಎಷ್ಟು ; ಈ ಆಸ್ಪತ್ರೆಗಳಿಗೆ ತಜ್ಞ ವೈದ್ಯರು ಸೇರಿದಂತೆ ಮಂಜೂರಾಗಿರುವ ಒಟ್ಟು ಹುದ್ದೆಗಳೆಷ್ಟು; ಎಷ್ಟು ಹುದ್ದೆಗಳು ಖಾಲಿ ಇವೆ ; (ಹುದ್ದೆವಾರು ವಿವರವನ್ನು ಜಿಲ್ಲಾವಾರು ಒದಗಿಸುವುದು)

(ಆ) ಸರ್ಕಾರಿ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರು/ ಸಿಬ್ಬಂದಿಗಳು ಹಾಗೂ ಅಗತ್ಯ ಚಿಕಿತ್ಸಾ ಸಲಕರಣೆಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸಿಬ್ಬಂದಿಗಳ ಕೊರತೆ ಬಗ್ಗೆ ರಾಜ್ಯ ಉಚ್ಚ ನ್ಯಾಯಾಲಯದ ಸೂಚನೆ ನಂತರ ಎಷ್ಟು ಹುದ್ದೆಗಳ ನೇಮಕ ಆಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ೨ ವರ್ಷದಿಂದ ಹೊಸದಾಗಿ ಸಿಬ್ಬಂದಿಗಳ ನೇಮಕಾತಿಗೆ ಎಷ್ಟು ಅಧಿಸೂಚನೆ ಹೊರಡಿಸಲಾಗಿದೆ ; ನೇಮಕಾತಿ ಪ್ರಕ್ರಿಯೆ ಯಾವ ಹಂತದಲ್ಲಿದೆ ; (ಹುದ್ದೆವಾರು ವಿವರ ನೀಡುವುದು)

(ಈ) ಸರ್ಕಾರಿ ಆಸ್ಪತ್ರೆಗಳಿಗೆ ಅಗತ್ಯ ಚಿಕಿತ್ಸಾ ಸಲಕರಣೆ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕೈಗೊಂಡಿರುವ ಕ್ರಮಗಳೇನು ; ಸದರಿ ಉದ್ದೇಶಕ್ಕೆ ಹಾಕಿಕೊಂಡಿರುವ ಕಾರ್ಯ ಯೋಜನೆಗಳೇನು ; ಮೀಸಲಿಟ್ಟಿರುವ ಹಣ ಎಷ್ಟು ? (ಸಮಗ್ರ ವಿವರ ನೀಡುವುದು)

## ಆನೆ ದಾಳಿಯಿಂದ ಮೃತಪಟ್ಟವರಿಗೆ ಹಾಗೂ ಬೆಳೆ ಹಾನಿಗೆ ಪರಿಹಾರ ನೀಡುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೪೧ (೧೩೫೩) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷದಿಂದ ರಾಜ್ಯದಲ್ಲಿ ಆನೆ ದಾಳಿಯಿಂದ ಮೃತಪಟ್ಟವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಆನೆ ದಾಳಿಯಿಂದ ಮೃತಪಟ್ಟವರ ಎಷ್ಟು ಕುಟುಂಬಗಳಿಗೆ ಪರಿಹಾರ ಪಾವತಿಸಲಾಗಿದೆ ; ಬಾಕಿ ಉಳಿದಿರುವ ಪ್ರಕರಣಗಳು ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ೨ ವರ್ಷದಿಂದ ಆನೆ ದಾಳಿಯಿಂದ ಹಲವು ಜಿಲ್ಲೆಗಳಲ್ಲಿ ಎಷ್ಟು ಬೆಳೆ ಹಾನಿ ಆಗಿದೆ ; (ಜಿಲ್ಲಾವಾರು ವಿವರ ನೀಡುವುದು) ಬೆಳೆ ನಷ್ಟಕ್ಕೊಳಗಾದ ರೈತರಿಗೆ ಬೆಳೆ ಪರಿಹಾರ ವಿತರಣೆ ಆಗಿದೆಯೇ ; ಎಷ್ಟು ಬೆಳೆ ಪರಿಹಾರ ಮೊತ್ತ ನೀಡಲಾಗಿದೆ ;

(ಈ) ಆನೆ ದಾಳಿಯನ್ನು ಶಾಶ್ವತವಾಗಿ ತಡೆಯುವ ಉದ್ದೇಶದಿಂದ ಆನೆ ಕಾರಿಡಾರ್ ಪುನಃಶ್ಚೇತನ ಸೇರಿದಂತೆ ಯಾವ ಯಾವ ಯೋಜನೆಗಳನ್ನು ಸರ್ಕಾರ ಜಾರಿಗೆ ತಂದಿದೆ ; ಕಳೆದ ೫ ವರ್ಷದಿಂದ ಈ ಉದ್ದೇಶಕ್ಕಾಗಿ ವೆಚ್ಚ ಮಾಡಿರುವ ಹಣ ಎಷ್ಟು; ಆಗಿರುವ ಪ್ರಗತಿ ಏನು ; (ಜಿಲ್ಲಾವಾರು ವಿವರ ನೀಡುವುದು)

(ಉ) ರಾಜ್ಯಾದ್ಯಂತ ಆನೆ ಕಾರ್ಯಪಡೆಗೆ ಮಂಜೂರಾಗಿರುವ ಹುದ್ದೆಗಳೆಷ್ಟು; ಪ್ರಸ್ತುತ ಖಾಲಿ ಇರುವ ಹುದ್ದೆಗಳಷ್ಟು ; ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಊ) ಆನೆ ದಾಳಿ ತಡೆಯುವಂತೆ ಆಗ್ರಹಿಸಿ ಎಷ್ಟು ಜಿಲ್ಲೆಗಳಲ್ಲಿ ಸಾರ್ವಜನಿಕರು ಪ್ರತಿಭಟನೆ ನಡೆಸಿದ್ದಾರೆ ; ಆನೆ ದಾಳಿಯನ್ನು ತಡೆಯುವಲ್ಲಿ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಪೂರ್ಣಗೊಂಡಿರುವ ಆಯುಷ್ ಆಸ್ಪತ್ರೆಯನ್ನು ಆರಂಭಿಸಿ ಅಗತ್ಯ ಸಿಬ್ಬಂದಿ/ಮೂಲಸೌಕರ್ಯ ಕಲ್ಪಿಸುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೪೨ (೧೩೫೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ನಗರದಲ್ಲಿ ೫೦ ಹಾಸಿಗೆಗಳ ಆಯುಷ್ ಆಸ್ಪತ್ರೆ ಕಟ್ಟಡ ಪೂರ್ಣಗೊಂಡು ವರ್ಷಗಳು ಕಳೆದರೂ ಆಸ್ಪತ್ರೆ ಕಾರ್ಯಾರಂಭ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಪ್ರಾರಂಭವಾಗದಿರಲು ಕಾರಣಗಳೇನು ;

(ಆ) ಈ ಆಸ್ಪತ್ರೆಗೆ ಬೇಕಾದ ವೈದ್ಯಕೀಯ/ಅರೆವೈದ್ಯಕೀಯ/ತಾಂತ್ರಿಕ ಸಿಬ್ಬಂದಿಗಳ ನೇಮಕವಾಗದೆ ಇರುವುದು ಹಾಗೂ ಅಗತ್ಯವಿರುವ ಪೀಠೋಪಕರಣ ಮತ್ತು ಯಂತ್ರೋಪಕರಣಗಳನ್ನು ಸರಬರಾಜು ಮಾಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಆಯುಷ್ ಸಂಯುಕ್ತ ಆಸ್ಪತ್ರೆಗೆ ಅಗತ್ಯವಿರುವ ಸಿಬ್ಬಂದಿ ಹಾಗೂ ಯಂತ್ರೋಪಕರಣಗಳನ್ನು ಯಾವಾಗ ಒದಗಿಸಿ ಆಸ್ಪತ್ರೆಯನ್ನು ಪ್ರಾರಂಭಿಸಲಾಗುವುದು ?

## ೧೦ಕ್ಕಿಂತ ಕಡಿಮೆ ವಿದ್ಯಾರ್ಥಿಗಳು ಮತ್ತು ಏಕೋಪಾಧ್ಯಾಯ ಶಾಲೆಗಳ ಬಗ್ಗೆ ಕ್ರಮ ಕೈಗೊಳ್ಳುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೪೩ (೧೩೫೫) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೧೦ ಕ್ಕಿಂತ ಕಡಿಮೆ ವಿದ್ಯಾರ್ಥಿಗಳಿರುವ ಮತ್ತು ತಲಾ ಒಬ್ಬರೇ ಶಿಕ್ಷಕರು/ಉಪನ್ಯಾಸಕರನ್ನು ಹೊಂದಿರುವ ಎಷ್ಟು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಪ್ರತಿ ಶಾಲೆಗೆ ಕನಿಷ್ಠ ಇಬ್ಬರು ಶಿಕ್ಷಕರು ಇರಬೇಕೆಂಬ ನಿಯಮ ಇದೆಯೇ ; ಹಾಗಿದ್ದಲ್ಲಿ, ನಿಯಮ ಉಲ್ಲಂಘನೆ ಆಗುತ್ತಿದ್ದರೂ ಸರ್ಕಾರ ಏಕೆ ಕ್ರಮ ಕೈಗೊಂಡಿಲ್ಲ ;

(ಇ) ಕಳೆದ ಮೂರು ವರ್ಷದಿಂದ ರಾಜ್ಯದಲ್ಲಿ ಹೊಸದಾಗಿ ಖಾಸಗಿ ಪ್ರಾಥಮಿಕ ಮತ್ತು ಪ್ರೌಢ ಶಾಲೆ ಆರಂಭಿಸಲು ಅನುಮತಿ ಕೋರಿ ಎಷ್ಟು ಅರ್ಜಿಗಳು ಸಲ್ಲಿಕೆಯಾಗಿವೆ ; ಎಷ್ಟು ಅನುಮತಿ ನೀಡಲಾಗಿದೆ ; (ವರ್ಷವಾರು ವಿವರಗಳನ್ನು ಜಿಲ್ಲಾವಾರು ನೀಡುವುದು) ಹೊಸದಾಗಿ ಶಾಲಾ–ಕಾಲೇಜುಗಳಿಗೆ ಅನುಮತಿ ನೀಡುವಾಗ ಅನುಸರಿಸುವ ಮಾನದಂಡಗಳೇನು ;

(ಈ) ಸರ್ಕಾರಿ ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಲ್ಲದೆ ಸರ್ಕಾರಿ ಶಾಲಾ ಕಾಲೇಜುಗಳನ್ನು ಮುಚ್ಚುತ್ತಿರುವ ಹಂತದಲ್ಲಿ ಖಾಸಗಿ ಶಾಲಾ–ಕಾಲೇಜುಗಳಿಗೆ ಅನುಮತಿ ನೀಡುತ್ತಿರುವ ಔಚಿತ್ಯವೇನು ;

(ಉ) ಏಕೋಪಾಧ್ಯಾಯ ಶಾಲೆಗಳ ಕುರಿತು ಸರ್ಕಾರದ ನಿಲುವೇನು ?

## ಕಸದಿಂದ ವಿದ್ಯುತ್ ಉತ್ಪಾದಿಸಲು ಕೈಗೊಂಡ ಕ್ರಮಗಳ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೪೪ (೧೩೫೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಸದಿಂದ ವಿದ್ಯುತ್ ಉತ್ಪಾದಿಸುವ ಕಾರ್ಯದಲ್ಲಿ ಆಗಿರುವ ಪ್ರಗತಿ ಏನು ; (ವಿವರ ನೀಡುವುದು)

(ಆ) ಈ ಉದ್ದೇಶಕ್ಕಾಗಿ ಎಷ್ಟು ಘಟಕಗಳನ್ನು ನಿರ್ಮಿಸಲಾಗಿದೆ; ಪ್ರತಿ ಘಟಕ ನಿರ್ಮಾಣಕ್ಕೆ ಆಗಿರುವ ವೆಚ್ಚ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಪ್ರತಿ ಘಟಕದಿಂದ ಎಷ್ಟು ವಿದ್ಯುತ್ ಉತ್ಪಾದನೆ ಮಾಡಲು ಉದ್ದೇಶಿಸಲಾಗಿದೆ; ಈಗ ಆರಂಭಗೊಂಡಿರುವ ಘಟಕಗಳಿಂದ ಎಷ್ಟು ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಆಗುತ್ತಿದೆ ;

(ಈ) ರಾಜ್ಯಾದ್ಯಂತ ತಾಲ್ಲೂಕಿಗೆ ಒಂದು ವಿದ್ಯುತ್ ಉತ್ಪಾದನಾ ಘಟಕಗಳನ್ನು ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಇದಕ್ಕೆ ಅಗತ್ಯ ಇರುವ ಹಣ ಎಷ್ಟು ?

## ಆಹಾರ ಪೊಟ್ಟಣಗಳ ಮೇಲೆ ಹಲಾಲ್ ಮುದ್ರೆಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೪೫ (೧೩೦೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ವತಿಯಿಂದ ಹಲಾಲ್ ಪ್ರಮಾಣ ಪತ್ರವನ್ನು ನೀಡಲಾಗುತ್ತಿದೆಯೇ ; ಇಲ್ಲವಾದಲ್ಲಿ, ಆಹಾರ ಪೊಟ್ಟಣಗಳ ಮೇಲೆ ಹಲಾಲ್ ಪ್ರಮಾಣ ಪತ್ರವನ್ನು ಅಚ್ಚು ಹಾಕಲು ಯಾವ ನಿಯಮದ ಅನ್ವಯ ಅನುಮತಿ ನೀಡಲಾಗಿದೆ ; ಈ ಕುರಿತು ಸರ್ಕಾರದ ನಿಲುವೇನು ;

(ಆ) ಹಲಾಲ್ ಪ್ರಮಾಣ ಪತ್ರಗಳನ್ನು ಯಾವ ಸಂಸ್ಥೆಯವರು ನೀಡುತ್ತಿದ್ದಾರೆ ; ರಾಜ್ಯ ಸರ್ಕಾರವು ಸದರಿ ಸಂಸ್ಥೆಯವರಿಗೆ ಹಲಾಲ್ ಪ್ರಮಾಣ ಪತ್ರ ನೀಡುವ ಅಧಿಕೃತ ಸಂಸ್ಥೆ ಎಂಬುದಾಗಿ ಅನುಮತಿ ನೀಡಿದೆಯೇ ; ಇಲ್ಲವಾದಲ್ಲಿ, ಯಾರ ಅನುಮತಿಯನ್ನು ಪಡೆದು ಈ ಪ್ರಮಾಣ ಪತ್ರವನ್ನು ನೀಡಲಾಗುತ್ತದೆ ; ಇದರಿಂದ ಸರ್ಕಾರಕ್ಕೆ ಎಷ್ಟು ಪ್ರಮಾಣದ ಶುಲ್ಕ ಸಂದಾಯವಾಗುತ್ತಿದೆ ;

(ಇ) ಹಲಾಲ್ ಪ್ರಮಾಣ ಪತ್ರ ನೀಡುವ ಸಂಸ್ಥೆಯವರು ಈ ಪ್ರಮಾಣ ಪತ್ರವನ್ನು ನೀಡಲು ಸಂಗ್ರಹಿಸುವ ಶುಲ್ಕದ ಮೇಲೆ ಸರ್ಕಾರವು ಎಷ್ಟು ಪ್ರಮಾಣದ ಸೇವಾ ತೆರಿಗೆ, ಮಾರಾಟ ತೆರಿಗೆ ಹಾಗೂ ಇತರ ತೆರಿಗೆಗಳನ್ನು ವಿಧಿಸುತ್ತಿದೆ ;

(ಈ) ಹಲಾಲ್ ಪ್ರಮಾಣ ಪತ್ರವನ್ನು ಆಹಾರ ಪದಾರ್ಥಗಳ ಮೇಲೆ ವ್ಯಾಪಾರ ಉದ್ದೇಶಗಳಿಗಾಗಿ ಬಳಸಿದಾಗ ಸದರಿ ಆಹಾರ ಪದಾರ್ಥಗಳ ಶುದ್ಧತೆಯನ್ನು ಯಾವ ಸರ್ಕಾರಿ ಸಂಸ್ಥೆಯವರು ಪ್ರಮಾಣೀಕರಿಸುತ್ತಾರೆ ; (ವಿವರ ನೀಡುವುದು)

(ಉ) ರಾಜ್ಯದ ಬಹು ಸಂಖ್ಯಾತರು ಹಲಾಲ್ ಪ್ರಮಾಣರಹಿತ ಆಹಾರ ಪದಾರ್ಥಗಳನ್ನು ಸೇವಿಸುವ ಒಲವುಳ್ಳವರಾಗಿದ್ದು ಅಂತಹ ಜನರಿಗಾಗಿ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ? (ವಿವರ ನೀಡುವುದು)

## ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧ ಕೊರತೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೪೬ (೧೩೧೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಗಳ ಕೊರತೆಯಿಂದ ಬಡ ರೋಗಿಗಳು ಪರದಾಡುತ್ತಿರುವ ಬಗ್ಗೆ ಮಾಧ್ಯಮಗಳಲ್ಲಿ ವರದಿಯಾಗಿದ್ದು, ಈ ಕುರಿತು ಸರ್ಕಾರದ ನಿಲುವೇನು ; ಔಷಧಗಳ ಕೊರತೆಗೆ ಕಾರಣವೇನು ; (ವಿವರ ನೀಡುವುದು)

(ಆ) ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಗಳ ಕೊರತೆಯಿದ್ದರೂ ರಾಯಚೂರು ಜಿಲ್ಲೆಯ ಜಲಾಲನಗರ ರುದ್ರ ಭೂಮಿಯ ಪಕ್ಕದ ರಸ್ತೆಯಲ್ಲಿ

ಲಕ್ಷಾಂತರ ರೂಪಾಯಿ ಮೌಲ್ಯದ ಔಷಧಗಳನ್ನು ಎಸೆದಿರುವ ಕುರಿತು ಸರ್ಕಾರ ಕೈಗೊಂಡ ಕ್ರಮವೇನು ; ಪೊಲೀಸ್ ಕೇಸು ದಾಖಲಿಸಲಾಗಿದೆಯೇ ; (ವಿವರ ನೀಡುವುದು)

(ಇ) ಸ್ಕ್ಯಾನಿಂಗ್ ಹಾಗೂ ಇತರ ವೈದ್ಯೇತರ ತಪಾಸಣೆಯ ಬಿಲ್ಲುಗಳು ಬಾಕಿ ಇರುವ ಕಾರಣಕ್ಕಾಗಿ ಬಡ ರೋಗಿಗಳು ಉಚಿತ ವ್ಯವಸ್ಥೆಯಿಂದ ವಂಚಿತರಾಗಿರುವ ಬಗ್ಗೆ ಸರ್ಕಾರದ ನಿಲುವೇನು ;

(ಈ) ಇಲಾಖೆಯು ಎಷ್ಟು ಮೊತ್ತದ ಬಿಲ್ಲುಗಳನ್ನು ಪಾವತಿ ಮಾಡಲು ಬಾಕಿ ಇವೆ ; ಯಾವ ಯಾವ ರೀತಿಯ ಸರಬರಾಜು ಹಾಗೂ ಸೇವೆಯ ಬಿಲ್ಲುಗಳು ಪಾವತಿಯಾಗಿಲ್ಲ ; ಎಷ್ಟು ವರ್ಷದಿಂದ ಪಾವತಿಯಾಗಿಲ್ಲ ? (ವಿವರ ನೀಡುವುದು)

## ಗೃಹಜ್ಯೋತಿ ಯೋಜನೆಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೪೭ (೧೩೧೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗೃಹಜ್ಯೋತಿ ಯೋಜನೆಯ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಎಸ್ಕಾಂವಾರು ವಿವರ ನೀಡುವುದು)

(ಆ) ಕಳೆದ ೨ ವರ್ಷದಲ್ಲಿ ಗೃಹಜ್ಯೋತಿ ಯೋಜನೆಗೆ ಎಷ್ಟು ಮೊತ್ತ ವೆಚ್ಚ ಮಾಡಲಾಗಿದೆ ; (ತಿಂಗಳವಾರು ವಿವರ ನೀಡುವುದು)

(ಇ) ಜಿಬಿಎ ವ್ಯಾಪ್ತಿಯಲ್ಲಿ ಗೃಹಜ್ಯೋತಿ ಯೋಜನೆಯ ಫಲಾನುಭವಿಗಳಲ್ಲಿ ಕನ್ನಡಿಗರಿಗಿಂತ ಬಹುತೇಕರು ಅನ್ಯ ಭಾಷಿಕರ ಸಂಖ್ಯೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಈ) ಬಹುಮಹಡಿ ಕಟ್ಟಡಗಳಲ್ಲಿ ವಾಸಿಸುವ ೮೫% ಜನರು ಅನ್ಯಭಾಷಿಕರಾಗಿದ್ದು ಕನ್ನಡ ಮಾತನಾಡದ, ಕನ್ನಡ ಕಲಿಯದ,

ಕನ್ನಡದ ಬಗ್ಗೆ ತಿರಸ್ಕಾರ ಹೊಂದಿರುವವರಾಗಿದ್ದು ಅವರಿಗೆ ೨೦೦ ಯುನಿಟ್ ಉಚಿತ ವಿದ್ಯುತ್ ನೀಡುವ ಅವಶ್ಯಕತೆ ಇದೆಯೇ ? (ಬೆಂಗಳೂರು ದಕ್ಷಿಣದ ಸುಮೋ ಸೊನೆಟ್ ಅಪಾರ್ಟ್‌ಮೆಂಟ್, ಸಲ್‌ಪುರಿಪರಿಯಾ ಕ್ರೆಡೆಂಜಾ, ಪುರುವಂಕರ ವೆಸ್ಟ್ ಎಂಡ್, ಸಲ್‌ಪುರಿಯಾ ಗ್ರೀನ್ ಎಜ್ಡ್ ಹಾಗೂ ಸುತ್ತಮುತ್ತಲಿನ ಬಹು ಮಹಡಿ ವಸತಿ ಕಟ್ಟಡಗಳಲ್ಲಿ ಗೃಹ ಜ್ಯೋತಿ ಫಲಾನುಭವಿಗಳ ಮಾಹಿತಿ ಸಂಗ್ರಹಿಸಿ ಭಾಷಾವಾರು ವರದಿ ನೀಡುವುದು)

## ಅಂಗವಿಕಲ ಪ್ರಮಾಣ ಪತ್ರದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೪೮ (೧೩೧೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಅಂಗವಿಕಲ ಪ್ರಮಾಣ ಪತ್ರಗಳನ್ನು ವಿತರಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ಎರಡು ವರ್ಷಗಳಲ್ಲಿ ಎಷ್ಟು ವಿಧದ ಅಂಗವಿಕಲ ಪ್ರಮಾಣ ಪತ್ರಗಳನ್ನು ವಿತರಿಸಲಾಗಿದೆ ; ಯಾವ ಯಾವ ಅಂಗವಿಕಲರು ೯೦% ಅಂಗವಿಕಲತೆಯನ್ನು ಹೊಂದಿದ್ದಾರೆ ; (ವಿವರ ನೀಡುವುದು)

(ಇ) ಕಿವುಡ ಅಂಗವಿಕಲತೆಯನ್ನು ಹೊಂದಿರುವ ಬಗ್ಗೆ ಎಷ್ಟು ಅಂಗವಿಕಲ ಪ್ರಮಾಣ ಪತ್ರಗಳನ್ನು ವಿತರಿಸಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ಹಲಾಲ್ ಮಾಂಸ ಮಾರಾಟ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೪೯ (೧೩೧೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) KFC ಸೇರಿದಂತೆ ಇನ್ನಿತರ ಸಂಸ್ಥೆಗಳು ೧೦೦% ಹಲಾಲ್ ಮಾಂಸವನ್ನೇ ಖರೀದಿಸುವ/ಮಾರಾಟ ಮಾಡುವುದಾಗಿ ತಮ್ಮ ಅಂಗಡಿ ಹೋಟೆಲ್‌ಗಳಲ್ಲಿ ಸಾರ್ವಜನಿಕವಾಗಿ ಘೋಷಿಸುವ ಮೂಲಕ ಪರಿಶಿಷ್ಟ ಜಾತಿಯ ಮಾಂಸ ಮಾರಾಟಗಾರರ ಬದುಕುವ ಹಕ್ಕನ್ನೇ ಕಸಿದುಕೊಂಡಿರುವ ಕುರಿತು (ಅಟ್ರಾಸಿಟಿ) ಪ್ರಕರಣ ದಾಖಲು ಮಾಡುವ ಬಗ್ಗೆ ಸರ್ಕಾರದ ನಿಲುವೇನು ;

(ಆ) ಇತ್ತೀಚಿನ ವರ್ಷಗಳವರೆಗೂ ಅಂತರಾಷ್ಟ್ರೀಯ ಕಂಪನಿಗಳಾದ KFC ಸೇರಿದಂತೆ ಇನ್ನಿತರ ಸಂಸ್ಥೆಗಳು ಗ್ರಾಹಕರಿಗೆ ಸಿದ್ಧಪಡಿಸಲಾದ ಮಾಂಸಾಹಾರ ಪೂರೈಸುವ ಸಮಯದಲ್ಲಿ ಪರಿಶಿಷ್ಟ ಜಾತಿಯ ಮಾಂಸ ಖರೀದಿಸುತ್ತಿದ್ದು ಇದರಿಂದ ಪರಿಶಿಷ್ಟ ಜಾತಿಯವರು ತಮ್ಮ ದೈನಂದಿನ ಜೀವನ ಸಾಗಿಸುತ್ತಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಪ್ರಸ್ತುತ ಈ ಸಂಸ್ಥೆಗಳ ೧೦೦% ಹಲಾಲ್ ಮಾಂಸವನ್ನೇ ಖರೀದಿಸುತ್ತಿರುವುದರಿಂದ ಪರಿಶಿಷ್ಟ ಜಾತಿಯ ಮಾರಾಟಗಾರರು ತಮ್ಮ ಉದ್ಯೋಗವನ್ನೇ ಕಳೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ;

(ಇ) ಯಾವ ಯಾವ ಸಂಸ್ಥೆಗಳು ಮತ್ತು ಹೋಟೆಲ್‌ಗಳು ೧೦೦% ಹಲಾಲ್ ಮಾಂಸವನ್ನು ಮಾತ್ರವೇ ಮಾರಾಟ ಮಾಡುತ್ತೇವೆ

ಎಂಬುದಾಗಿ ಸಾರ್ವಜನಿಕವಾಗಿ ಪ್ರದರ್ಶಿಸಲು ಸರ್ಕಾರದ ಅನುಮತಿ ಪಡೆದಿರುವರೇ ; ಈ ಕುರಿತು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಪದವಿ ಪಡೆದ ವಿದ್ಯಾರ್ಥಿಗಳಿಗೆ ಮುದ್ರಿತ ಮಾರ್ಕ್ಸ್ ಕಾರ್ಡ್ ನೀಡದೇ ಇರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೫೦ (೧೩೨೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಪದವಿ, ಸ್ನಾತಕೋತ್ತರ ಪದವಿ ಪಡೆದ ವಿದ್ಯಾರ್ಥಿಗಳಿಗೆ ಮುದ್ರಿತ ಮಾರ್ಕ್ಸ್ ಕಾರ್ಡ್‌ಗಳನ್ನು ನೀಡದೆ ಎಷ್ಟು ವರ್ಷಗಳಿಂದ ಬಾಕಿ ಉಳಿಸಿಕೊಳ್ಳಲಾಗಿದೆ ; ಇದಕ್ಕೆ ಕಾರಣಗಳೇನು ;

(ಆ) ಮುದ್ರಿತ ಅಂಕಪಟ್ಟಿ ನೀಡಿಕೆ ತೀರಾ ತಡವಾಗುತ್ತಿರುವುದರಿಂದ ಪ್ರತಿಷ್ಠಿತ ಕಂಪನಿಗಳಲ್ಲಿ ದಾಖಲೆ ದೃಢೀಕರಣ ಹಂತದಲ್ಲಿ ಅಂಕಪಟ್ಟಿಯಿಲ್ಲದೆ ಉದ್ಯೋಗ ಪಡೆದುಕೊಳ್ಳಲು ಪದವಿ, ಸ್ನಾತಕೋತ್ತರ, ಪದವೀಧರರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಅಂಕಪಟ್ಟಿ ಶುಲ್ಕ ಕಟ್ಟಿಸಿಕೊಂಡರೂ ಅಂಕಪಟ್ಟಿ ಸಕಾಲಕ್ಕೆ ನೀಡುತ್ತಿಲ್ಲ, ಡಿಜಿಟಲ್ ಲಾಕರ್‌ನಲ್ಲಿ ಅಂಕಪಟ್ಟಿ ಲಭ್ಯ ಎಂದು ಹೇಳಿದರೂ ಅಂತಿಮ ಎರಡು ಸೆಮಿಸ್ಟರ್‌ಗಳ ಅಂಕಪಟ್ಟಿ ತಕ್ಷಣಕ್ಕೆ ಸಿಗುತ್ತಿಲ್ಲ ಹಾಗೂ ಯುೂನಿವರ್ಸಿಟಿ, ಕಾಲೇಜುಗಳಿಂದ ನೀಡುವ ಪ್ರಾವಿಷನಲ್ ಸರ್ಟಿಫಿಕೇಟ್ ಒಪ್ಪಿಕೊಂಡು ಎಲ್ಲಾ ಕಂಪನಿಗಳು ಕೆಲಸ ನೀಡುವುದಿಲ್ಲ ಎಂಬುದು ಸರ್ಕಾರದ ಅಧಿಕಾರಿಗಳ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಎಷ್ಟು ಸಮಯಾವಕಾಶದ ಅವಶ್ಯಕತೆ ಇದೆ ; ಈ ಅವ್ಯವಸ್ಥೆಗೆ ಕಾರಣಕರ್ತರು ಯಾರು ?

## ರಾಜ್ಯದ ಅನುದಾನಿತ ITI ಸಂಸ್ಥೆಗಳಿಗೆ ಸಂಬಂಧಿಸಿದ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೧೨೫೧ (೧೪೨೧) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಅನುದಾನಿತ ITI ಸಂಸ್ಥೆಗಳಿಗೆ ಸಂಬಂಧಿಸಿದಂತೆ, ಇತ್ತೀಚೆಗೆ ಪರಿಷ್ಕರಣೆ ಮಾಡಿದ ಅನುದಾನ ಸಂಹಿತೆಯಂತೆ ಇಂಜಿನಿಯರಿಂಗ್ ಡ್ರಾಯಿಂಗ್ ಹಾಗೂ ಕಾರ್ಯಗಾರ ಲೆಕ್ಕಾಚಾರ ವಿಷಯಗಳ ಕಾರ್ಯಭಾರದಲ್ಲಿ ಬದಲಾವಣೆ ತಂದಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಎಷ್ಟು ಯೂನಿಟ್‌ಗಳಿಗೆ (ವಿದ್ಯಾರ್ಥಿಗಳಿಗೆ) ಒಬ್ಬ ಜೂನಿಯರ್ ಟ್ರೈನಿಂಗ್ ಆಫೀಸರ್ ಎಂದು ನೇಮಕ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ; ಅದರಂತೆ, ಎರಡನೇ ಜೂನಿಯರ್ ಟ್ರೈನಿಂಗ್ ಆಫೀಸರ್ ನೇಮಿಸಿಕೊಳ್ಳಲು ಎಷ್ಟು ಯೂನಿಟ್ (ವಿದ್ಯಾರ್ಥಿಗಳು) ಇರಬೇಕೆಂದು ನಿಗದಿಪಡಿಸಲಾಗಿದೆ ; ಮಾಹಿತಿ ಒದಗಿಸುವುದು ;

(ಇ) ಡಿಜಿಇಟಿ ಸೂಚಿಸಿರುವ ನಿಯಮದಂತೆ ಇಂಜಿನಿಯರಿಂಗ್ ಡ್ರಾಯಿಂಗ್ ಹಾಗೂ ಕಾರ್ಯಗಾರ ಲೆಕ್ಕಾಚಾರ ವಿಷಯ ಬೋಧಕರಿಗೆ ನಿಗದಿಪಡಿಸಿರುವ ಕಾರ್ಯಭಾರ ಎಷ್ಟು ; ವಿವರವಾದ ಮಾಹಿತಿ ನೀಡುವುದು ;

(ಈ) ಪರಿಷ್ಕೃತ ಅನುದಾನ ಸಂಹಿತೆಯ ಹಿನ್ನೆಲೆಯಲ್ಲಿ, ಕಾರ್ಯಭಾರ ಹೆಚ್ಚಿಸಿರುವ ITI ಸಂಸ್ಥೆಗಳಲ್ಲಿ ಜೂನಿಯರ್ ಟ್ರೈನಿಂಗ್ ಆಫೀಸರ್ ಹೆಚ್ಚುವರಿ ಆಗುವ ಸನ್ನಿವೇಶ ಸೃಷ್ಟಿ ಆಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ವಿವರ ನೀಡುವುದು)

## ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಂದ ಸಿಬ್ಬಂದಿಗಳ ನಿಯೋಜನೆ ಕುರಿತು

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೫೨ (೧೪೮೯) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ನೇ ಸಾಲಿನಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ಪ್ರೌಢ ಶಾಲಾ ಹಾಗೂ ಪ್ರಾಥಮಿಕ ಶಾಲೆಗಳಿಂದ ನಿಯೋಜಿಸುವ ಸಿಬ್ಬಂದಿ/ ನೌಕರರುಗಳನ್ನು ಜಿಲ್ಲಾ ಉಪ ನಿರ್ದೇಶಕರಿಂದ ನಿಯೋಜನೆ ಆದೇಶ ಹೊರಡಿಸಲಾಗಿದೆಯೇ ;

(ಆ) ನಿಯೋಜನೆ ಆದೇಶ ಹೊರಡಿಸಿದ್ದಲ್ಲಿ, ಸಂಬಂಧಿಸಿದ ಆದೇಶದ ಪ್ರತಿ ನೀಡುವುದು ;

(ಇ) ೨೦೨೫–೨೬ನೇ ಸಾಲಿನಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ಪ್ರೌಢ ಶಾಲಾ ಹಾಗೂ ಪ್ರಾಥಮಿಕ ಶಾಲೆಗಳಿಂದ ನಿಯೋಜನೆಗೊಂಡ ಶಿಕ್ಷಕರು ಯಾವ ಸಾಲಿನಿಂದ ಸಂಬಂಧಪಟ್ಟ ಶಾಲೆಯಿಂದ ನಿಯೋಜಿಸಲಾಗಿದೆ ; (ಆದೇಶದ ಪ್ರತಿ ಒದಗಿಸುವುದು) ಕೊಪ್ಪಳ ಜಿಲ್ಲೆಯಲ್ಲಿ ಸರ್ಕಾರದ ಆದೇಶವಿಲ್ಲದೇ ಪ್ರೌಢ ಶಾಲಾ ಹಾಗೂ ಪ್ರಾಥಮಿಕ ಶಾಲೆಗಳಿಂದ ನಿಯೋಜನೆಗೊಂಡ ಕ್ಷೇತ್ರದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಉಪ ನಿರ್ದೇಶಕರ ಮೇಲೆ ಯಾವ ಕ್ರಮ ಜರುಗಿಸಲಾಗುವುದು ?

## ಮಹಿಳಾ ಶಿಕ್ಷಕರಿಗೆ ವಿಶೇಷ ಹಕ್ಕಿನ ರಜೆ ನೀಡುತ್ತಿರುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೫೩ (೧೪೨೦) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿಕ್ಷಣ ಇಲಾಖೆಯ ಮಹಿಳಾ ಶಿಕ್ಷಕರಿಗೆ ಶಿಶುಪಾಲನೆ ರಜೆ/ ವಿಶೇಷ ಹಕ್ಕಿನ ರಜೆ / ಗಳಿಕೆ ರಜೆ ಸರಾಸರಿ ವೇತನದ ಮೇಲೆ ಫಾರ್ಲೊ ರಜೆ ವೈದ್ಯ ಪ್ರಮಾಣ ಪತ್ರದ ಮೇಲೆ ಸರಾಸರಿ ವೇತನದ ರಜೆ/ ಅರ್ಧ ಸರಾಸರಿ ವೇತನದ ಮೇಲೆ ಪರಿವರ್ತಿತ ರಜೆ/ ಅರ್ಧ ವೇತನದ ರಜೆ ಬಾಕಿ ಇಲ್ಲದ ರಜೆ/ ಅಸಾಧರಣ ರಜೆಗಳ ಅವಧಿ ಮುಕ್ತಾಯವಾದ ನಂತರ ಶಿಕ್ಷಕರು ಕರ್ತವ್ಯಕ್ಕೆ ಹಾಜರಾಗಲು ಇರುವ ಮಾನದಂಡವೇನು ;

(ಆ) ಮೇಲ್ಕಾಣಿಸಿ ರಜೆ ಅವಧಿ ನಂತರ ಕರ್ತವ್ಯಕ್ಕೆ ಹಾಜರಾಗಲು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳ ಚಲನಾದೇಶ ಅಥವಾ ಅನುಮತಿ ಅವಶ್ಯಕತೆ ಇದೆಯೇ ;

(ಇ) ಇದ್ದಲ್ಲಿ, ಶಿಕ್ಷಕರು ಯಾವ ಯಾವ ರಜೆಗಳಿಗೆ ಚಲನಾದೇಶ ಅಥವಾ ಅನುಮತಿ ಪಡೆಯಬೇಕು ;

(ಈ) ಇಲ್ಲದಿದ್ದಲ್ಲಿ, ಕೊಪ್ಪಳ ಜಿಲ್ಲೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಉಪ ನಿರ್ದೇಶಕರಿಗೆ ಸೂಕ್ತ ಮಾಹಿತಿ ನೀಡಲು ಯಾವ ಕ್ರಮ ಜರಗಿಸಲಾಗಿದೆ ?

## ರಾಯಚೂರು–ಕೊಪ್ಪಳ ಜಿಲ್ಲಾ ವ್ಯಾಪ್ತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯುತ್ ಘಟಕಗಳ ಬಗ್ಗೆ

**ಶ್ರೀ ಶರಣಗೌಡ ಬಯ್ಯಪುರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೫೪ (೧೩೮೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು–ಕೊಪ್ಪಳ ಜಿಲ್ಲೆಗಳ ವ್ಯಾಪ್ತಿಯಲ್ಲಿ ಎಷ್ಟು ಕಂಪನಿಗಳಿಗೆ ವಿಂಡ್‌ವಿಲ್ ಮತ್ತು ಸೋಲಾರ್ ಘಟಕಗಳನ್ನು ಸ್ಥಾಪಿಸಲು

ಅನುಮತಿ ನೀಡಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಯಾವ ಯಾವ ಕಂಪನಿಗಳಿಗೆ ಯಾವ ಪ್ರದೇಶಗಳಲ್ಲಿ ಘಟಕಗಳನ್ನು ಸ್ಥಾಪಿಸಲು ಅನುಮತಿ ನೀಡಲಾಗಿದೆ ; (ಸಂಪೂರ್ಣ ವಿವರ ಒದಗಿಸುವುದು)

(ಇ) ಸದರಿ ಕಂಪನಿಗಳು ವಿದ್ಯುತ್ ಉತ್ಪಾದನಾ ಘಟಕಗಳನ್ನು ಪ್ರಾರಂಭಿಸಿದ್ದಾರೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ;

(ಈ) ಸದರಿ ಘಟಕಗಳನ್ನು ಪ್ರಾರಂಭಿಸಲು ರೈತರಿಂದ ಪಡೆದುಕೊಂಡ ಭೂಮಿಗಳಿಗೆ ಪರಿಹಾರವನ್ನು ಸಂಪೂರ್ಣವಾಗಿ ನೀಡಿದ್ದಾರೆಯೇ ; ಇಲ್ಲದಿದ್ದಲ್ಲಿ, ಕಂಪನಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಉ) ಸದರಿ ವಿದ್ಯುತ್ ಉತ್ಪಾದನೆ ಘಟಕಗಳಲ್ಲಿ ಸ್ಥಳೀಯ ನಿರುದ್ಯೋಗಿ ಯುವಕರಿಗೆ ಕಡ್ಡಾಯವಾಗಿ ಉದ್ಯೋಗವನ್ನು ನೀಡಲು ಸರ್ಕಾರವು ಕಂಪನಿಗಳಿಗೆ ನಿರ್ದೇಶನ ನೀಡಲು ಕ್ರಮ ತೆಗೆದುಕೊಳ್ಳುವುದೇ ?

## ವೈದ್ಯಕೀಯ ಶಿಕ್ಷಣ ಇಲಾಖೆಗೆ ಬಿಡುಗಡೆಯಾದ ಅನುದಾನ ಮತ್ತು ಖಾಲಿ ಹುದ್ದೆಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೫೫ (೧೪೨೮) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪ರಿಂದ ೨೦೨೫–೨೬ ರ ಸಾಲಿನವರೆಗೆ ಲೆಕ್ಕ ಶೀರ್ಷಿಕೆ ೧೦೩ ಮತ್ತು ೪೫ ಉಪ ಶೀರ್ಷಿಕೆಯಡಿಯಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆಗೆ ಪ್ರಸ್ತಾಪಿತ ಅನುದಾನ ಹಾಗೂ ಬಿಡುಗಡೆಯಾದ ಅನುದಾನದ ಸಂಪೂರ್ಣ ವಿವರ ನೀಡುವುದು ;

(ಆ) ಪ್ರಸ್ತಾಪಿತ ಅನುದಾನ ಮತ್ತು ಬಿಡುಗಡೆಯಾದ ಅನುದಾನದಲ್ಲಿ ವ್ಯತ್ಯಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವ್ಯತ್ಯಾಸಕ್ಕೆ ಕಾರಣಗಳೇನು ;

(ಇ) ವೈದ್ಯಕೀಯ ಶಿಕ್ಷಣ ಇಲಾಖೆಯಡಿ ಬರುವ ಸಂಸ್ಥೆಗಳಲ್ಲಿ ಖಾಲಿ ಇರುವ ಬೋಧಕ, ತಾಂತ್ರಿಕ ಹಾಗೂ ಬೋಧಕೇತರ ಒಟ್ಟು ಹುದ್ದೆಗಳೆಷ್ಟು; ಸದರಿ ಹುದ್ದೆಗಳು ಎಷ್ಟು ವರ್ಷಗಳಿಂದ ಖಾಲಿ ಇವೆ ; (ಸಂಸ್ಥೆವಾರು ಪ್ರತ್ಯೇಕವಾಗಿ ಮಾಹಿತಿ ನೀಡುವುದು)

(ಈ) ಬಾದಾಮಿ ತಾಲ್ಲೂಕು ಮತ್ತು ಚಿತ್ರದುರ್ಗಗಳಲ್ಲಿ Trauma Care ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ; ಸದರಿ ಸ್ಥಳಗಳಲ್ಲಿ ಯಾವ ಕಾಲಮಿತಿಯಲ್ಲಿ Trauma Care ಸ್ಥಾಪಿಸಲಾಗುವುದು ?

## ರಾಜ್ಯದ ಸರ್ಕಾರಿ ITI ಕಾಲೇಜುಗಳ ಸ್ಥಿತಿಗತಿ ಕುರಿತು

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೫೬ (೧೪೨೯) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಸರ್ಕಾರಿ ITI ಕಾಲೇಜುಗಳಿವೆ ; ೨೦೨೧ ರಿಂದ ಇಲ್ಲಿಯವರೆಗೆ ಅನುಮತಿಸಿದ ಸೀಟುಗಳು ಮತ್ತು ದಾಖಲಾದ ಸೀಟುಗಳ ಸಂಖ್ಯೆ ಎಷ್ಟು ; (ವರ್ಷವಾರು, Trade ವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಆ) ೨೦೨೦–೨೧ ರಿಂದ ಇಲ್ಲಿಯುವರೆಗೆ ತೇರ್ಗಡೆಯಾದ ವಿದ್ಯಾರ್ಥಿಗಳ ಸಂಖ್ಯೆ ಮತ್ತು ಅನುತ್ತೀರ್ಣರಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಸರ್ಕಾರಿ ITI ಕಾಲೇಜುಗಳಲ್ಲಿ ಖಾಲಿ ಇರುವ ಒಟ್ಟು ಹುದ್ದೆಗಳೆಷ್ಟು ; ಎಷ್ಟು ವರ್ಷದಿಂದ ಖಾಲಿ ಇವೆ ; ಸದರಿ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು ;

(ಈ) ಎಷ್ಟು ಸರ್ಕಾರಿ ITI ಕಾಲೇಜುಗಳಲ್ಲಿ ಉದ್ಯೋಗ ಕೋಶಗಳನ್ನು ಸ್ಥಾಪಿಸಲಾಗಿದೆ ;

(ಉ) ಕಳೆದ ೫ ವರ್ಷಗಳಲ್ಲಿ ಎಷ್ಟು ವಿದ್ಯಾರ್ಥಿಗಳು ಅವುಗಳಿಂದ ಉದ್ಯೋಗ ಪಡೆದುಕೊಂಡಿದ್ದಾರೆ ; ಬೆಂಗಳೂರು ವಿಭಾಗ ಹೊರತುಪಡಿಸಿ, ಎಷ್ಟು ಉದ್ದಿಮೆಗಳು ಅವುಗಳಲ್ಲಿ ಪಾಲುದಾರಿಕೆ ಹೊಂದಿವೆ ? (ಜಿಲ್ಲಾವಾರು ಪ್ರತ್ಯೇಕ ಮಾಹಿತಿ ನೀಡುವುದು)

## ಪ್ರಾಥಮಿಕ ಶಾಲಾ ಹಂತದಲ್ಲಿ ಮಕ್ಕಳಲ್ಲಿ ಸಾಮರ್ಥ್ಯ ಬೆಳೆಸುವಲ್ಲಿ ಪ್ರೌಢ ಶಾಲಾ ಶಿಕ್ಷಕರ ಮೇಲೆ ಆಗುತ್ತಿರುವ ಒತ್ತಡದ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೨೫೭ (೧೩೬೨) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭಾರತ ಸಂವಿಧಾನದ ಅನುಚ್ಛೇದ ೩೫ ರನ್ವಯ ೬ ರಿಂದ ೧೪ ವರ್ಷದ ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಶಿಕ್ಷಣದ ಹಕ್ಕನ್ನು ಒದಗಿಸಲಾಗಿದ್ದು, ಅದರಂತೆ ಸಿ.ಸಿಇ (ನಿರಂತರ ಮತ್ತು ವ್ಯಾಪಕ ಮೌಲ್ಯಮಾಪನದ) ಅಡಿಯಲ್ಲಿ ಆಯಾ ವಯಸ್ಸಿಗನುಗುಣವಾಗಿ ನಿರ್ಧಿಷ್ಟಪಡಿಸಿದ ಸಾಮರ್ಥ್ಯಗಳನ್ನು ಕಡ್ಡಾಯವಾಗಿ ಬೆಳೆಸಲು ಸರ್ಕಾರ ಯಾವ ಮಾನದಂಡ ಅನುಸರಿಸಲಾಗುತ್ತಿದೆ ;

(ಆ) ಪ್ರಾಥಮಿಕ ಶಾಲೆಯಿಂದ ಪ್ರೌಢ ಶಾಲೆಗೆ ಬರುವ ಮಕ್ಕಳಲ್ಲಿ ಮೂಲಾಕ್ಷರ, ಗಣಿತದ ಮೂಲ ಪರಿಕಲ್ಪನೆಗಳ ಜ್ಞಾನ ಕೂಡ ಇಲ್ಲವೆಂದು ಅನೇಕ ಅಧ್ಯಯನದ ವರದಿಗಳು ಸ್ಪಷ್ಟಪಡಿಸಿರುವ ನಿಟ್ಟಿನಲ್ಲಿ ತನ್ನ ಜೀವನದ ಅತ್ಯಮೂಲ್ಯ ಸಮಯವನ್ನು ಶಾಲೆಯಲ್ಲಿ ಕಳೆದ ನಂತರ ಆಯಾ ಹಂತಕ್ಕೆ ನಿಗದಿಪಡಿಸಿದ ಸಾಮರ್ಥ್ಯ ಗಳಿಸುವುದು ಕೂಡ ಬಹುಮುಖ್ಯವಾಗಿರುತ್ತದೆ ಇದಕ್ಕೆ ಸರ್ಕಾರ ಯಾವ ಮಾನದಂಡ ಅನುಸರಿಸಿ ಅವರ ಕಲಿಕೆಯನ್ನು ಖಾತ್ರಿಪಡಿಸುತ್ತಿದೆ ;

(ಇ) ಪ್ರೌಢ ಶಾಲೆಗೆ ಬರುವ ಮಕ್ಕಳಲ್ಲಿ ಸಾಮರ್ಥ್ಯದ ಕೊರತೆಯನ್ನು ನೀಗಿಸಲು ಪ್ರಾಥಮಿಕ ಹಂತದಲ್ಲಿಯೇ ಕ್ರಮ ಕೈಗೊಳ್ಳದೇ ಪ್ರೌಢ ಶಾಲಾ ಶಿಕ್ಷಕರ ಮೇಲೆ ಹೆಚ್ಚಿನ ಕಾರ್ಯಭಾರ ಹಾಗೂ ಒತ್ತಡ ಹೇರಲು ಕಾರಣವೇನು ?

## ರಾಜ್ಯದ ಆಯುಷ್ ಇಲಾಖೆಯಲ್ಲಿ ಖಾಲಿ ಇರುವ ಔಷಧ ವಿತರಕರ ಹುದ್ದೆಗಳ ನೇಮಕಾತಿ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೨೫೮ (೧೩೬೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಆಯುಷ್ ಇಲಾಖೆಯಲ್ಲಿ ಮಂಜೂರಾದ, ಭರ್ತಿಯಾದ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು;

(ಆ) ಆಯುಷ್ ಇಲಾಖೆಯಲ್ಲಿ ಆಯುರ್ವೇದ, ಯುನಾನಿ ಮತ್ತು ಹೋಮಿಯೋಪತಿ ವಿಭಾಗದ ಔಷಧ ವಿತರಕರ ಒಟ್ಟು ೨೬೭ ಹುದ್ದೆಗಳನ್ನು ರದ್ದುಗೊಳಿಸಿರುವುದು (ಆದೇಶ ಸಂಖ್ಯೆ: ಆಯುಷ್/

೧೪೮/(೨)/೨೦೧೮-೧೯, ದಿನಾಂಕ:೨೭.೦೧.೨೦೨೧) ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಹುದ್ದೆಗಳನ್ನು ರದ್ದುಗೊಳಿಸಲು ಕಾರಣವೇನು ;

(ಇ) ಆಯುಷ್ ಚಿಕಿತ್ಸೆಗೆ ಜನ ಸಾಮಾನ್ಯರಿಂದ ಬೇಡಿಕೆ ಹೆಚ್ಚಾಗುತ್ತಿರುವ ಈ ಸಂದರ್ಭದಲ್ಲಿ ತುರ್ತು ಅಗತ್ಯವಿರುವ ಸ್ಥಳಗಳಲ್ಲಿ ಫಾರ್ಮಸಿ (Pharmacists) ಅಧಿಕಾರಿಗಳಿಲ್ಲದೆ ರೋಗಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ;

(ಈ) ಆಯುಷ್ ಚಿಕಿತ್ಸಾಲಯಗಳಲ್ಲಿ ಫಾರ್ಮಸಿ ಅಧಿಕಾರಿಗಳಿಲ್ಲದೆ ರೋಗಿಗಳಿಗೆ ಸರಿಯಾದ ಚಿಕಿತ್ಸೆ ಸಿಗದೆ ಸಮಸ್ಯೆಯಾಗುತ್ತಿದ್ದು ಸದರಿ ರದ್ದಾಗಿರುವ ಫಾರ್ಮಸಿ ಅಧಿಕಾರಿಗಳ ಹುದ್ದೆಗಳನ್ನು ಮರು-ಸೃಜಿಸಲು (Post Re-creation) ಸರ್ಕಾರ ಕ್ರಮ ಕೈಗೊಳ್ಳುವುದೇ; ಒಂದು ವೇಳೆ ಕ್ರಮ ಕೈಗೊಳ್ಳುವುದಾದಲ್ಲಿ, ಈ ಪ್ರಕ್ರಿಯೆಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ; ಇಲ್ಲವಾದಲ್ಲಿ, ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಯುನ್ನು ಪರಿಹರಿಸಲು ಸರ್ಕಾರ ಕೈಗೊಳ್ಳಬಹುದಾದ ಪರ್ಯಾಯ ಯೋಜನೆಗಳೇನು ;

(ಉ) ಆರೋಗ್ಯ ಇಲಾಖೆಗೆ ಸಿಬ್ಬಂದಿ ಕಡಿತದಿಂದ ವಿನಾಯಿತಿ ನೀಡಬೇಕೆಂಬ ನಿಯಮವಿದ್ದರೂ ಸಹ ಆಯುಷ್ ಇಲಾಖೆಯಲ್ಲಿ ಇಷ್ಟೊಂದು ದೊಡ್ಡ ಸಂಖ್ಯೆಯ ತಾಂತ್ರಿಕ ಹುದ್ದೆಗಳನ್ನು ರದ್ದುಪಡಿಸಲು ಬಲವಾದ ಕಾರಣಗಳೇನು ?

# ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿ ಬರುವ ವಸತಿ ಶಿಕ್ಷಣ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಚಿತ್ರಕಲಾ ಶಿಕ್ಷಕರ ವೇತನವನ್ನು ವಿಶೇಷ ಶಿಕ್ಷಕರ ವೇತನದಂತೆ ಸಮನಾಂತರಗೊಳಿಸುವ ಕುರಿತು

**ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೨೫೯ (೧೩೬೪) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಜಾರಿಗೆ ಬಂದಿರುವ ಪರಿಷ್ಕೃತ ಅನುದಾನಿತ ಸಂಹಿತೆಯಲ್ಲಿ ನಮೂದಿಸಲಾಗಿರುವ ಕಿರಿಯ ತರಬೇತಿ ಅಧಿಕಾರಿಗಳು ಹಾಗೂ ಇತರ ಸಿಬ್ಬಂದಿಗಳ ಸಂಖ್ಯೆ ಕೇಂದ್ರ ಡಿಜಿಇಟಿ ಟ್ರೈನಿಂಗ್ ಮ್ಯಾನ್ಯುಯಲ್ ಹಾಗೂ ಇಲಾಖೆಯ ಸುತ್ತೋಲೆಗಳಲ್ಲಿ ಹೇಳಲಾಗಿರುವ ಸಂಖ್ಯೆಗೆ ವ್ಯತಿರಿಕ್ತವಾಗಿ ಇರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿಯ ಸಿಬ್ಬಂದಿಗಳ ಸಂಖ್ಯೆ ಡಿಜಿಇಟಿ ಸೂಚಿಸಿರುವ ನಿಯಮಾವಳಿಗೆ ವಿರುದ್ಧವಾಗಿ ಇದ್ದಲ್ಲಿ, ಭವಿಷ್ಯದಲ್ಲಿ ಐಟಿಐ ಸಂಸ್ಥೆಗಳ ಶಾಶ್ವತ ಸಂಯೋಜನೆಗೆ ತೊಡಕಾಗುತ್ತದೆ ಎನ್ನುವ ಗಂಭೀರತೆಯ ಅರಿವು ಸರ್ಕಾರಕ್ಕೆ ಬಂದಿದೆಯೇ ;

(ಇ) ಸರ್ಕಾರಿ ಹಾಗೂ ಅನುದಾನಿತ ಐಟಿಐ ಸಂಸ್ಥೆಗಳಲ್ಲಿ ಇಂಜಿನಿಯರಿಂಗ್ ಡ್ರಾಯಿಂಗ್ ಹಾಗೂ ಕಾರ್ಯಗಾರ ಲೆಕ್ಕಚಾರ ವಿಷಯ ಬೋಧಕರನ್ನು, ಡಿಜಿಇಟಿ ಸೂಚಿಸಿರುವ ತರಬೇತಿದಾರರ ಸಂಖ್ಯೆಗೆ ವಿರುದ್ಧವಾಗಿ ಅವರ ಸೇವೆಯನ್ನು ಕಡಿತಗೊಳಿಸಿ, ಅವರ ಸೇವೆಯನ್ನು ಇತರ ವಿಷಯಗಳ ಬೋಧನೆಯಲ್ಲಿ ಬಳಸಿಕೊಳ್ಳುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಈ) ೨೦೨೨ ನವೆಂಬರ್ ಹಾಗೂ ೨೦೨೬ ಜನವರಿ ತಿಂಗಳಲ್ಲಿ ಡಿಜಿಇಟಿ ಹೊರಡಿಸಿರುವ ಸುತ್ತೋಲೆಯಲ್ಲಿ ೦-೧೪೪ ತರಬೇತಿಗಳಿಗೆ ಸದರಿ ವಿಷಯ ಬೋಧನೆಗೆ ಪ್ರತ್ಯೇಕ ಕಿರಿಯ ತರಬೇತಿ ಅಧಿಕಾರಿ ನಿಯೋಜನೆ ಕುರಿತು ಪ್ರಾಸ್ತಾಪಿಸಿರುವ ಅಂಶಗಳ ಕುರಿತು ಸರ್ಕಾರಕ್ಕೆ ಮಾಹಿತಿ ಇದೆಯೇ ;

(ಉ) ಸರ್ಕಾರಿ ಹಾಗೂ ಅನುದಾನಿತ ಐಟಿಐ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಇಂಜಿನಿಯರಿಂಗ್ ಡ್ರಾಯಿಂಗ್ ಹಾಗೂ ಕಾರ್ಯಾಗಾರ ಲೆಕ್ಕಾಚಾರ ಮತ್ತು ವಿಜ್ಞಾನ ವಿಷಯಕ್ಕೆ ನೇಮಕಾತಿ ಆಗಿರುವ ಕಿರಿಯ ತರಬೇತಿ ಅಧಿಕಾರಿಗಳನ್ನು ಇತರ ವಿಷಯ ಬೋಧನೆಗೆ ವರ್ಗಾವಣೆ/ನಿಯೋಜನೆ ಮಾಡಿದಲ್ಲಿ, ಸದರಿ ವಿಷಯ ಬೋಧನೆಗೆ ಡಿಜಿಇಟಿ ನಿಯಮಾವಳಿಗಳಿಗೆ ಪೂರಕವಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳು ಯಾವುವು ;

(ಊ) ಕಳೆದ ೨೦ಕ್ಕಿಂತ ಅಧಿಕ ವರ್ಷಗಳಿಂದ ಸದರಿ ವಿಷಯ ಬೋಧನೆ ಮಾಡುತ್ತಿರುವ ಕಿರಿಯ ತರಬೇತಿ ಅಧಿಕಾರಿಗಳು ನಿವೃತ್ತಿ ಅಂಚಿನಲ್ಲಿ ಇರುವಾಗ ಬೇರೆ ವಿಷಯಗಳ ಬೋಧನೆಗೆ ಆದೇಶ ನೀಡುವುದರಿಂದ, ಬದಲಾಗುತ್ತಿರುವ ತಂತ್ರಜ್ಞಾನ ಹಾಗೂ ಪಠ್ಯ ಕ್ರಮಗಳಿಂದಾಗಿಯೂ ತರಬೇತಿಗೆ ತೊಡಕಾಗುತ್ತದೆ ಎನ್ನುವ ಗಂಭೀರತೆಯ ಅರಿವು ಸರ್ಕಾರಕ್ಕೆ ಬಂದಿದೆಯೇ ?

## ಸರ್ಕಾರಿ ಹಾಗೂ ಅನುದಾನಿತ ಐಟಿಐ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳ ನೇಮಕಾತಿಯ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೧೨೬೦ (೧೩೬೫) ವಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಹಾಗೂ ಅನುದಾನಿತ ಐಟಿಐ ಸಂಸ್ಥೆಗಳು ಎಷ್ಟು ; ಅವು ಯಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳು ಎಷ್ಟು; (ಜಿಲ್ಲಾವಾರು ಸಂಸ್ಥೆವಾರು ಮಾಹಿತಿ ನೀಡುವುದು)

(ಇ) ಈ ಸಂಸ್ಥೆಗಳಲ್ಲಿ ಬಹಳ ವರ್ಷಗಳಿಂದ ಖಾಲಿ ಇರುವ ಹುದ್ದೆಗಳಿಂದ ವಿದ್ಯಾರ್ಥಿಗಳಿಗೆ ಪ್ರಸ್ತುತ ಇರುವ ನವೀಕೃತ ತಾಂತ್ರಿಕ ಶಿಕ್ಷಣ ನೀಡುವಲ್ಲಿ ಬಹಳ ಸಮಸ್ಯೆಯಾಗುತ್ತಿದ್ದು ಈ ಹುದ್ದೆಗಳನ್ನು ತುಂಬಿಕೊಳ್ಳಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳುತ್ತಿದೆ; ಯಾವ ಕಾಲಮಿತಿಯಲ್ಲಿ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು ?

## ರಾಜ್ಯದಲ್ಲಿನ ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ವಿವಿಧ ಸೌಲಭ್ಯಗಳನ್ನು ನೀಡುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೨೬೧ (೧೩೬೬) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಜ್ಯೋತಿ ಸಂಜೀವಿನಿ ಸೌಲಭ್ಯವನ್ನು ನೀಡುವ ಆಲೋಚನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಯಾವ ಕಾಲಮಿತಿಯಲ್ಲಿ ಸೌಲಭ್ಯವನ್ನು ನೀಡಲಾಗುವುದು ;

(ಆ) ಸದರಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ Salary Slip ಅನ್ನು ಸರ್ಕಾರಿ ನೌಕರರಂತೆ ನೇರವಾಗಿ ಸ್ವತಃ ಪಡೆಯುವಂತೆ ಅವಕಾಶ ಮಾಡಿಕೊಡದೇ ಇರಲು ಕಾರಣವೇನು; ಈ ಸೌಲಭ್ಯವನ್ನು ಸದರಿ ನೌಕರರಿಗೂ ಕೂಡ ನೀಡುವ ಬಗ್ಗೆ ಸರ್ಕಾರದ ನಿಲುವೇನು ;

(ಇ) ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರು ಜೀವ ವಿಮೆಯ ಕಂತನ್ನು ಹೆಚ್‌ಆರ್‌ಎಂಎಸ್ ನಿಂದ

ಕಡಿತಗೊಳಿಸಿ ಸರ್ಕಾರಿ ನೌಕರರಂತೆ ಇವರಿಗೂ ಕೂಡ ನೇರವಾಗಿ ಹೆಚ್.ಆರ್.ಎಂ.ಎಸ್ ನಿಂದ ಎಲ್.ಐ.ಸಿ ಸಂಸ್ಥೆಗೆ ವರ್ಗಾವಣೆಯಾಗುವಂತೆ ಅವಕಾಶ ಮಾಡಿಕೊಡಬಹುದಲ್ಲವೇ; ಈ ಬಗ್ಗೆ ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು ;

(ಈ) ಸರ್ಕಾರವು ಸರ್ಕಾರಿ ನೌಕರರಿಗೆ ನೀಡಲು ಇಚ್ಛಿಸಿರುವ ESR (Electronic Service Record) ವ್ಯವಸ್ಥೆಯನ್ನು ಅನುದಾನಿತ ಶಾಲಾ ಕಾಲೇಜುಗಳ ನೌಕರರಿಗೂ ಅನ್ವಯಿಸುವಂತೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## NPS ರದ್ದುಗೊಳಿಸಿ OPS ಜಾರಿ ಮಾಡುವ ಬಗ್ಗೆ.

**ಶ್ರೀ ಡಿ. ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೨೬೨ (೧೩೫೫) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೦೧.೦೪.೨೦೦೬ ರ ನಂತರ ನೇಮಕಗೊಂಡ ಅನುದಾನಿತ ನೌಕರರಿಗೆ NPS ಇಲ್ಲ OPS ಕೂಡ ಇಲ್ಲವಾದ್ದರಿಂದ, ಸರ್ಕಾರ NPS ರದ್ದುಮಾಡಿ OPS ಜಾರಿ ಮಾಡುವ ಸಂದರ್ಭದಲ್ಲಿ ಅನುದಾನಿತ ನೌಕರರಿಗೆ ಕೂಡ ಯಾಥಾವತ್ತಾಗಿ ಜಾರಿಗೊಳಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ; (ಮಾಹಿತಿ ನೀಡುವುದು)

(ಆ) ಅನುದಾನಿತ ಕಾಲೇಜುಗಳಲ್ಲಿ ೨೦೧೫ ರ ನಂತರ ನೇಮಕಾತಿ ಆಗಿಲ್ಲದ ಕಾರಣ ಉಪನ್ಯಾಸಕರು ಇಲ್ಲದೇ ಇರುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ನೇಮಕಾತಿ ಇಲ್ಲದ ಕಾರಣ ಅನುದಾನಿತ ಕಾಲೇಜುಗಳ ಉಪನ್ಯಾಸಕರನ್ನು ಸರ್ಕಾರಿ ಕಾಲೇಜುಗಳಿಗೆ ನಿಯೋಜನೆ ಮಾಡಲು ಸರ್ಕಾರದಿಂದ ಕೈಗೊಂಡ ಕ್ರಮಗಳೇನು ;

(ಈ) ಅನುದಾನಿತ ಕಾಲೇಜುಗಳಿಗೆ ೩% ನಲ್ಲಿ ಸೇವೆಗೆ ಸೇರಿದ ನೌಕರರು ನಿವೃತ್ತಿ ನಂತರ ಅವರ ಹುದ್ದೆ ರದ್ದಾಗುವುದೆಂದು ತಿಳಿಸಿದ್ದು, ರದ್ದಾದರೆ ಆ ಕಾಲೇಜಿನ ಮುಂದಿನ ಭವಿಷ್ಯವೇನು, ಇದರ ಬಗ್ಗೆ ಸರ್ಕಾರದ ನಿಲುವೇನು ;

(ಉ) ೨೦೧೫ರ ನಂತರ ನೇಮಕಾತಿ ಮಾಡಿಕೊಳ್ಳಲು, ಸರ್ಕಾರ ೨೦೨೦ರ ವರೆಗೆ ಸೂಚಿಸಿದ್ದು, ಈ ನಿಬಂಧನೆಗಳನ್ನು ಸಡಿಲಗೊಳಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ?

## ರಾಜ್ಯದಲ್ಲಿರುವ ಆಸ್ಪತ್ರೆಗಳ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೨೬೩ (೧೩೯೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ವಿವಿಧ ರೀತಿಯ ಆಸ್ಪತ್ರೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಆಸ್ಪತ್ರೆಗಳಿಗೆ ಪೂರಕ ಪ್ರಮಾಣದ ಮೂಲಭೂತ ಸೌಕರ್ಯಗಳಾದ ಔಷಧಿಗಳು, ಉಪಕರಣಗಳು ಮತ್ತು ಸಿಬ್ಬಂದಿ ವರ್ಗದವರನ್ನು ಒದಗಿಸಲಾಗಿದೆಯೇ ;

(ಇ) ಒದಗಿಸದೇ ಇದ್ದಲ್ಲಿ, ಸಾರ್ವಜನಿಕರಿಗೆ ಮತ್ತು ರೋಗಿಗಳಿಗೆ ಆಗುವ ತೊಂದರೆಗಳನ್ನು ನಿವಾರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮಗಳನ್ನು ಸರ್ಕಾರ ಕೈಗೊಂಡಿದೆ ; ಯಾವ ಯಾವ ಸ್ಥಳಗಳಲ್ಲಿ ಔಷಧಿಗಳು ಕಂಡು ಬಂದಿರುತ್ತದೆ ;

(ಉ) ರಾಜ್ಯದಲ್ಲಿ ಹಾಲಿ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೆ ಏರಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ಎಷ್ಟು ; ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೆ ಏರಿಸಲಾಗುವುದು ;

(ಊ) ರಾಜ್ಯದ ಜನರಿಗೆ ಆರೋಗ್ಯದ ಹಿತದೃಷ್ಟಿಯಿಂದ ಆರೋಗ್ಯ ವಿಮೆ ಮಾಡಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಎಷ್ಟು ಮೊತ್ತಕ್ಕೆ ವಿಮೆ ಮಾಡಿಸಲಾಗುವುದು; ಇದರಿಂದ ಯಾವ ಯಾವ ಪ್ರಯೋಜನೆಗಳನ್ನು ಪಡೆಯುಲು ಸಹಕಾರಿಯಾಗುವುದು ? (ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ BPL ಮತ್ತು APL ಕಾರ್ಡ್‌ಗಳ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೨೬೪ (೧೩೯೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಕಾರ್ಡ್‌ದಾರರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಪ್ರಸ್ತುತ ಬಿಪಿಎಲ್ ಕಾರ್ಡ್‌ದಾರರನ್ನು ರದ್ದುಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಎಷ್ಟು ಬಿ.ಪಿ.ಎಲ್ ಕಾರ್ಡ್‌ದಾರರನ್ನು ರದ್ದುಗೊಳಿಸಲಾಗಿದೆ; ಯಾವ ಕಾರಣಕ್ಕೆ ರದ್ದುಪಡಿಸಲಾಗಿದೆ ;

(ಇ) ಬಿಪಿಎಲ್ ಕಾರ್ಡ್‌ದಾರರಿಗೆ ಹಾಲಿ ನೀಡುತ್ತಿರುವ ಯಾವ ಯಾವ ಪಡಿತರ ಸಾಮಾಗ್ರಿಗಳನ್ನು ನೀಡಲಾಗುತ್ತಿದೆ ; (ಮಾಹಿತಿ ನೀಡುವುದು)

(ಈ) ಹೊಸದಾಗಿ ಆಹಾರ ಸಾಮಾಗ್ರಿಗಳನ್ನು ನೀಡಲು ಸರ್ಕಾರದಿಂದ ಉದ್ದೇಶಿಲಾಗಿದೆಯೇ ; ಹಾಗಿದ್ದಲ್ಲಿ ಸಾಮಾಗ್ರಿಗಳ ವಿವರ ನೀಡುವುದು ?

## ಸರ್ಕಾರಿ ಮತ್ತು ಅನುದಾನಿತ ITI ವಿದ್ಯಾರ್ಥಿಗಳ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೨೬೫ (೧೩೯೮) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜಾರಿಗೆ ಬಂದಿರುವ ಪರಿಷ್ಕೃತ ಅನುದಾನಿತ ಸಂಹಿತೆಯುಲ್ಲಿ ನಮೂದಿಸಲಾಗಿರುವ ಕಿರಿಯ ತರಬೇತಿ ಅಧಿಕಾರಿಗಳು ಹಾಗೂ ಇತರ ಸಿಬ್ಬಂದಿಗಳ ಸಂಖ್ಯೆ ಕೇಂದ್ರದ ಡಿ.ಜಿ.ಇ.ಟಿ.ಟ್ರೈನಿಂಗ್ ಮ್ಯಾನ್ಯುಯಲ್ ಹಾಗೂ ಇಲಾಖೆಯ ಸುತ್ತೋಲೆಗಳಲ್ಲಿ ಹೇಳಲಾಗಿರುವ ಸಂಖ್ಯೆಗೆ ವ್ಯತಿರಿಕ್ತವಾಗಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿಯ ಸಿಬ್ಬಂದಿಗಳ ಸಂಖ್ಯೆ ಡಿಜಿಇಟಿ ಸೂಚಿಸಿರುವ ನಿಯಮಾವಳಿಗೆ ವಿರುದ್ಧವಾಗಿ ಇದ್ದಲ್ಲಿ, ಭವಿಷ್ಯದಲ್ಲಿ ಐ.ಟಿ.ಐ ಸಂಸ್ಥೆಗಳ ಶಾಶ್ವತ ಸಂಯೋಜನೆಗೆ ತೊಡಕಾಗುವುದಿಲ್ಲವೇ ; ಈ ಸಮಸ್ಯೆಗಳ ಬಗ್ಗೆ ಸರ್ಕಾರದ ನಿಲುವೇನು ;

(ಇ) ಸರ್ಕಾರಿ ಹಾಗೂ ಅನುದಾನಿತ ಐ.ಟಿ.ಐ ಸಂಸ್ಥೆಗಳಲ್ಲಿ ಇಂಜಿನಿಯರಿಂಗ್ ಡ್ರಾಯಿಂಗ್ ಹಾಗೂ ಕಾರ್ಯಾಗಾರ ಲೆಕ್ಕಚಾರ ವಿಷಯ ಬೋಧಕರನ್ನು ಡಿಜಿಇಟಿ ಸೂಚಿಸಿರುವ ತರಬೇತಿದಾರರ ಸಂಖ್ಯೆಗೆ ವಿರುದ್ಧವಾಗಿ ಅವರ ಸೇವೆಯನ್ನು ಕಡಿತಗೊಳಿಸಿ, ಅವರ ಸೇವೆಯನ್ನು ಇತರ ವಿಷಯಗಳ ಬೋಧನೆಯಲ್ಲಿ ಬಳಸಿಕೊಳ್ಳುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಈ) ೨೦೨೨ ನವೆಂಬರ್ ಹಾಗೂ ೨೦೨೬ ಜನವರಿ ತಿಂಗಳಲ್ಲಿ ಡಿಜಿಇಟಿ ಹೊರಡಿಸಿರುವ ಸುತ್ತೋಲೆಯಲ್ಲಿ ೦-೧೪೪ ತರಬೇತಿಗಳಿಗೆ ಇಂಜಿನಿಯರಿಂಗ್ ಡ್ರಾಯಿಂಗ್ ಹಾಗೂ ಕಾರ್ಯಾಗಾರ ಲೆಕ್ಕಾಚಾರ ಮತ್ತು ವಿಜ್ಞಾನ ಬೋಧನೆಗೆ ಪ್ರತ್ಯೇಕ ಕಿರಿಯ ತರಬೇತಿ ಅಧಿಕಾರಿ ನಿಯೋಜನೆ ಕುರಿತು ಪ್ರಸ್ತಾಪಿಸಿರುವ ಅಂಶಗಳ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ ;

(ಉ) ಸರ್ಕಾರಿ ಹಾಗೂ ಅನುದಾನಿಕ ಐಟಿಐ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಇಂಜಿನಿಯರಿಂಗ್ ಡ್ರಾಯಿಂಗ್ ಹಾಗೂ ಕಾರ್ಯಾಗಾರ ಲೆಕ್ಕಚಾರ ಮತ್ತು ವಿಜ್ಞಾನ ವಿಷಯಕ್ಕೆ ನೇಮಕಾತಿ ಆಗಿರುವ ಕಿರಿಯ ತರಬೇತಿ ಅಧಿಕಾರಿಗಳನ್ನು ಇತರ ವಿಷಯ ಬೋಧನೆಗೆ ವರ್ಗಾವಣೆ/ನಿಯೋಜನೆ ಮಾಡಿದಲ್ಲಿ, ಇಂಜಿನಿಯರಿಂಗ್ ಡ್ರಾಯಿಂಗ್ ಹಾಗೂ ಕಾರ್ಯಗಾರ ಲೆಕ್ಕಾಚಾರ ಮತ್ತು ವಿಜ್ಞಾನ ವಿಷಯ ಬೋಧನೆಗೆ ಡಿಜಿಇಟಿ ನಿಯಮಾಳಿಗಳಿಗೆ ಪೂರಕವಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳು ಯಾವುವು ?

## ವಿದ್ಯುತ್ ಸಂಪರ್ಕದ ಕೊರತೆಯ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೨೬೬ (೧೩೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿದ್ಯುತ್ ಸಂಪರ್ಕದ ಕೊರತೆಯಿಂದ ಕಟ್ಟಡ ನಿರ್ಮಾಣವಾಗದೆ ಕಟ್ಟಡ ಕಾರ್ಮಿಕರಿಗೆ ಉದ್ಯೋಗ ದೊರೆಯದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವಿದ್ಯುತ್ ಸಂಪರ್ಕದ ವ್ಯವಸ್ಥೆಯನ್ನು ಸರಿಪಡಿಸಲು ಯಾವ ಯಾವ ಕ್ರಮಗಳನ್ನು ಜರುಗಿಸಲಾಗಿದೆ ;

(ಆ) ೧೨೦೦ ಅಡಿ ಹೆಚ್ಚು ಅಳತೆಯ ನಿವೇಶನಗಳಿಗೆ ವಿದ್ಯುತ್ ಸಂಪರ್ಕವನ್ನು ನೀಡಲು ಯಾವ ಕ್ರಮ ಜರುಗಿಸಲಾಗಿದೆ ;

(ಇ) ವಿದ್ಯುತ್ ಸಂಪರ್ಕದ ವ್ಯವಸ್ಥೆಯನ್ನು ಸರಿಪಡಿಸದೇ ಇದ್ದಲ್ಲಿ ಮಧ್ಯಮ ವರ್ಗದವರು ಮತ್ತು ಬಡವರು ಮನೆಗಳನ್ನು ನಿರ್ಮಿಸಿಕೊಳ್ಳಲು ತೊಂದರೆಯಾಗುವುದಿಲ್ಲವೇ; ಇದರಿಂದ ಉಂಟಾಗುವ ತೊಂದರೆಗಳನ್ನು ಬಗೆಹರಿಸುವುದು ಯಾವಾಗ ;

(ಈ) ವಿದ್ಯುತ್ ಸಂಪರ್ಕವನ್ನು ನೀಡದೇ ಇದ್ದಲ್ಲಿ ಕಟ್ಟಡ ಕಾರ್ಮಿಕರಿಗೆ, ಉಂಟಾಗುವ ತೊಂದರೆಗಳನ್ನು ಮತ್ತು ಅವರಿಗೆ ಉದ್ಯೋಗ ವ್ಯವಸ್ಥೆಯನ್ನು ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

# ಹಾವೇರಿ ಜಿಲ್ಲೆಯ ಶಿಗ್ಗಾವಿ ತಾಲ್ಲೂಕಿನ ಗೋಟಗೋಡಿ ಗ್ರಾಮದಲ್ಲಿರುವ ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಕೆಲಸ ಮಾಡುತ್ತಿರುವ ಅತಿಥಿ ಉಪನ್ಯಾಸಕರ ವೇತನ ತಾರತಮ್ಯ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೧೨೬೭ (೧೩೩೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯ ಗೋಟಗೋಡಿಯಲ್ಲಿರುವ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದಲ್ಲಿ ಕೆಲಸ ಮಾಡುತ್ತಿರುವ ತಾತ್ಕಾಲಿಕ ಸಹಾಯಕ ಪ್ರಾಧ್ಯಾಪಕರು/ಅತಿಥಿ ಉಪನ್ಯಾಸಕರು ವೇತನ ತಾರತಮ್ಯ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪಕ್ಕದ ಧಾರವಾಡ ವಿಶ್ವವಿದ್ಯಾಲಯದಲ್ಲಿ ಅತಿಥಿ ಉಪನ್ಯಾಸಕರಿಗೆ ವರ್ಷದಲ್ಲಿ ೧೦–೧೧ ತಿಂಗಳ ಕಾರ್ಯಭಾರ ನೀಡಿದರೆ ಜಾನಪದ ವಿಶ್ವವಿದ್ಯಾಲಯದಲ್ಲಿ ಕೇವಲ ವರ್ಷದಲ್ಲಿ ೭ ತಿಂಗಳ ಕಾರ್ಯಭಾರ ನೀಡುತ್ತಿರುವುದಕ್ಕೆ ಕಾರಣಗಳೇನು ;

(ಇ) ಬೇರೆ ವಿಶ್ವವಿದ್ಯಾಲಯಗಳಲ್ಲಿ ರೂ.೩೫–೫೦ ಸಾವಿರದವರೆಗೆ ಪ್ರತಿ ತಿಂಗಳು ವೇತನ ನೀಡುತ್ತಿದ್ದರೆ, ಜಾನಪದ ವಿಶ್ವವಿದ್ಯಾಲಯದಲ್ಲಿ ೧೦ ವರ್ಷದಿಂದ ಕೇವಲ ರೂ. ೨೫ ಸಾವಿರ ಪ್ರತಿ ತಿಂಗಳು ವೇತನ ನೀಡುತ್ತಿರುವುದು ತಾರತಮ್ಯವಲ್ಲವೇ ;

(ಈ) ಜಾನಪದ ವಿಶ್ವವಿದ್ಯಾಲಯದಲ್ಲಿ ಶೈಕ್ಷಣಿಕ ವರ್ಷದ ಪ್ರಾರಂಭದಲ್ಲಿ ನೇಮಕಾತಿ ಮಾಡಿಕೊಳ್ಳುವುದಿಲ್ಲ ಮತ್ತು ಆದೇಶ ಪತ್ರ ನೀಡದಿರುವುದಕ್ಕೆ ಕಾರಣವೇನು ;

(ಉ) ರಾಜ್ಯ ಸರ್ಕಾರದ ಅಧೀನದಲ್ಲಿ ಬರುವ ವಿಶ್ವವಿದ್ಯಾಲಯಗಳು ಸಮಾನವಾದ ವಿದ್ಯಾರ್ಹತೆ ಹೊಂದಿದ್ದರೂ ಕಾರ್ಯಭಾರ/ವೇತನ ತಾರತಮ್ಯ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದಲ್ಲಿ ಅನುಸರಿಸುತ್ತಿರುವುದು ವಿದ್ಯಾವಂತ ಶಿಕ್ಷಕರಿಗೆ ಆಗುತ್ತಿರುವ ಅನ್ಯಾಯವನ್ನು ತಡೆಯಲು ಸರ್ಕಾರ ಸೂಕ್ತ ಕ್ರಮ ಕೈಗೊಳ್ಳುವುದೇ ?

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಗ್ರೂಪ್ 'ಬಿ' ವೃಂದದ ಕೆಲ ಅಧಿಕಾರಿಗಳಿಗೆ ಸ್ಥಾನ ಪದೋನ್ನತಿ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೧೨೬೮ (೧೩೩೧) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧೯೯೯ ರಲ್ಲಿ ಗ್ರೂಪ್ 'ಬಿ' ವೃಂದದ ಪ್ರೌಢ ಶಾಲಾ ಮುಖ್ಯ ಶಿಕ್ಷಕರಾಗಿ ನೇರವಾಗಿ ನೇಮಕಗೊಂಡ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕೆಲ ಅಧಿಕಾರಿಗಳಿಗೆ ಸ್ಥಾನ ಪದೋನ್ನತಿ ನೀಡದಿರಲು ಕಾರಣಗಳೇನು ;

(ಆ) ದಿನಾಂಕ:೧೧.೧೨.೨೦೦೭ ರಿಂದ ಗ್ರೂಪ್ 'ಬಿ' ವೃಂದದಿಂದ ಗ್ರೂಪ್ 'ಎ' ವೃಂದಕ್ಕೆ ಪದೋನ್ನತಿ ನೀಡುವಾಗ ಸಾಮಾನ್ಯ ವರ್ಗದವರಿಗೆ ಪರಿಗಣಿಸಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಧಿಕಾರಿಗಳನ್ನು ಪರಿಗಣಿಸದಿರುವುದರಿಂದ ಅವರನ್ನು ಅವಕಾಶ ವಂಚಿತರನ್ನಾಗಿಸಲಾಗಿದೆಯೇ ;

(ಇ) ಗ್ರೂಪ್ 'ಬಿ' ದಿಂದ ಗ್ರೂಪ್ 'ಎ' ವೃಂದಕ್ಕೆ ಪದೋನ್ನತಿ ನೀಡುವಾಗ ಕೇವಲ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮುಖ್ಯ

ಶಿಕ್ಷಕರನ್ನು/ಅಧಿಕಾರಿಗಳನ್ನು ಕಡೆಗಣಿಸಿರುವುದು ಭಾರತದ ಸಂವಿಧಾನ ಅನುಚ್ಛೇದ ೧೪(೪ಎ)ರ ವಿರುದ್ಧವಾಗಿದ್ದು, ಅವರನ್ನು ತಕ್ಷಣವೇ ಪದೋನ್ನತಿ ಕೊಟ್ಟು ಸಾಮಾಜಿಕ ನ್ಯಾಯ ಒದಗಿಸಬಹುದೆ ;

(ಈ) ೧೯೯೯ ರಿಂದ ಇಲ್ಲಿಯವರೆಗೆ ನಿಷ್ಠೆಯಿಂದ ಸರ್ಕಾರಿ ಸೇವೆ ಸಲ್ಲಿಸಿರುವ ಅಧಿಕಾರಿಗಳಿಗೆ ಜೇಷ್ಠತೆಯನ್ನು ನಿಗದಿಮಾಡಿ ತಕ್ಷಣವೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಧಿಕಾರಿಗಳಿಗೆ ಪದೋನ್ನತಿ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಕಲ್ಯಾಣ ಕರ್ನಾಟಕ ಭಾಗದ ಕಿರಿಯ ಪ್ರಾಥಮಿಕ ಶಾಲೆಗಳಿಗೆ PST ಗಣಿತ ವಿಷಯದ ಹುದ್ದೆಗಳನ್ನು ತುಂಬುವ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೧೨೬೯ (೧೩೩೨) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದ ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ಹೆಚ್ಚಾಗಿ PST ಗಣಿತ ವಿಷಯದ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕಲ್ಯಾಣ ಕರ್ನಾಟಕ ಭಾಗದಲ್ಲಿ ಕರೆಯಲು ಹೊರಟಿರುವ ೪೪೨೪ ಕಿರಿಯ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳಲ್ಲಿ (PST), PST ಗಣಿತ ವಿಷಯದ ಹುದ್ದೆಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ PST ಗಣಿತ (೧ ರಿಂದ ೫ನೇ ತರಗತಿ) ಶಿಕ್ಷಕ ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆಗಳು ಏನು ;

(ಈ) Karnataka TET ೨೦೨೫ ಅಧಿಸೂಚನೆಯಲ್ಲಿರುವಂತೆ PST (೧ ರಿಂದ ೫ನೇ ತರಗತಿ) ಹುದ್ದೆಗೆ PUC+D.E.I.ED ಜೊತೆಗೆ Degree+D.EID ಇರುವುದು ಸೂಕ್ತವಲ್ಲವೇ ;

(ಉ) ಒಟ್ಟಿನಲ್ಲಿ PST ಗಣಿತ ವಿಷಯ ಒಳಗೊಂಡಂತೆ ಈ ಎಲ್ಲಾ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ?

## ಕಲಬುರಗಿಯಲ್ಲಿ ಆಹಾರ ಸುರಕ್ಷತೆ ಹಾಗೂ ಗುಣಮಟ್ಟ ಪ್ರಾಧಿಕಾರದ ಪ್ರಯೋಗಾಲಯ ಸ್ಥಾಪಿಸುವ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೭೦ (೧೪೩೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ವಿಭಾಗದ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ಪ್ರಯೋಗಾಲಯವು ಪ್ರಸ್ತುತ ಬಾಡಿಗೆ ಕಟ್ಟಡದಲ್ಲಿ ಅಥವಾ ತಾತ್ಕಾಲಿಕ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿದೆಯೇ ; ಹಾಗಿದ್ದಲ್ಲಿ, ಖಾಯಂ ಕಟ್ಟಡ ನಿರ್ಮಾಣಕ್ಕಾಗಿ ಸರ್ಕಾರ ಗುರುತಿಸಿರುವ ನಿವೇಶನದ ವಿವರಗಳೇನು ;

(ಆ) ಕಲ್ಯಾಣ ಕರ್ನಾಟಕ ಭಾಗದ (ಕಲಬುರಗಿ ಮತ್ತು ಕೊಪ್ಪಳ ಹೊರತುಪಡಿಸಿ) ಉಳಿದ ಜಿಲ್ಲೆಗಳಲ್ಲಿ ಜಿಲ್ಲಾಮಟ್ಟದ ಪ್ರಯೋಗಾಲಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹೊಸ ಜಿಲ್ಲಾ ಆಸ್ಪತ್ರೆಗಳ ನಿರ್ಮಾಣದ ಜೊತೆಗೆ ಇವುಗಳನ್ನು ಸ್ಥಾಪಿಸಲು ಟೆಂಡರ್ ಪ್ರಕ್ರಿಯೆ ಯಾವ ಹಂತದಲ್ಲಿದೆ ;

(ಇ) ಈ ವಿಭಾಗೀಯ ಪ್ರಯೋಗಾಲಯದಲ್ಲಿ ಅತ್ಯಾಧುನಿಕ ಪರೀಕ್ಷಾ ಉಪಕರಣಗಳು ಮತ್ತು ತಾಂತ್ರಿಕ ಸಿಬ್ಬಂದಿಗಳ ಕೊರತೆ ಇರುವುದು ನಿಜವೇ ; ಇದನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಈ ಪ್ರಯೋಗಾಲಯಕ್ಕೆ ಖಾಯಂ ಸ್ಥಳಾವಕಾಶ ಕಲ್ಪಿಸುವ ಪ್ರಕ್ರಿಯೆಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ?

## ರಾಜ್ಯದಲ್ಲಿ ಕೇಂದ್ರ ಸರ್ಕಾರಿ ಆರೋಗ್ಯ ಯೋಜನೆ (CGHS) ವೆಲ್ನೆಸ್ ಸೆಂಟರ್‌ಗಳ ಸ್ಥಾಪನೆ ಮತ್ತು ವೈದ್ಯಕೀಯ ಸಿಬ್ಬಂದಿ ಕೊರತೆಯ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೭೧ (೧೪೩೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ರಾಜ್ಯದ ಯಾವ ಜಿಲ್ಲೆಗಳಲ್ಲಿ ಕೇಂದ್ರ ಸರ್ಕಾರಿ ಆರೋಗ್ಯ ಯೋಜನೆ (CGHS) ವೆಲ್ನೆಸ್ ಸೆಂಟರ್‌ಗಳು ಕಾರ್ಯನಿರ್ವಹಿಸುತ್ತಿವೆ ;

(ಆ) ಈ ಕೇಂದ್ರಗಳಲ್ಲಿ ಮಂಜೂರಾದ ವೈದ್ಯರು. ಅರೆವೈದ್ಯಕೀಯ (paramedical) ಮತ್ತು ಇತರ ಆರೋಗ್ಯ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಹಾಗೂ ಪ್ರಸ್ತುತ ಎಷ್ಟು ಹುದ್ದೆಗಳು ಖಾಲಿ ಇವೆ ;

(ಇ) ಈ ಖಾಲಿ ಇರುವ ವೈದ್ಯಕೀಯ ಹುದ್ದೆಗಳನ್ನು ಭರ್ತಿ ಮಾಡಲು ಮತ್ತು ಸಾರ್ವಜನಿಕರಿಗೆ ಉತ್ತಮ ಸೇವೆ ಒದಗಿಸಲು ರಾಜ್ಯ ಸರ್ಕಾರವು ಕೇಂದ್ರದ ಮೇಲೆ ಯಾವ ರೀತಿಯ ಒತ್ತಡ ಹೇರಿದೆ ;

(ಈ) ಮಂಗಳೂರು, ಹುಬ್ಬಳ್ಳಿ ಮತ್ತು ಕಲಬುರಗಿ (Gulbarga) ನಗರಗಳಲ್ಲಿ ಹೊಸ CGHS ವೆಲೆಸ್ ಸೆಂಟರ್‌ಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಈ ಪ್ರಕ್ರಿಯೆ ಯಾವ ಹಂತದಲ್ಲಿದೆ ?

# ಕಲಬುರಗಿ ಜಿಲ್ಲೆಯಲ್ಲಿ ಬಿಪಿಎಲ್ ಪಡಿತರ ಚೀಟಿಗಳ ಮರುಪರಿಶೀಲನೆ ಮತ್ತು ಹೊಸ ಅರ್ಜಿಗಳ ವಿಲೇವಾರಿ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೭೨ (೧೪೪೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ಬಿಪಿಎಲ್ (BPL) ಪಟ್ಟಿಯ ಮರುಪರಿಶೀಲನಾ ಕಾರ್ಯವನ್ನು ಕೊನೆಯದಾಗಿ ಯಾವ ವರ್ಷದಲ್ಲಿ ನಡೆಸಲಾಗಿದೆ ; ಪ್ರಸ್ತುತ ಎಷ್ಟು ಅನರ್ಹ ಕಾರ್ಡ್‌ಗಳನ್ನು ಗುರುತಿಸಲಾಗಿದೆ ;

(ಆ) ಜಿಲ್ಲೆಯಲ್ಲಿ ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿ ಎಲ್ಲಾ ಮಾನದಂಡಗಳ ಪ್ರಕಾರ ಅರ್ಹರಾಗಿದ್ದರೂ ಸಹ ಇನ್ನೂ ಕಾರ್ಡ್ ಪಡೆಯದ ಕುಟುಂಬಗಳ ಸಂಖ್ಯೆ ಎಷ್ಟು ;

(ಇ) ಹೊಸ ಪಡಿತರ ಚೀಟಿಗಾಗಿ ಸಲ್ಲಿಕೆಯಾಗಿರುವ ಅರ್ಜಿಗಳ ಕ್ಷೇತ್ರ ಪರಿಶೀಲನೆ (Field Verification) ನಡೆಸಿ ಕಾರ್ಡ್ ವಿತರಿಸಲು ಸರಾಸರಿ ಎಷ್ಟು ಸಮಯ ತೆಗೆದುಕೊಳ್ಳಲಾಗುತ್ತಿದೆ ; ವಿಳಂಬವಾಗುತ್ತಿದ್ದರೆ, ಅದಕ್ಕೆ ಕಾರಣಗಳೇನು ;

(ಈ) ಕಳೆದ ಎರಡು ವರ್ಷಗಳಲ್ಲಿ ಕಲಬುರಗಿ ಜಿಲ್ಲೆಯಲ್ಲಿ ನಿಯಮಬಾಹಿರವಾಗಿ ಬಿಪಿಎಲ್ ಕಾರ್ಡ್ ಹೊಂದಿದ್ದ ಎಷ್ಟು ಪ್ರಕರಣಗಳನ್ನು ರದ್ದುಪಡಿಸಲಾಗಿದೆ ; ಅಂತಹವರಿಂದ ವಸೂಲಿ ಮಾಡಲಾದ ದಂಡದ ಮೊತ್ತ ಎಷ್ಟು ;

(ಉ) ಪಡಿತರ ಚೀಟಿ ವಿತರಣೆಯಲ್ಲಿ ಪಾರದರ್ಶಕತೆ ತರಲು ಮತ್ತು ನೈಜ ಫಲಾನುಭವಿಗಳನ್ನು ಗುರುತಿಸಲು ಜಿಲ್ಲೆಯ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಜಾಗೃತ ಸಮಿತಿಗಳನ್ನು (Vigilance Committees) ರಚಿಸಲಾಗಿದೆಯೇ: ಹಾಗಿದ್ದಲ್ಲಿ, ಈ ಸಮಿತಿಗಳ ಕಾರ್ಯವೈಖರಿ ಹೇಗಿದೆ ?

## ಕಲಬುರಗಿ ಜಿಲ್ಲೆಯ ಕಾಲೇಜುಗಳಲ್ಲಿ ಉದ್ಯೋಗ ಮಾರ್ಗದರ್ಶನ ಮತ್ತು ನೇಮಕಾತಿ ಪ್ರಕ್ರಿಯೆಗಳ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೭೩ (೧೪೪೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿರುವ ಸರ್ಕಾರಿ ಮತ್ತು ಅನುದಾನಿತ ಪದವಿ ಹಾಗೂ ತಾಂತ್ರಿಕ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗಾಗಿ ಪ್ರತ್ಯೇಕ. 'ಉದ್ಯೋಗ ಮಾರ್ಗದರ್ಶನ ಮತ್ತು ಮಾಹಿತಿ ಕೇಂದ್ರ' ಗಳು (Placement Cells) ಕಾರ್ಯನಿರ್ವಹಿಸುತ್ತಿವೆಯೇ ;

(ಆ) ಕಳೆದ ಮೂರು ವರ್ಷಗಳಲ್ಲಿ ಜಿಲ್ಲೆಯ ವಿವಿಧ ಕಾಲೇಜುಗಳಿಂದ ಕ್ಯಾಂಪಸ್ ಪ್ಲೇಸ್‌ಮೆಂಟ್ ಮೂಲಕ ಉದ್ಯೋಗ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ವರ್ಷವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಅಥವಾ ಕಾಲೇಜುಗಳ ವತಿಯಿಂದ ಕಳೆದ ಎರಡು ವರ್ಷಗಳಲ್ಲಿ ಎಷ್ಟು 'ಬೃಹತ್ ಉದ್ಯೋಗ ಮೇಳ' ಗಳನ್ನು ಆಯೋಜಿಸಲಾಗಿದೆ ; ಇದರಿಂದ ಎಷ್ಟು ಅಭ್ಯರ್ಥಿಗಳು ನೇಮಕಾತಿ ಪತ್ರ ಪಡೆದಿದ್ದಾರೆ ;

(ಈ) ಕಲಬುರಗಿ ಜಿಲ್ಲೆಯ ಎಷ್ಟು ಉನ್ನತ ಶಿಕ್ಷಣ ಸಂಸ್ಥೆಗಳು ಕೈಗಾರಿಕೆಗಳು ಅಥವಾ ಪ್ರತಿಷ್ಠಿತ ಕಂಪನಿಗಳೊಂದಿಗೆ ಪ್ರಾಯೋಗಿಕ ತರಬೇತಿ ಹಾಗೂ ಉದ್ಯೋಗಕ್ಕಾಗಿ ಒಪ್ಪಂದ (MOU) ಮಾಡಿಕೊಂಡಿವೆ ;

(ಉ) ವಿದ್ಯಾರ್ಥಿಗಳ ಉದ್ಯೋಗಾರ್ಹತೆ ಹೆಚ್ಚಿಸಲು 'ಕೌಶಲ್ಯ ಕರ್ನಾಟಕ' ಅಥವಾ ಇತರೆ ಯೋಜನೆಗಳಡಿ ಜಿಲ್ಲೆಯಲ್ಲಿ ಹಮ್ಮಿಕೊಳ್ಳಲಾದ ವಿಶೇಷ ತರಬೇತಿ ಕಾರ್ಯಕ್ರಮಗಳು ಯಾವುವು ?

## ಅತಿಥಿ ಉಪನ್ಯಾಸಕರ ಬಗ್ಗೆ

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :-**

೧೨೭೪ (೧೩೬೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉನ್ನತ ಶಿಕ್ಷಣ ಇಲಾಖೆಯಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಅತಿಥಿ ಉಪನ್ಯಾಸಕರಿಗೆ ಸರ್ಕಾರ ನೀಡುತ್ತಿರುವ ವೇತನವೆಷ್ಟು ; ಇವರುಗಳಿಗೆ ನೀಡುತ್ತಿರುವ ವೇತನವು ಬಹಳ ಕಡಿಮೆಯಾಗಿರುವುದರಿಂದ ಸರ್ಕಾರವು ವೇತನವನ್ನು ಹೆಚ್ಚಳ ಮಾಡಲು ಯಾವ ಕ್ರಮವನ್ನು ಕೈಗೊಂಡಿದೆ ; (ಮಾಹಿತಿ ನೀಡುವುದು)

(ಇ) ಹಾಗಿದ್ದಲ್ಲಿ, ಯಾವಾಗಿನಿಂದ ಅತಿಥಿ ಉಪನ್ಯಾಸಕರಿಗೆ ವೇತನವನ್ನು ಹೆಚ್ಚಿಸಿ ಜಾರಿಗೆ ತರಲಾಗುವುದು ? (ಮಾಹಿತಿ ನೀಡುವುದು)

## ಅನುದಾನಿತ ಶಾಲಾ–ಕಾಲೇಜುಗಳ ನೌಕರರಿಗೆ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ ನೀಡುವ ಬಗ್ಗೆ

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೧೨೭೫ (೧೩೯೧) ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಶಾಲಾ–ಕಾಲೇಜುಗಳ ಬೋಧಕ–ಬೋಧಕೇತರ ಸಿಬ್ಬಂದಿಗಳಿಗೆ ಸರ್ಕಾರದಿಂದ "ಕರ್ನಾಟಕ ಆರೋಗ್ಯ ಸಂಜೀವಿನಿ" ಯೋಜನೆಯ ಸೌಲಭ್ಯಗಳನ್ನು ನೀಡಲಾಗುತ್ತಿದೆಯೇ ;

(ಆ) ಈ ಅನುದಾನಿತ ಶಾಲಾ ಕಾಲೇಜುಗಳ ಭೋದಕ–ಭೋದಕೇತರ ಸಿಬ್ಬಂದಿಗಳಿಗೆ ಸರ್ಕಾರಿ ನೌಕರರಿಗೆ ನೀಡುತ್ತಿರುವ ರೀತಿಯಲ್ಲಿ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯನ್ನು ಸದರಿ ನೌಕರರ ಆರೋಗ್ಯದ ಹಿತದೃಷ್ಟಿಯಿಂದ ತುರ್ತಾಗಿ ಜಾರಿ ಮಾಡಲು ಯಾವ ಕ್ರಮವನ್ನು ಕೈಗೊಳ್ಳಲಾಗಿದೆ ? (ಮಾಹಿತಿ ನೀಡುವುದು)

## ಶಾಲಾ ಶಿಕ್ಷಣ ಇಲಾಖೆಯ ಆಡಳಿತಾತ್ಮಕ ಕಛೇರಿಗಳ ಕಟ್ಟಡಗಳ ಕುರಿತು

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೧೨೭೬ (೧೩೯೨) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಇರುವ ಶಾಲಾ ಶಿಕ್ಷಣ ಇಲಾಖೆಯ ಆಡಳಿತಾತ್ಮಕ ಕಛೇರಿಗಳಾದ ಬಿ.ಇ.ಓ ಕಛೇರಿ ಹಾಗೂ ಡಿ.ಡಿ.ಪಿ.ಐ ಹಾಗೂ ಡಿ.ಡಿ.ಪಿ.ಯು ಕಛೇರಿ ಮತ್ತು ಬಿ.ಆರ್.ಸಿ ಕಛೇರಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರವಾದ ಮಾಹಿತಿ ನೀಡುವುದು)

(ಆ) ಈ ಆಡಳಿತಾತ್ಮಕ ಕಛೇರಿಗಳು ರಾಜ್ಯದಲ್ಲಿ ಎಷ್ಟು ಸ್ವಂತ ಕಟ್ಟಡದಲ್ಲಿ (ಅಂದರೆ ಶಾಲಾ ಕಾಲೇಜುಗಳ ಹೊರತುಪಡಿಸಿ) ಸ್ವತಂತ್ರವಾಗಿ ಕೆಲಸ ಕಾರ್ಯಗಳನ್ನು ನಿರ್ವಹಿಸುತ್ತಿವೆ ;

(ಇ) ಆಡಳಿತಾತ್ಮಕ ಕಛೇರಿಗಳು ರಾಜ್ಯದ ಕೆಲವು ಪ್ರದೇಶಗಳಲ್ಲಿ ಶಾಲಾ–ಕಾಲೇಜು ಕಟ್ಟಡಗಳ ಪರಿಮಿತಿಯ ಕೊಠಡಿಯಲ್ಲಿ ನಡೆಯುತ್ತಿರುವ ಕಛೇರಿಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಈ) ಈ ಆಡಳಿತಾತ್ಮಕ ಕಛೇರಿಗಳು ಶಾಲಾ ಕಾಲೇಜುಗಳ ಕಟ್ಟಡಗಳಲ್ಲಿ ನಡೆಯುತ್ತಿರುವ ಕಛೇರಿಗಳಿಗೆ ಸರ್ಕಾರ ಪ್ರತ್ಯೇಕ ಅನುದಾನವನ್ನು ನೀಡಿ ಹೊಸ ಕಟ್ಟಡಗಳನ್ನು ನಿರ್ಮಾಣ ಮಾಡಲು ಶಿಕ್ಷಣ ಇಲಾಖೆ ಯಾವ ಕ್ರಮಗಳನ್ನು ಕೈಗೊಂಡಿದೆ ? (ಮಾಹಿತಿ ನೀಡುವುದು)

## ಸರ್ಕಾರಿ ಪ್ರೌಢ ಶಾಲೆಗಳ ಮುಖ್ಯ ಶಿಕ್ಷಕರ ಹುದ್ದೆಗಳ ಕುರಿತು

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೧೨೭೭ (೧೩೫೩) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಶಿಕ್ಷಣ ಇಲಾಖೆಯಲ್ಲಿ ಸರ್ಕಾರಿ ಪ್ರೌಢ ಶಾಲೆಗಳಿಗೆ ಮಂಜೂರಾಗಿರುವ ಮುಖ್ಯ ಶಿಕ್ಷಕರ ಹುದ್ದೆಗಳೆಷ್ಟು ; ಈ ಹುದ್ದೆಗಳನ್ನು ಯಾವ ಅರ್ಹತೆಯ ಆಧಾರದ ಮೇರೆಗೆ ಆಯ್ಕೆ ಮಾಡಿಕೊಳ್ಳಲಾಗುವುದು ; (ಮಾಹಿತಿ ನೀಡುವುದು)

(ಆ) ಸದರಿ ಹುದ್ದೆಗೆ ಕೆ.ಇ.ಎಸ್. ಪರೀಕ್ಷೆ ನಡೆಸಿ ಇದರ ಮುಖಾಂತರ ಎಷ್ಟು ಮುಖ್ಯ ಶಿಕ್ಷಕರ ಹುದ್ದೆಗಳನ್ನು ಇಲ್ಲಿಯವರೆಗೆ ಭರ್ತಿ ಮಾಡಲಾಗಿದೆ ; ಈ ಶಿಕ್ಷಣ ಇಲಾಖೆಯು ಕೆ.ಇ.ಎಸ್ ಪರೀಕ್ಷೆಯನ್ನು ಕೊನೆಯದಾಗಿ ಯಾವ ದಿನಾಂಕದಂದು ನಡೆಸಲಾಯಿತು ; (ವಿವರ ನೀಡುವುದು)

(ಇ) ಶಿಕ್ಷಣ ಇಲಾಖೆಯು ಕೆ.ಇ.ಎಸ್ ಪರೀಕ್ಷೆಯನ್ನು ಸಕಾಲಕ್ಕೆ ಸರಿಯಾದ ರೀತಿಯಲ್ಲಿ ನಡೆಸದೇ ಇರಲು ಕಾರಣವೇನು ; ಕೆ.ಇ.ಎಸ್ ಪರೀಕ್ಷೆಯುನ್ನು ನಡೆಸುವುದಾದರೆ ಯಾವ ಕಾಲಯಿತಿಯಲ್ಲಿ ನಡೆಸಲಾಗುವುದು ? (ಮಾಹಿತಿ ನೀಡುವುದು)

## ವನ್ಯಜೀವಿಗಳು ಮಾನ್ಯವರ ಮೇಲೆ ದಾಳಿ ಮಾಡುತ್ತಿರುವ ಬಗ್ಗೆ

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೧೨೭೮ (೧೩೯೪) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಿಂದ ವನ್ಯಜೀವಿಗಳ ದಾಳಿಯಿಂದ ಮೃತಪಟ್ಟವರ ಸಂಖ್ಯೆ ಎಷ್ಟು ; (ವಿವರ ನೀಡುವುದು) ಮೃತಪಟ್ಟವರಲ್ಲಿ ಶಾಲಾ ಕಾಲೇಜಿನ ವಿದ್ಯಾರ್ಥಿಗಳಿದ್ದಾರೆಯೇ ; (ವಿವರ ನೀಡುವುದು)

(ಆ) ಇತ್ತೀಚೆಗೆ ಕಾಡಿನಿಂದ ನಾಡಿಗೆ ವನ್ಯಜೀವಿಗಳು ಬಂದು ಮಾನವರ ಮೇಲೆ ದಾಳಿ ಮಾಡಲು ಕಾರಣವೇನೆಂದು ಇಲಾಖೆಯು ಅಧ್ಯಯನ ನಡೆಸಿದೆಯೇ ; ಇದನ್ನು ತಡೆಯಲು ಇಲಾಖೆ ಯಾವ ಕ್ರಮಕೈಗೊಂಡಿದೆ ;

(ಇ) ಈ ರೀತಿಯಾಗುವುದನ್ನು ತಡೆಗಟ್ಟಲು ಸ್ಥಳೀಯರೊಂದಿಗೆ ಮತ್ತು ಇತರೆ ಇಲಾಖೆಯೊಂದಿಗೆ ಸಮನ್ವಯತೆ ಸಾಧಿಸಿ ಒಂದು ಅರಣ್ಯ ರಕ್ಷಣಾ ಕಾರ್ಯ ಪಡೆಯನ್ನು ಶಾಶ್ವತವಾಗಿ ರಚಿಸುವ ಆಲೋಚನೆ ಸರ್ಕಾರದ ಮುಂದಿದೆಯೇ ?

# ವಿದ್ಯುತ್‌ನ್ನು ೩೩ ಕೆ.ವಿ ಯಿಂದ ೧೧೦ ಕೆ.ವಿ.ಗೆ ಉನ್ನತೀಕರಿಸುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೭೯ (೧೩೪೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಒಂದು ವರ್ಷದಲ್ಲಿ ಬೀದರ್ ಜಿಲ್ಲೆಯಿಂದ ೩೩ ಕೆ.ವಿ ವಿದ್ಯುತ್ ವಿತರಣಾ ಉಪ ಕೇಂದ್ರಗಳನ್ನು ೧೧೦ ಕೆ.ವಿ. ವಿದ್ಯುತ್ ವಿತರಣಾ ಕೇಂದ್ರವನ್ನಾಗಿ ಉನ್ನತೀಕರಣಗೊಳಿಸಲು ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ೩೩ ಕೆ.ವಿ. ವಿದ್ಯುತ್ ವಿತರಣಾ ಉಪ–ಕೇಂದ್ರಗಳನ್ನು ಉನ್ನತೀಕರಿಸಲಾಗಿದೆ: ಮತ್ತು ಹೊಸದಾಗಿ ಇನ್ನೂ ಎಷ್ಟು ೧೧೦ ಕೆ.ವಿ ವಿತರಣಾ ಕೇಂದ್ರಗಳನ್ನು ಉನ್ನತೀಕರಿಸಲು ಸರ್ಕಾರ ಉದ್ದೇಶ ಹೊಂದಿದೆಯೇ ?

# ಲೈನ್‌ಮೆನ್‌ಗಳ ನೇಮಕಾತಿ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೮೦ (೧೩೪೨) ಮಾನ್ಯ ಇಂಧನ ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆ ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಯ ಪ್ರತಿಯೊಂದು ಶಾಖೆಯಲ್ಲಿ ಕೇವಲ ೪ ರಿಂದ ೫ ಜನ ಪವರ್‌ಮ್ಯಾನ್‌ಗಳು ಕರ್ತವ್ಯ ನಿರ್ವಹಿಸುತ್ತಿದ್ದು, ಇದರಿಂದ ವಿದ್ಯುತ್ ವ್ಯತ್ಯಯವಾದಾಗ ಸರಿಪಡಿಸಲು ವಿಳಂಬವಾಗುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಪ್ರತಿಯೊಂದು ಶಾಖೆಗೆ ೧೪ ರಿಂದ ೧೫ ಜನ ಪವರ್‌ಮ್ಯಾನ್‌ಗಳನ್ನು ನೇಮಿಸಲು ಕೈಗೊಂಡ ಕ್ರಮವೇನು ?

# ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಹಾಗೂ ಇತರೆ ಸೌಲಭ್ಯಗಳು ಸ್ಥಗಿತಗೊಂಡಿರುವ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೧೨೮೧ (೧೪೫೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ತಾಲ್ಲೂಕು ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಡಯಾಲಿಸಿಸ್ ಯಂತ್ರಗಳು ಹಾಗೂ ಎಂ.ಆರ್.ಐ (MRI) ಮತ್ತು ಸಿ.ಟಿ. ಸ್ಕ್ಯಾನ್ (CT Scan) ಸೌಲಭ್ಯಗಳು ಕಳೆದ ಕೆಲವು ತಿಂಗಳುಗಳಿಂದ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಸೌಲಭ್ಯಗಳನ್ನು ಒದಗಿಸುತ್ತಿರುವ ಖಾಸಗಿ ಸೇವಾ ಸಂಸ್ಥೆಗಳಿಗೆ (Service Provider) ಸರ್ಕಾರವು ಸಾವಿರಾರು ಕೋಟಿ ರೂಪಾಯಿಗಳ ಬಿಲ್ ಪಾವತಿಯನ್ನು ಬಾಕಿ ಉಳಿಸಿಕೊಂಡಿರುವುದು ಮತ್ತು ಇದೇ ಕಾರಣಕ್ಕೆ ಅವರು ಸೇವೆಗಳನ್ನು ನಿಲ್ಲಿಸಿರುವುದು ನಿಜವೇ ; (ಸದ್ಯಕ್ಕೆ ಬಾಕಿ ಇರುವ ಒಟ್ಟು ಮೊತ್ತದ ಸಂಸ್ಥೆವಾರು ವಿವರ ನೀಡುವುದು)

(ಇ) ಈ ಸೇವಾ ಸಂಸ್ಥೆಗಳೊಂದಿಗೆ ಮಾಡಿಕೊಳ್ಳಲಾದ ಒಪ್ಪಂದದ (Agreement) ಅವಧಿ ಮುಕ್ತಾಯವಾಗಿದೆಯೇ ; ಹಾಗಿದ್ದಲ್ಲಿ, ಹೊಸ ಒಪ್ಪಂದ ಮಾಡಿಕೊಳ್ಳುವಲ್ಲಿ ಅಥವಾ ಅಸ್ತಿತ್ವದಲ್ಲಿರುವ ಒಪ್ಪಂದವನ್ನು ನವೀಕರಿಸುವಲ್ಲಿ ಸರ್ಕಾರಕ್ಕಿರುವ ತಾಂತ್ರಿಕ ಅಡಚಣೆಗಳೇನು ;

(ಈ) ಕಳೆದ ೨ ವರ್ಷಗಳಲ್ಲಿ (೨೦೨೪–೨೫ ಮತ್ತು ೨೦೨೫–೨೬ನೇ ಸಾಲಿನಲ್ಲಿ) ರಾಜ್ಯದ ಆಸ್ಪತ್ರೆಗಳಲ್ಲಿ ಕೆಟ್ಟು ನಿಂತಿರುವ ಡಯಾಲಿಸಿಸ್ ಮತ್ತು ಸ್ಕ್ಯಾನಿಂಗ್ ಉಪಕರಣಗಳ ದುರಸ್ತಿಗೆ

(Repair) ಬಿಡುಗಡೆ ಮಾಡಲಾದ ಒಟ್ಟು ಅನುದಾನವೆಷ್ಟು ; ಈ ಪೈಕಿ ಎಷ್ಟು ಮೊತ್ತವನ್ನು ಬಳಸಿಕೊಳ್ಳಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಉ) ಸರ್ಕಾರಿ ಆಸ್ಪತ್ರೆಗಳಲ್ಲಿ ಈ ಗಂಭೀರ ವೈದ್ಯಕೀಯ ಸೇವೆಗಳು ಸ್ಥಗಿತಗೊಂಡಿರುವುದರಿಂದ ಬಡ ರೋಗಿಗಳು ಅನಿವಾರ್ಯವಾಗಿ ಖಾಸಗಿ ಡಯಾಲಿಸಿಸ್ ಮತ್ತು ಸ್ಕ್ಯಾನಿಂಗ್ ಕೇಂದ್ರಗಳತ್ತ ಹೋಗಿ ಆರ್ಥಿಕವಾಗಿ ಕಷ್ಟ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ಸರಿಪಡಿಸಲು ಸರ್ಕಾರ ಹಾಕಿಕೊಂಡಿರುವ ಕಾಲಮಿತಿ ಯಾವುದು ?

## ರಸ್ತೆ ಅಪಘಾತದಲ್ಲಿ ಗಾಯಗೊಂಡ ವ್ಯಕ್ತಿ ಚಿಕಿತ್ಸೆ ಸಿಗದೆ ಮೃತಪಟ್ಟ ಬಗ್ಗೆ

**ಶ್ರೀ ಗಣಪತಿ ದುಮ್ಮಾ ಉಳ್ವೇಕರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೮೨ (೧೩೩೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ತಾಲ್ಲೂಕಿನಲ್ಲಿ ಅಪಘಾತದಲ್ಲಿ ಗಾಯಗೊಂಡಿದ್ದ ವ್ಯಕ್ತಿ ಚಿಕಿತ್ಸೆಗಾಗಿ ೬೦೦ ಕಿಲೋ ಮೀಟರ್ ಅಲೆದು, ಐದು ಆಸ್ಪತ್ರೆಗಳಿಗೆ ಹೋದರೂ ಚಿಕಿತ್ಸೆ ಸಿಗದೆ ಆಂಬ್ಯುಲೆನ್ಸಲ್ಲಿ ಮೃತಪಟ್ಟ ವಿಷಯ ದಿನಾಂಕ:೩೦.೧೦.೨೦೨೫ ರಂದು ವಿಜಯ ಕರ್ನಾಟಕ ಪತ್ರಿಕೆಯಲ್ಲಿ ಪ್ರಕಟವಾಗಿದೆ ; ಈ ಘಟನೆಯು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ ; ಮಾಹಿತಿ ಒದಗಿಸುವುದು ;

(ಆ) ಇದೇ ಪ್ರಕರಣದಲ್ಲಿ ಜಿಲ್ಲಾಸ್ಪತ್ರೆಯ ಶಿಫಾರಸ್ಸಿನಂತೆ ಉನ್ನತ ಆಸ್ಪತ್ರೆಗೆ ರೋಗಿಯನ್ನು ಸಾಗಿಸಲು ಸರ್ಕಾರಿ ಆಂಬ್ಯುಲೆನ್ಸ್ ಡೀಸೆಲ್/

ಪೆಟ್ರೋಲ್ ಖರ್ಚನ್ನು ರೋಗಿ ಅಥವಾ ಗಾಯಾಳುವಿನ ಕಡೆಯವರಿಂದಲೇ ಪಡೆಯಲಾಗಿದ್ದು, ಇಂಧನ ಖರ್ಚು ಕೊಡುವುದು ಕಡ್ಡಾಯವೇ ; ಪರಿಶಿಷ್ಟ ವರ್ಗದವರಿಗೂ ಇದು ಅನ್ವಯವೇ ;

(ಇ) ಉತ್ತರ ಕನ್ನಡ ಜಿಲ್ಲೆಯಲ್ಲಿ ಕಾರವಾರ ವೈದ್ಯಕೀಯ ವಿಜ್ಞಾನ ಸಂಸ್ಥೆಯಿಂದ ಕಳೆದ ಒಂದು ವರ್ಷದಲ್ಲಿ ಎಷ್ಟು ಗಾಯಾಳು, ರೋಗಿಗಳನ್ನು ಹೆಚ್ಚಿನ ಚಿಕಿತ್ಸೆಗಾಗಿ ಉನ್ನತ ಆಸ್ಪತ್ರೆಗಳಿಗೆ ಶಿಫಾರಸ್ಸು ಮಾಡಲಾಗಿದೆ ; ಹೀಗೆ ಶಿಫಾರಸ್ಸಾದವರ ಪೈಕಿ ಮೃತಪಟ್ಟವರು ಎಷ್ಟು ? (ಸಂಪೂರ್ಣ ವಿವರ ಒದಗಿಸುವುದು)

## ಇ–ತ್ಯಾಜ್ಯ ಸಂಸ್ಕರಣೆ ವ್ಯವಸ್ಥಿತವಾಗಿ ನಿರ್ವಹಣೆ ಮಾಡುವ ಬಗ್ಗೆ

**ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೮೩ (೧೩೩೮) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರತಿ ವರ್ಷ ಎಷ್ಟು ಇ–ತ್ಯಾಜ್ಯ ಉತ್ಪಾದನೆಯಾಗುತ್ತಿದೆ ;

(ಆ) ಅದರಲ್ಲಿ ವೈಜ್ಞಾನಿಕವಾಗಿ ನಿರ್ವಹಣೆಯಾಗುತ್ತಿರುವ ಪ್ರಮಾಣವೆಷ್ಟು ; ವೈಜ್ಞಾನಿಕವಾಗಿ ನಿರ್ವಹಣೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಎರಡನೇ ಹಂತದ ನಗರಗಳು ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಇ–ತ್ಯಾಜ್ಯ ವೈಜ್ಞಾನಿಕವಾಗಿ ನಿರ್ವಹಣೆ ಆಗುತ್ತಿದೆಯೇ ;

(ಈ) ಇ–ತ್ಯಾಜ್ಯ ನಿರ್ವಹಣೆಗೆ ರಾಜ್ಯದಲ್ಲಿ ಎಷ್ಟು ಕೇಂದ್ರಗಳಿವೆ ಮತ್ತು ಅವುಗಳು ಎಲ್ಲೆಲ್ಲಿ ಇವೆ ? (ಜಿಲ್ಲಾವಾರು ವಿವರ ನೀಡುವುದು)

## ಪಡಿತರ ಚೀಟಿಗಳ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೮೪ (೧೩೦೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಪಡಿತರ ಚೀಟಿಗಳಿವೆ ಹಾಗೂ ಎಷ್ಟು ನ್ಯಾಯಬೆಲೆ ಅಂಗಡಿಗಳು ಕಾರ್ಯನಿರ್ವಹಿಸುತ್ತಿವೆ ; (ನ್ಯಾಯಬೆಲೆ ಅಂಗಡಿವಾರು ಮತ್ತು ಪಡಿತರ ಚೀಟಿವಾರು ವಿವರ ನೀಡುವುದು)

(ಆ) ಹೆಚ್ಚಿನ ಸಂಖ್ಯೆಯಲ್ಲಿ ಪಡಿತರ ಚೀಟಿ ಇರುವಾಗ ಇನ್ನೂ ಎಷ್ಟು ಹೊಸ ಅರ್ಜಿಗಳು ಬಂದಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ೨೦೨೩–೨೪ ರಿಂದ ೨೦೨೫–೨೬ರವರೆಗೆ ಎಷ್ಟು ಪಡಿತರ ಚೀಟಿಗಳನ್ನು ರದ್ದುಪಡಿಸಲಾಗಿದೆ ? (ರದ್ದಾದವರ ಹೆಸರಿನೊಂದಿಗೆ ತಾಲ್ಲೂಕುವಾರು, ವರ್ಷವಾರು ವಿವರ ನೀಡುವುದು)

## ಯಾದಗಿರಿ ಜಿಲ್ಲೆಯ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಫಲಿತಾಂಶದ ಬಗ್ಗೆ

**ಶ್ರೀ ಬಿ.ಜಿ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೮೫ (೧೩೪೪) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಾದಗಿರಿ ಜಿಲ್ಲೆಯು ಪ್ರತಿ ವರ್ಷವೂ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿ.ಯು.ಸಿ ಯ ಫಲಿತಾಂಶದಲ್ಲಿ ಕೊನೆಯ ಸ್ಥಾನದಲ್ಲಿದೆಯೇ ಇರುತ್ತದೆ ; ಇದಕ್ಕೆ ಕಾರಣಗಳೇನು ;

(ಆ) ಸದರಿ ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿ.ಯು.ಸಿಯ ಫಲಿತಾಂಶಗಳ ಸುಧಾರಣೆಗಾಗಿ ಇದುವರೆವಿಗೂ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; (ವಿವರ ನೀಡುವುದು)

(ಇ) ಯಾದಗಿರಿ ಜಿಲ್ಲೆಯಲ್ಲಿ ಎಷ್ಟು ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲಾಗಿದೆ ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಶುದ್ಧ ಪರಿಸರ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಬಿ.ಜಿ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೮೬ (೧೩೪೫) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಶುದ್ಧ ಪರಿಸರ ನಿರ್ಮಾಣ ಮಾಡುವ ಉದ್ದೇಶದಿಂದ ಅರಣ್ಯ ಇಲಾಖೆಯಿಂದ ಕೈಗೊಂಡ ಕ್ರಮಗಳೇನು ಹಾಗೂ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ;

(ಆ) ಸದರಿ ಜಿಲ್ಲೆಗಳಲ್ಲಿ ಅರಣ್ಯ ಅಭಿವೃದ್ಧಿಗಾಗಿ ಎಷ್ಟು ಸಸಿಗಳನ್ನು ನೆಡಲಾಗಿದೆ ಮತ್ತು ಅರಣ್ಯ ರಕ್ಷಣೆಗಾಗಿ ಖರ್ಚು ಮಾಡಲಾದ ಅನುದಾನ ಎಷ್ಟು ;

(ಇ) ಕಾಡು ಹಂದಿಗಳ ಉಪಟಳ ತಪ್ಪಿಸಿ, ರೈತರ ಬೆಳೆ ರಕ್ಷಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

# ಕಲಬುರಗಿ ಮತ್ತು ಯಾದಗಿರಿ ನಗರಗಳಲ್ಲಿರುವ ಸರ್ಕಾರಿ ವೈದ್ಯಕೀಯ ಕಾಲೇಜುಗಳ ಬಗ್ಗೆ

**ಶ್ರೀ ಬಿ.ಜಿ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೮೭ (೧೩೪೬) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ನಗರದಲ್ಲಿರುವ ಸರ್ಕಾರಿ ವೈದ್ಯಕೀಯ ಕಾಲೇಜಿಗೆ ಮಂಜೂರಾಗಿರುವ ಹುದ್ದೆಗಳು ಎಷ್ಟು ; (ವೃಂದವಾರು ಹಾಗೂ ಖಾಲಿ ಇರುವ ಹುದ್ದೆಗಳ ವಿವರ ನೀಡುವುದು)

(ಆ) ಮಂಜೂರಾದ ಹುದ್ದೆಗಳಲ್ಲಿ ನೇಮಕಾತಿಯಾಗಿರುವ ಹಾಗೂ ಖಾಲಿ ಇರುವ ಹುದ್ದೆಗಳೆಷ್ಟು ; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಕಲಬುರಗಿಯಲ್ಲಿರುವ ಟ್ರಾಮಾ ಕೇರ್ ಆಸ್ಪತ್ರೆಯಲ್ಲಿ ವೈದ್ಯರು ಹಾಗೂ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಒಟ್ಟು ಮಂಜೂರಾದ ಹುದ್ದೆಗಳೆಷ್ಟು ; ಇವುಗಳ ಪೈಕಿ ಎಷ್ಟು ಹುದ್ದೆಗಳು ಖಾಲಿ ಇವೆ ; ಅವುಗಳನ್ನು ಭರ್ತಿ ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ ?

# ರೈತರಿಗೆ ೩ ಫೇಸ್ ೨೪ ಗಂಟೆಗಳು ವಿದ್ಯುತ್ ನೀಡುವ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೮೮ (೧೩೮೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈತರಿಗೆ ೩ ಫೇಸ್ ವಿದ್ಯುತ್ ದಿನದ ಎಲ್ಲಾ ಗಂಟೆಗಳು ನೀಡಲಾಗುತ್ತಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಲ್ಯಾಣ ಕರ್ನಾಟಕ ಮತ್ತು ಉತ್ತರ ಕರ್ನಾಟಕ ರೈತರಿಗೆ ಸರ್ಕಾರದಿಂದ ಒಂದು ಟಿ.ಸಿ ಓಲ್ಟೇಜ್ ಹೆಚ್ಚಿಸಲು ಮತ್ತು ನೂತನ ಟಿ.ಸಿ ಅಳವಡಿಸಲು ಸರ್ಕಾರ ನಿಗಧಿಪಡಿಸಿರುವ ಹಣ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಲ್ಯಾಣ ಕರ್ನಾಟಕದ ಎಷ್ಟು ರೈತರಿಗೆ ಉಚಿತ ವಿದ್ಯುತ್ ನೀಡಲಾಗಿದೆ ಮತ್ತು ಎಷ್ಟು ಹೆಚ್.ಪಿ ಪಂಪ್ ಸೆಟ್ ಅಳವಡಿಸಿದವರಿಗೆ ನೀಡಲಾಗುತ್ತಿದೆ ; ರಾಜ್ಯದ ಎಲ್ಲಾ ರೈತರಿಗೆ ಎಲ್ಲಾ ಹೆಚ್.ಪಿ ಕೃಷಿ ಜಮೀನಿಗೆ ಬಳಸುವವರಿಗೆ ಉಚಿತವಾಗಿ ವಿದ್ಯುತ್ ನೀಡುವ ಬಗ್ಗೆ ಸರ್ಕಾರ ಚಿಂತಿಸಿದೆಯೇ ;

(ಈ) ರಾಜ್ಯದಲ್ಲಿ ಎಷ್ಟು ಕಡೆ ಇ.ವಿ ವಾಹನ ಚಾರ್ಜಿಂಗ್ ಪಾಯಿಂಟ್‌ಗಳನ್ನು ನೀಡಲಾಗಿದೆ ; ಅದಕ್ಕೆ ಬಳಕೆಯಾಗುತ್ತಿರುವ ವಿದ್ಯುತ್ ಎಷ್ಟು? (ನಿಗಮವಾರು, ಜಿಲ್ಲಾವಾರು ಮಾಹಿತಿ ನೀಡುವುದು)

## ಸರ್ಕಾರಿ ಆಸ್ಪತ್ರೆಯ ಸಿಬ್ಬಂದಿಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೮೯ (೧೩೮೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳ ಸಂಖ್ಯೆ ಎಷ್ಟು ; ಸದರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ

ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ; ಹಾಗೂ ಸರ್ಕಾರಿ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಹೊರಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರನ್ನು ಖಾಯಂ ಮಾಡುವ ಬಗ್ಗೆ ಸರ್ಕಾರ ಚಿಂತಿಸಿದೆಯೇ ;

(ಇ) ರಾಜ್ಯದ ಕೆಲವು ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು ಸಿಗದೆ ಸಿಬ್ಬಂದಿಗಳು ಇಲ್ಲದೆ ಕೆಲ ಯಂತ್ರೋಪಕರಣಗಳು ಸರಿ ಇಲ್ಲದೆ ಖಾಸಗಿ ಆಸ್ಪತ್ರೆ ಅಥವಾ ಜಿಲ್ಲಾ ಆಸ್ಪತ್ರೆಗೆ ರವಾನಿಸುವುದಾಗಿ ತಿಳಿಸುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯದ ಎಲ್ಲಾ ತಾಲ್ಲೂಕು ಆಸ್ಪತ್ರೆಯಲ್ಲಿ ಎಲ್ಲಾ ತರಹದ ವೈದ್ಯರು ಅವರಿಗೆ ಬೇಕಾದ ಯಂತ್ರೋಪಕರಣಗಳನ್ನು (ಉದಾ: ಸ್ಕ್ಯಾನಿಂಗ್ ಮಷಿನ್, ಸಿಟಿ ಸ್ಕ್ಯಾನ್ ಇತರೆ) ಒದಗಿಸಲಾಗಿದೆಯೇ ; ಒದಗಿಸಲಾಗದಿದ್ದಲ್ಲಿ, ಸರ್ಕಾರ ಅವರಿಗೆ ನೀಡಲು ಚಿಂತಿಸಿದೆಯೇ ; ನೀಡುವುದಾದರೆ ಯಾವ ಕಾಲಮಿತಿಯೊಳಗೆ ನೀಡಲಾಗುತ್ತಿದೆ ;

(ಉ) ಪ್ರತಿ ತಾಲ್ಲೂಕು ಸರ್ಕಾರಿ ಆಸ್ಪತ್ರೆಗಳಲ್ಲಿ ಯಾವ ವೈದ್ಯರು ಅಂದಿನ ದಿನ ಕರ್ತವ್ಯದಲ್ಲಿ ಇದ್ದಾರೆ ; ಮತ್ತು ಸರ್ಕಾರ ಚೀಟಿಯನ್ನು ಡಿಜಿಟಲ್ ಮಾಡುವ ಬಗ್ಗೆ ಸರ್ಕಾರ ಯೋಚಿಸಿದೆಯೇ ; ಅಥವಾ ಸರ್ಕಾರಿ ಆಸ್ಪತ್ರೆಗೆ ಚೀಟಿ ಪಡೆಯಲು ಲೈನ್ ತಪ್ಪಿಸಲು ಯಂತ್ರೋಪಕರಣಗಳ ಸಹಾಯದಿಂದ ಅಥವಾ ಮೊಬೈಲ್ ಆಪ್ ತಯಾರಿ ಮಾಡಲು ಸರ್ಕಾರ ಚಿಂತಿಸಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

## ಸರ್ಕಾರಿ ಶಾಲೆಗಳು ಶಿಥಿಲಾವ್ಯವಸ್ಥೆಯಲ್ಲಿ ಇರುವುದರ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೯೦ (೧೩೮೩) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಶಿಥಿಲಾವ್ಯವಸ್ಥೆಗೆ ಬಂದಿರುವ ಸರ್ಕಾರಿ ಶಾಲೆಗಳ ಕೊಠಡಿಯನ್ನು ಸಮೀಕ್ಷೆ ಮಾಡಿ ಗುರುತಿಸಲಾಗಿದೆಯೇ ;

(ಇ) ಶಿಥಿಲಾವ್ಯವಸ್ಥೆಗೆ ಬಂದಿರುವ ಶಾಲೆಗಳನ್ನು ಸರ್ಕಾರ ಸರಿಪಡಿಸಿದೆಯೇ ಅಥವಾ ನೂತನ ಕಟ್ಟಡವನ್ನು ನಿರ್ಮಾಣ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಕಳೆದ ೨ ವರ್ಷಗಳಲ್ಲಿ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಕಳೆದ ೨ ವರ್ಷಗಳಲ್ಲಿ ರಾಜ್ಯದಲ್ಲಿ ಸರ್ಕಾರಿ ಶಾಲೆಗಳಲ್ಲಿ ಮಕ್ಕಳು ಕಡಿಮೆ ಇರುವ ಶಾಲೆಗಳು ಎಂದು ಗುರುತಿಸಿ ಎಷ್ಟು ಶಾಲೆಯನ್ನು ಮುಚ್ಚಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಸರ್ಕಾರಿ ಶಾಲೆಗಳಿಗೆ ಮಕ್ಕಳನ್ನು ಸೇರ್ಪಡೆಗೊಳ್ಳುವ ಕುರಿತು ಸರ್ಕಾರ ಯಾವ ಯೋಜನೆಯನ್ನು ಹಮ್ಮಿಕೊಂಡಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ನಡೆಯುತ್ತಿರುವ ಆನೆದಾಳಿ ಮತ್ತು ETF ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೯೧ (೧೩೮೮) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ರಾಜ್ಯದಲ್ಲಿ ಆನೆ ದಾಳಿಗೆ ಕಳೆದ ೬ ತಿಂಗಳಲ್ಲಿ ಬಲಿಯಾದವರ ಸಂಖ್ಯೆ ಎಷ್ಟು ; ಮತ್ತು ವನ್ಯ ಜೀವಿ ಮಾನವ ಸಂಘರ್ಷಗಳಿಗೆ ಗಾಯಗೊಂಡಂತಹ ಅಥವಾ ಬಲಿಯಾದವರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಆನೆ ದಾಳಿಗೆ ಬಲಿಯಾದವರಿಗೆ ಪರಿಹಾರವಾಗಿ ಇಲ್ಲಿಯವರೆಗೆ ೨೦ ಲಕ್ಷ ಹಣವನ್ನು ನೀಡುತ್ತಿದ್ದು ಅದನ್ನು ಹೆಚ್ಚಿಸುವ ಬಗ್ಗೆ ಸರ್ಕಾರ ಚಿಂತಿಸಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ELEPHANT TASK FORCE ಅಥವಾ ಅರಣ್ಯ ಇಲಾಖೆ ಸಿಬ್ಬಂದಿಗಳ ಕರ್ತವ್ಯ ಲೋಪದಿಂದ ಸಾವುಗಳು ಸಂಭವಿಸುತ್ತಿದೆ ಎಂಬುದು ಸ್ಥಳೀಯರ ಆಕ್ರೋಶವಾಗಿದೆ ಇದಕ್ಕೆ ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳುವುದು ; (ವಿವರ ನೀಡುವುದು)

(ಈ) ELEPHANT TASK FORCE ಕಾರ್ಯವೈಖರಿ ಏನು ; ಅದರಲ್ಲಿ ಎಷ್ಟು ಸಿಬ್ಬಂದಿಗಳು ಕಾರ್ಯನಿರ್ವಹಣೆ ಮಾಡುತ್ತಿದ್ದಾರೆ ; ರಾಜ್ಯದ ಯಾವ ಯಾವ ತಾಲ್ಲೂಕುಗಳಲ್ಲಿ ELEPHANT TASK FORCE ರಚನೆ ಮಾಡಲಾಗಿದೆ ; (ಹೆಸರು, ಪದನಾಮ, ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳ ಮತ್ತು ದೂರವಾಣಿ ಸಂಖ್ಯೆ ನೀಡುವುದು) ಆನೆಗಳನ್ನು ಟ್ರ್ಯಾಕ್ ಮಾಡಲು ಸರ್ಕಾರ ಇಲ್ಲಿಯವರೆಗೆ ಯಾವ ಯಾವ ಉಪಕರಣಗಳನ್ನು ನೀಡಲಾಗುತ್ತಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ರೈತರು ಆನೆಯನ್ನು ಹಿಮ್ಮೆಟ್ಟಿಸುವಾಗ ಅಧಿಕಾರಿಗಳು/ಸಿಬ್ಬಂದಿಗಳನ್ನು ಸ್ಥಳದಲ್ಲಿ ಇರುವಂತೆ ರೈತರ ಆಕ್ರೋಶವನ್ನು ತಡೆಗಟ್ಟಿ ಆನೆಯನ್ನು ಶಾಂತ ರೀತಿ ಚಲಿಸುವಂತೆ ಮಾಡಲು ಸರ್ಕಾರ ಸೂಚಿಸಿದೆಯೇ ; ಸಿಬ್ಬಂದಿಗಳಿಗೆ ಸೂಕ್ತ ತರಬೇತಿಯನ್ನು ನೀಡಲಾಗಿದೆಯೇ ?

# ದೇವಸ್ಥಾನಕ್ಕೆ ವಿದ್ಯುತ್ ವ್ಯವಸ್ಥೆ ಮಾಡಿಕೊಡುವ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೯೨ (೧೩೮೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ದೇವಸ್ಥಾನಗಳು ಗ್ರಾಮ ಠಾಣಾ ಜಾಗ ಅಲ್ಲದೇ ಇರುವ ಸ್ಥಳಗಳು ಅಥವಾ ಸ್ವಂತ ಜಾಗದಲ್ಲಿ ನಿರ್ಮಿಸಿರುವ ದೇವಸ್ಥಾನಗಳಿಗೆ ನಿರಾಕ್ಷೇಪಣಾ ಪ್ರಮಾಣ ಪತ್ರ (ಗ್ರಾಮ ಪಂಚಾಯಿತಿಯಿಂದ ಎನ್ ಓ ಸಿ) ನೀಡಿಲ್ಲ ಎಂದು ವಿದ್ಯುತ್ ವ್ಯವಸ್ಥೆ ಒದಗಿಸಿಲ್ಲ ; ಇದಕ್ಕೆ ಪರಿಹಾರವಾಗಿ ಸರ್ಕಾರ ಯಾವ ರೀತಿ ವಿದ್ಯುತ್ ವ್ಯವಸ್ಥೆ ಕಲ್ಪಿಸಿಕೊಟ್ಟಿದೆ ;

(ಆ) ಹಾಸನ ಜಿಲ್ಲೆ ಬೇಲೂರು ತಾಲ್ಲೂಕು ಕುಶವಾರ ಪಂಚಾಯಿತಿ ವ್ಯಾಪ್ತಿಯ ಮೊಗಸಾವರ ಗ್ರಾಮದ ಶ್ರೀ ಭೂತಪ್ಪ ದೇವರಿಗೆ ವಿದ್ಯುತ್ ವ್ಯವಸ್ಥೆ ಕಲ್ಪಿಸಲು ವಿಳಂಭವಾಗುತ್ತಿರುವುದಕ್ಕೆ ಕಾರಣವೇನು ; (ಇಲ್ಲಿಯುವರೆಗೆ ಗ್ರಾಮಸ್ಥರು ನೀಡಿರುವ ಅರ್ಜಿಯನ್ನು ಲಗತ್ತಿಸುವುದು)

(ಇ) ಶ್ರೀ ಭೂತಪ್ಪ ಗುಡಿಗೆ ವಿದ್ಯುತ್ ಕಲ್ಪಿಸಲು ಗ್ರಾಮ ಪಂಚಾಯಿತಿಯಿಂದ ಎನ್ ಓ ಸಿ ಪಡೆಯಲಾಗಿದೆಯೇ ; ಈ ಗುಡಿಗೆ ಎಷ್ಟು ಕಂಬಗಳು ಬೇಕು ಎಂದು ಸ್ಕೆಚ್ ಮಾಡಲಾಗಿದೆಯೇ ; (ಅದರ ಸಂಪೂರ್ಣ ದಾಖಲೆಯ ಪತ್ರವನ್ನು ನೀಡುವುದು)

(ಈ) ಈ ಗುಡಿಗೆ ಯಾವ ಕಾಲಮಿತಿಯೊಳಗೆ ವಿದ್ಯುತ್ ವ್ಯವಸ್ಥೆ ಮಾಡಿಕೊಡಲಾಗುವುದು ; ಯಾವ ದಾಖಲಾತಿ ಕೊರತೆಯಿಂದ ಭೂತಪ್ಪ ಗುಡಿಗೆ ವಿದ್ಯುತ್ ನೀಡಲು ವಿಳಂಭವಾಗುತ್ತಿದೆ ;

(ಉ) ಹಾಸನ ಜಿಲ್ಲೆ ಬೇಲೂರು ತಾಲ್ಲೂಕು ಕುಶವಾರ ಗ್ರಾಮದಲ್ಲಿ ಲಿಂಕ್ ಲೈನ್ ೧೧ ಕೆವಿಎ ಲೈನ್ ಕುಶವಾರದಿಂದ ಕೌರಿ ಗ್ರಾಮದವರೆಗೆ ಖಾಸಗಿ ತೋಟಗಳ ಒಳಗೆ ಹಾದು ಹೋಗಿದ್ದು ಮಳೆಗಾಲದಲ್ಲಿ ವಿದ್ಯುತ್ ವ್ಯತ್ಯಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರಿಂದ ಶಾಲಾ ವಿದ್ಯಾರ್ಥಿಗಳಿಗೆ ಗ್ರಾಮದ ರೈತರಿಗೆ ಬಹಳ ತೊಂದರೆಯಾಗುತ್ತಿದ್ದು ಇದಕ್ಕೆ ಪರ್ಯಾಯವಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಯಾವ ಕಾಲಮಿತಿಯೊಳಗೆ ಇದಕ್ಕೆ ಸರ್ಕಾರದಿಂದ ಪರಿಹಾರ ನೀಡಲಾಗುತ್ತದೆ ? (ಸಂಪೂರ್ಣ ಮಾಹಿತಿ ದಾಖಲೆಯೊಂದಿಗೆ ನೀಡುವುದು)

## ರಾಯಚೂರು ಜಿಲ್ಲೆಯ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಕುರಿತು

**ಶ್ರೀ ಎ. ವಸಂತ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೫೩ (೧೪೨೩) ಮಾನ್ಯ ಶಾಲಾ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಒಟ್ಟು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ;

(ಆ) ಕುಸಿದು ಹೋಗುವ ಸ್ಥಿತಿಯಲ್ಲಿರುವ ಶಾಲಾ ಕಟ್ಟಡಗಳ ಸಂಖ್ಯೆ ಎಷ್ಟು ; ಅವುಗಳ ಮರು ನಿರ್ಮಾಣಕ್ಕೆ ಮಂಜೂರಾದ ಅನುದಾನ ಎಷ್ಟು ;

(ಇ) ಶಾಲೆಗಳಲ್ಲಿ ಶೌಚಾಲಯ, ಕುಡಿಯುವ ನೀರು ಮತ್ತು ವಿದ್ಯುತ್ ಸೌಲಭ್ಯಗಳ ಸ್ಥಿತಿ ಹೇಗಿದೆ ;

(ಈ) ಮಧ್ಯಾಹ್ನ ಊಟ (MDM) ಯೋಜನೆಯ ಅನುಷ್ಠಾನದಲ್ಲಿ ಪ್ರತಿ ವರ್ಷ ರಾಯಚೂರು ಜಿಲ್ಲೆಯ ಶಾಲೆಗಳಿಗೆ ವ್ಯಯವಾಗುವ ಒಟ್ಟು ಮೊತ್ತ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಅನುದಾನಿತ ಶಾಲಾ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆ ತುಂಬಲು ಅನುಮತಿ ನೀಡುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೧೨೯೪ (೧೩೩೫) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜನವರಿ ೨೦೧೬ ರಿಂದ ಮಾರ್ಚ್ ೨೦೨೪ ರವರೆಗೆ ರಾಜ್ಯ ಅನುದಾನಿತ ಪ್ರೌಢಶಾಲಾ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ಮರಣ, ರಾಜೀನಾಮೆಯಿಂದ ಖಾಲಿ ಆಗಿರುವ ಒಟ್ಟು ಖಾಲಿ ಹುದ್ದೆಗಳೆಷ್ಟು ; (ವಿವರ ನೀಡುವುದು)

(ಆ) ಜನವರಿ ೨೦೧೬ ರಿಂದ ಮಾರ್ಚ್ ೨೦೨೪ ರವರೆಗೆ ನಿವೃತ್ತಿ, ಮರಣ, ರಾಜೀನಾಮೆಯಿಂದ ಖಾಲಿ ಆಗಿರುವ ಹುದ್ದೆಗಳೆಷ್ಟು ; (ವಿವರ ನೀಡುವುದು)

(ಇ) ೨೦೧೫ಕ್ಕೂ ಮುನ್ನ ಅನುದಾನಿತ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳಲ್ಲಿ ಈಗಾಗಲೇ ಅನುಮತಿ ನೀಡಿ ವೇತನಾನುದಾನಕ್ಕೊಳಪಟ್ಟಿರುವ ಹುದ್ದೆಗಳೆಷ್ಟು ; ಇಲಾಖೆ ಅನುಮತಿ ನೀಡಿ ಇದುವರೆವಿಗೆ ವೇತನಾನುದಾನಕ್ಕೊಳಪಡಿಸುವ ಪ್ರಕ್ರಿಯೆಯನ್ನು ಪ್ರಾರಂಭಿಸದಿರಲು ಕಾರಣಗಳೇನು ;

(ಈ) ಡಿಸೆಂಬರ್ ೨೦೧೫ ರವರೆಗೆ ನಿವೃತ್ತಿ, ಮರಣ, ರಾಜೀನಾಮೆಯಿಂದ ಖಾಲಿ ಆಗಿರುವ ಎಲ್ಲಾ ಖಾಲಿ ಇರುವ ಹುದ್ದೆಗಳನ್ನು ತುಂಬಲು ಯಾವಾಗ ಅನುಮತಿ ನೀಡಲಾಗುತ್ತದೆ ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O182/500 ಪ್ರತಿಗಳು/27–02–2026